

## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

# ಕುಂಭಮೇಳ ಪ್ರವಾಸಾನುಭವ

ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ಅಗತ್ಯವಾದ ಮೂಲಭೂತ ಸೌಕರ್ಯಗಳನ್ನು ಸರ್ಕಾರ ಸಂಘಟನೆಗಳು ವ್ಯವಸ್ಥಿತವಾಗಿ ಮಾಡಿವೆ. ಒಟ್ಟು 25 ಸೆಕ್ಟರ್‌ಗಳಿವೆ. ಪ್ರತಿ ದಿನ ಕೋಟಿ ಕೋಟಿ ಜನರ ಪ್ರವಾಹವಿದ್ದರೂ ಶಾಂತಿಭಂಗವಿಲ್ಲ, ಬಯಲ ಬಹಿರ್ದೆಶೆ ಕಣ್ಣಿಗೆ ಬೀಳಲಿಲ್ಲ. ಹಸಿವಿನ ಹಾಹಾಕಾರ ತೋರಲಿಲ್ಲ. ನೀರಿನ ಕೊರತೆಯಂತೂ ಇಲ್ಲವೇ ಇಲ್ಲ. ವಿಮಾನ ಯಾನ ತುಂಬಾ ದುಬಾರಿಯಾಗಿ ಹಣದ ಸುಲಿಗೆ ನಡೆಯಿತು. ರೇಲ್ವೆಗಳಲ್ಲಿ ಸೀಟು ಸಿಗದಾದವು. ರೈಲುನಿಲ್ದಾಣದ ಪ್ರವೇಶ ಬಹು ಕಷ್ಟ. ರೈಲು ತಪ್ಪಿಸಿಕೊಂಡವರು ಅನೇಕ. ರೈಲು ನಿಲ್ದಾಣಗಳ ಹೊರ ಬಯಲಿನಲ್ಲಿ ಸಾವಿರ ಸಾವಿರ ಜನ ಚಳಿಯಲ್ಲಿ ಮಲಗಿದ್ದು ಕಂಡುಬಂತು. ದೆಹಲಿಯ ರೈಲುನಿಲ್ದಾಣದ ಕಾಲ್ತುಳಿತದಲ್ಲಿ ಹದಿನೆಂಟು ಜನರ ಮೃತ್ಯು. ದೇಶದೆಲ್ಲೆಡೆ ಪ್ರಯಾಣದ ನೂಕು ನುಗ್ಗಲು. ಬಹು ದೂರದಿಂದ ಕಾರ್ ಪ್ರಯಾಣ, ರಸ್ತೆ ಜಾಮ್. ಪ್ರಯಾಗರಾಜ್‌ನಲ್ಲಿ ವಿಮಾನ ರೈಲು ಬಸ್ ನಿಲ್ದಾಣ ಹಾಗೂ ಸಂಗಮಗಳ ನಡುವೆ ಸಾರ್ವಜನಿಕ ಸಾರಿಗೆ ಇಲ್ಲದಿರುವುದು, ಆಟೋ ಟ್ಯಾಕ್ಸಿಗಳ ಕೊರತೆ, ಆಟೋ ದ್ವಿಚಕ್ರ ವಾಹನ ಸವಾರರ ಸುಲಿಗೆಗೆ ಅವಕಾಶ. 16 ರ ನಸುಕಿನ 1.40 ಕ್ಕೆ ಪ್ರಯಾಗರಾಜ್ ಚೌಕಿ ನಿಲ್ದಾಣದಿಂದ ಬೆಂಗಳೂರಿಗೆ ನಮ್ಮ ರೈಲು. ನಾವು ಹೋದದ್ದು ಪ್ರಯಾಗರಾಜ್ ಜಂಕ್ಷನ್ ಗೆ. ನೈಜ ಗೊತ್ತಾದದ್ದು 12.30 ಕ್ಕೆ. ನಮ್ಮೊಂದಿಗೆ ಸ್ವಾಮೀಜಿ ನೀಡಿದ್ದ ರಗ್ಗುಗಳ ದೊಡ್ಡ ದೊಡ್ಡ ಬ್ಯಾಗಗಳು. ಎದ್ದೋ ಬಿದ್ದೋ ಹೊರಬಂದು ರಗ್ಗುಬ್ಯಾಗ್ ಬಿಟ್ಟು ದ್ವಿಚಕ್ರ ವಾಹನದಲ್ಲಿ ಚೌಕಿ ನಿಲ್ದಾಣ ತಲುಪಿ ತಡವಾಗಿ ಬಂದ ರೈಲು ಹತ್ತಿ ಬೆಂಗಳೂರು ತಲುಪಲಿದೆವು.

# ಬೆಂ. ದಕ್ಷಿಣ-ಪಶ್ಚಿಮ ಸಂಪರ್ಕಿಸುವ ಟೋಲ್ ಫ್ರೀ ದಶಪಥ ರಸ್ತೆ ಸಂಚಾರಕ್ಕೆ ಮುಕ್ತ

**ಯೋಜನೆಗಾಗಿ 321.1 ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಆರಂಭದಲ್ಲಿ ಅಡೆತಡೆ ಉಂಟಾಗಿತ್ತು ಇದೀಗ ಬಿಡಿಎ ಅರಣ್ಯ ಇಲಾಖೆಯ ತಡೆ ಎದುರಿಸುತ್ತಿದ್ದು, ಸುಳಿಕೆರೆ ಮೀಸಲು ಅರಣ್ಯದ ಒಂದು ಮೂಲೆಯಲ್ಲಿ 2 ಎಕರೆ ಭೂಮಿಯನ್ನು ಬಳಸಲು ಅರಣ್ಯ ಇಲಾಖೆ ಇನ್ನೂ ಅನುಮತಿ ನೀಡಿಲ್ಲ.**

**ಶುಲ್ಕ ತಪ್ಪಿಸಲು ಪರ್ಯಾಯ ಮಾರ್ಗ**

• ಉದಯವಾಹಿನಿ, ಬೆಂಗಳೂರು

ನಗರದ ದಕ್ಷಿಣ ಮತ್ತು ಪಶ್ಚಿಮ ಭಾಗಗಳನ್ನು ಸಂಕ್ಷಿಪ್ತವಾಗಿ ಸಂಪರ್ಕಿಸುವ 10.8 ಕಿ.ಮೀ. ಉದ್ದದ ಪ್ರಮುಖ ದಶಪಥ ರಸ್ತೆ (ಮೇಜರ್ ಅರ್ಟೀರಿಯಲ್ ರೋಡ್ ಒಂಖ) ಎರಡು ತಿಂಗಳಲ್ಲಿ ಸಿದ್ಧವಾಗಲಿದೆ.

ಈ ದಶಪಥ ರಸ್ತೆಯು ಚಲ್ಲಘಟ್ಟ (ನಮ್ಮ ಮೆಟ್ರೋ ಡಿಪೋ) ದಿಂದ ಮಾಗಡಿ ರಸ್ತೆಯ ಕಡಬಗೆರೆ ಕ್ರಾಸ್ ವರೆಗೆ ವಿಸ್ತರಿಸಿದೆ. ಇದು ನೈಸ್ ರಸ್ತೆಗೆ ಸಮಾನಾಂತರವಾಗಿ ಸುಮಾರು 2 ಕಿ.ಮೀ. ದೂರದಲ್ಲಿದೆ.

ಈ ರಸ್ತೆ ಬಿಡಿಎಯ ನಾಡಪ್ರಭು ಕೆಂಪೇಗೌಡ ಲೇಔಟ್ ಸಂಪರ್ಕ ಕಲ್ಪಿಸುವುದರ ಜೊತೆಗೆ, ದಕ್ಷಿಣ ಮತ್ತು ಪಶ್ಚಿಮ ಬೆಂಗಳೂರಿನ ನಡುವಿನ ಪ್ರಯಾಣದ ಸಮಯವನ್ನು 1.5 ಗಂಟೆಯಿಂದ 10 ನಿಮಿಷಗಳಿಗೆ ಇಳಿಸುವ ನಿರೀಕ್ಷೆಯಿದೆ. ಆರಂಭದಲ್ಲಿ 465 ಕೋಟಿ ರೂ. ವೆಚ್ಚದಲ್ಲಿ ಯೋಜಿಸಲಾಗಿದ್ದ ಈ ರಸ್ತೆ ಯೋಜನೆ ಈಗ 585 ಕೋಟಿ ರೂ. ವೆಚ್ಚವಾಗಿದ್ದು, ಶೀಘ್ರದಲ್ಲೇ ಪೂರ್ಣಗೊಳ್ಳುತ್ತಿದೆ. ಬಿಡಿಎ ನಿರ್ಮಿಸುತ್ತಿರುವ ಈ ರಸ್ತೆಯು ಕಂಬಿಪುರ, ಕೆ. ಕೃಷ್ಣ ಸಾಗರ, ಭೀಮನಕುಪ್ಪೆ, ಕೊಮ್ಮಘಟ್ಟ, ಕೆಂಚನಪುರ ಮತ್ತು ಸುಳಿಕೆರೆ ಗ್ರಾಮಗಳ ಮೂಲಕ ಹಾದುಹೋಗುತ್ತದೆ.

ಓರ್ವ ಬಿಡಿಯ ಇಂಜಿನಿಯರ್ ಪ್ರಕಾರ, ರೈಲ್ವೆ ಅಂಡರ್‌ಪಾಸ್‌ನ ಕೆಲಸ ಭರದಿಂದ ಸಾಗುತ್ತಿದೆ. ಚಲ್ಲಘಟ್ಟ ಮೆಟ್ರೋ ಡಿಪೋ ಕಾಮಗಾರಿ ಪೂರ್ಣಗೊಳ್ಳುವವರೆಗೆ ಕಾಯುತ್ತಿದ್ದೇವೆ. ಇದರಿಂದ ಮೈಸೂರು ರಸ್ತೆ ಬದಿಯಲ್ಲಿ ಸುಮಾರು 300 ಮೀಟರ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸಾಧ್ಯವಾಗುತ್ತದೆ. ಮುಂದಿನ ಎರಡು ತಿಂಗಳಲ್ಲಿ ಈ ಸಮಸ್ಯೆಗಳು ಬಗೆಹರಿಯುತ್ತವೆ ಮತ್ತು ಪ್ರಮುಖ ಮುಖ್ಯರಸ್ತೆ ಸಂಚಾರಕ್ಕೆ ಮುಕ್ತವಾಗಲಿದೆ ಎಂದು ಹೇಳಿದ್ದಾರೆ. ದಶಪಥ ರಸ್ತೆಗೆ ಭೂಸ್ವಾಧೀನವನ್ನು ಜುಲೈ 27, 2011 ರಂದು ಅಧಿಸೂಚಿಸಲಾಗಿತ್ತು. ಆದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸೆಪ್ಟೆಂಬರ್ 2017 ರಲ್ಲಿ ಯೋಜನೆಗೆ ಟೆಂಡರ್‌ಗಳನ್ನು ಕರೆದು, 2018 ರಲ್ಲಿ ಕಾಮಗಾರಿ ಪ್ರಾರಂಭವಾಯಿತು. ಯೋಜನೆಯನ್ನು ಪೂರ್ಣಗೊಳಿಸಲು ಆರಂಭಿಕ ಗಡುವು ಆಗಸ್ಟ್ 2019 ಎಂದು ಕೊಡಲಾಗಿತ್ತು. ಈ ರಸ್ತೆಯು ಕಂಬಿಪುರ, ಕೆ. ಕೃಷ್ಣ ಸಾಗರ, ಭೀಮನಕುಪ್ಪೆ, ಕೊಮ್ಮಘಟ್ಟ, ಕೆಂಚನಪುರ ಮತ್ತು ಸುಳಿಕೆರೆ ಗ್ರಾಮಗಳ ಮೂಲಕ ಹಾದುಹೋಗುತ್ತದೆ. ನೈಸ್ ರಸ್ತೆಯ ಟೋಲ್ ಶುಲ್ಕ ತಪ್ಪಿಸಲು ಈ ರಸ್ತೆ ಪರ್ಯಾಯ ಮಾರ್ಗವಾಗಿದೆ. ಇದರಿಂದ ಸಂಚಾರ ದಟ್ಟಣೆ ಕಡಿಮೆಯಾಗುತ್ತದೆ ಎಂದೂ ನಿರೀಕ್ಷಿಸಲಾಗಿದೆ.



# ಪರಸ್ತ್ರೀಯೊಂದಿಗೆ ಪತಿ ಲವ್ವಿಡವ್ವಿ: ಮಗಳನ್ನ ಕೊಂದು ಆತ್ಮಹತ್ಯೆಗೆ ಶರಣಾದ ತಾಯಿ

• ಉದಯವಾಹಿನಿ, ಬೆಂಗಳೂರು

ಪತಿಯ ಅನೈತಿಕ ಸಂಬಂಧಕ್ಕೆ ಬೇಸತ್ತು ಅಧ್ಯಕ್ಷೆಯೂ ಆಗಿರುವ ಪತ್ನಿ ನೇಣಿಗೆ ಶರಣಾಗಿರುವ ಘಟನೆ ಬೆಂಗಳೂರಿನ ರಾಮಯ್ಯ ಲೇಔಟ್ ನಡೆದಿದೆ. ಶ್ರುತಿ(33) ಆತ್ಮಹತ್ಯೆಗೆ ಶರಣಾದ ಮಹಿಳೆ. ಶ್ರುತಿ ಮೊದಲು ತನ್ನ ಐದು ವರ್ಷದ ಮಗಳು ರೋಷಿಣಿಯನ್ನು ಕೊಂದು ಬಳಿಕ ತಾನೂ ಸಹ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾರೆ. ಆಟವಾಡಲು ಹೊರಹೋಗಿದ್ದ ಪುತ್ರ ಮನೆಗೆ ಬಂದಾಗ ಈ ಘಟನೆ ಬೆಳಕಿಗೆ ಬಂದಿದೆ. ಇನ್ನು ಆತ್ಮಹತ್ಯೆಗೆ ಮುನ್ನ ಶ್ರುತಿ ಡೆತ್‌ನೋಟ್ ಬರೆದಿಟ್ಟಿದ್ದು, ಡೆತ್‌ನೋಟ್‌ನಲ್ಲಿ ಗಂಡ ಪರಸ್ತ್ರೀಯೊಂದಿಗಿನ ಅನೈತಿಕ ಸಂಬಂಧದ ಹೊಂದಿರುವ ಬಗ್ಗೆ ಉಲ್ಲೇಖಿಸಿದ್ದಾರೆ. 10 ವರ್ಷದ ಹಿಂದೆ ಶ್ರುತಿ ಚಾರ್ಟರ್ಡ್ ಅಕೌಂಟೆಂಟ್ ಜತೆ ಮದುವೆಯಾಗಿದ್ದರು. ಅಲ್ಲದೇ ಶ್ರುತಿ ಗ್ರಾಮ ಪಂಚಾಯಿತಿ ಒಂದರ ಅಧ್ಯಕ್ಷೆಯಾಗಿದ್ದು, ಒಂದು ಹೆಣ್ಣು ಒಂದು ಗಂಡು ಮಗು ಸಹ ಇದೆ. ಆದ್ರೆ, ಗಂಡನ ಅನೈತಿಕ ಸಂಬಂಧಕ್ಕೆ ಬೇಸತ್ತು ಶ್ರುತಿ, ಪುತ್ರಿ ರೋಹಿಣಿಯನ್ನು ಕೊಂದು ಬಳಿಕ ತಾನೂ ಸಹ ನೇಣಿಗೆ ಶರಣಾಗಿದ್ದಾರೆ. ಇನ್ನು ಗಂಡು ಮಗು ಆಟವಾಡಲು ಮನೆಬಿಟ್ಟು ಆಚೆ ಹೋಗಿದ್ದರಿಂದ ಆ ಕಂದ ಬಚಾವ್ ಆಗಿದೆ.

# 9 ವಿಶ್ವವಿದ್ಯಾಲಯ ಮುಚ್ಚಲು ತೀರ್ಮಾನ

• ಉದಯವಾಹಿನಿ, ಬೆಂಗಳೂರು

ಪದವೀಧರರಿಗೆ ಯುವ ನಿಧಿ ಗ್ಯಾರಂಟಿ ಘೋಷಿಸಿದ ರಾಜ್ಯ ಕಾಂಗ್ರೆಸ್ ಸರ್ಕಾರ, ಇದೀಗ ಅದೇ ಪದವೀಧರರನ್ನು ರೂಪಿಸುವ ವಿಶ್ವವಿದ್ಯಾಲಯಗಳನ್ನೇ ಮುಚ್ಚಲು ಹೊರಟಿದ್ದು ಅಕ್ಷಮ್ಯ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಕಿಡಿ ಕಾರಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕರ್ನಾಟಕದಾದ್ಯಂತ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಕಲ್ಪಿಸಲು 10 ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿದರೆ, ಕಾಂಗ್ರೆಸ್ ಸರ್ಕಾರ ಅವನ್ನು ಮುಚ್ಚುವ ಮೂಲಕ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಕನಸಿಗೆ ಕೊಳ್ಳಿಯಿಡುತ್ತಿದೆ ಎಂದು ವಾಗ್ದಾಳಿ ನಡೆಸಿದರು. ಶಿಕ್ಷಣ ಸರ್ವರ ಮೂಲಭೂತ ಹಕ್ಕು. ಆದರೆ, ರಾಜ್ಯ ಸರ್ಕಾರ ಇದನ್ನು ಕಸಿದುಕೊಳ್ಳುತ್ತಿದೆ. ಒಂದೆಡೆ ಅರೆಬರೆ ಯುವ ನಿಧಿ ನೀಡುತ್ತ, ಇನ್ನೊಂದೆಡೆ ವಿದ್ಯಾರ್ಥಿಗಳ ಶಿಕ್ಷಣ ಮೊಟಕುಗೊಳಿಸಲು ನೋಡುತ್ತಿದೆ. ಇದರಿಂದಾಗಿ ಶಿಕ್ಷಣದ ಮೂಲಭೂತ ಹಕ್ಕಿಗೆ ಕೊಡಲಿ ಪೆಟ್ಟು ಬೀಳುತ್ತಿದೆ, ರಾಜ್ಯ ಕಾಂಗ್ರೆಸ್ ಸರ್ಕಾರ ವಿವಿಗಳನ್ನೂ ಆದಾಯದ ಮೂಲ ಮತ್ತು ಒಂದು ಸರಕನ್ನಾಗಿ ನೋಡುತ್ತಿರುವುದು ಖಂಡನೀಯ. ವಿವಿಗಳು ಆರ್ಥಿಕ ಮತ್ತು ಅಗತ್ಯ ಭೂಮಿಯ ಕೊರತೆ ಎದುರಿಸುತ್ತಿವೆ ಎಂಬ ಕುಂಟು ನೆಪವೊಡ್ಡುವ ಈ ಸರ್ಕಾರವೇ ಮೊದಲು ಆರ್ಥಿಕ ಸಂಕಷ್ಟದಲ್ಲಿದೆ. ಹಾಗಾಗಿ ಇಂಥ ಕ್ರಮಕ್ಕೆ ಮುಂದಾಗುತ್ತಿದೆ ಎಂದು ಟೀಕಿಸಿದರು.

# ನಮ್ಮ ಮೆಟ್ರೋ ದರ ಏರಿಕೆಗೆ ಶಿಫಾರಸು ಮಾಡಿದ್ದು ರಾಜ್ಯ ಸರ್ಕಾರ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ದರ ಏರಿಕೆಗೆ ಜನರ ಆಕ್ರೋಶ ವ್ಯಕ್ತವಾಗುತ್ತಿದ್ದು, ಈ ನಡುವೆ ಸರ್ಕಾರ ಹಾಗೂ ವಿರೋಧ ಪಕ್ಷಗಳ ನಡುವೆ ಹಗ್ಗಜಗ್ಗಾಟ ಶುರುವಾಗಿದೆ. ಈ ಸಂಬಂಧ ಪ್ರತಿಕ್ರಿಯೆ ನೀಡಿರುವ ಮಾಜಿ ಸಿಎಂ ಹಾಗೂ ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಅವರು, ಮೆಟ್ರೊ ದರ ಏರಿಕೆಗೆ ರಾಜ್ಯ ಸರ್ಕಾರವೇ ಶಿಫಾರಸು ಮಾಡಿದೆ. ಮುಖ್ಯಮಂತ್ರಿಗಳು ದರ ಏರಿಕೆ ವಿಚಾರವಾಗಿ ನಿರ್ದೇಶನ ಕೊಟ್ಟಿರುವುದೇ ಅದಕ್ಕೆ ಸಾಕ್ಷಿ. ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿರುವುದರಿಂದ ಎಲ್ಲದರ ಏರಿಕೆ ಮಾಡುತ್ತಿದೆ ಎಂದು ಆರೋಪಿಸಿದರು. ಮೆಟ್ರೋ ದರ ವಿಚಾರದಲ್ಲಿ ಎಲ್ಲಾ ಅಧಿಕಾರ ರಾಜ್ಯ ಸರ್ಕಾರಕ್ಕೆ ಇರುತ್ತದೆ. ಅದರಲ್ಲಿ ರಾಜ್ಯದ ಅಧಿಕಾರಿಗಳಿರುತ್ತಾರೆ. ಅದಕ್ಕೆ ರಾಜ್ಯ ಸರ್ಕಾರವೇ ಶಿಫಾರಸ್ಸು ಮಾಡಿದೆ. ಮುಖ್ಯ ಮಂತ್ರಿಗಳು ದರ ಏರಿಕೆ ವಿಚಾರವಾಗಿ ನಿರ್ದೇಶನ ಕೊಟ್ಟಿರುವುದೇ ಅದಕ್ಕೆ ಸಾಕ್ಷಿ ಎಂದು ಹೇಳಿದರು.

# ಶಾಸಕರಾದ ಎಸ್.ಸುರೇಶ್ ಕುಮಾರ್‌ರವರ ನೇತೃತ್ವದಲ್ಲಿ ಜನರೊಂದಿಗೆ ಜನಸೇವಕ ಜನಸ್ಪಂದನಾ ಕಾರ್ಯಕ್ರಮ

■ ಬೇಸಿಗೆ ಕಾಲ, ನದಿಪಾತ್ರದಲ್ಲಿ ನೀರಿಲ್ಲ, ನೀರು ಅಮೂಲ್ಯ ಮಿತವಾಗಿ ಬಳಸಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಅಧಿಕಾರಿಗಳ ಸಮ್ಮುಖದಲ್ಲಿ ನಿವಾರಣೆ**

ರಾಜಾಜಿನಗರ ವಿಧಾನಸಭಾ ಕ್ಷೇತ್ರ ಜನರೊಂದಿಗೆ ಜನಸೇವಕ ಜನಸ್ಪಂದನಾ ಕಾರ್ಯಕ್ರಮ ಶಾಸಕರಾದ ಎಸ್.ಸುರೇಶ್ ಕುಮಾರ್ ರವರ ನೇತೃತ್ವದಲ್ಲಿ ರಾಜಾಜಿನಗರ ಶಾಸಕರ ಜನಸಂಪರ್ಕ ಕಛೇರಿಯ ಆವರಣದಲ್ಲಿ ಜರುಗಿತು.

ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಏಳು ವಾರ್ಡ್ ಗಳಲ್ಲಿ ವಾಸಿಸುವ ನಿವಾಸಿಗಳು ಮೂಲಭೂತ ಸಮಸ್ಯೆಗಳ ಕುರಿತು ಜನರೊಂದಿಗೆ ಜನಸೇವಕ ಕಾರ್ಯಕ್ರಮ ದಲ್ಲಿ ಭಾಗವಹಿಸಿ ಶಾಸಕರನ್ನು ನೇರ ಮಾಡಿ ತಮ್ಮ ಸಮಸ್ಯೆಗಳನ್ನು ನೇರವಾಗಿ ಅಹವಾಲು ಸಲ್ಲಿಸಿ, ಪರಿಹಾರಿಸಿಕೊಳ್ಳುವ ಜನಸ್ಪಂದನಾ ಕಾರ್ಯಕ್ರಮ.

ಎಸ್.ಸುರೇಶ್ ಕುಮಾರ್ ರವರು ಮಾತನಾಡಿ ಜನರೊಂದಿಗೆ ಜನಸೇವಕ ಜನಸ್ಪಂದನಾ ಕಾರ್ಯಕ್ರಮ ಪ್ರತಿ ಸೋಮವಾರ ನಡೆಯುತ್ತಿದೆ. 6ನೇ ವಾರದ ಜನಸ್ಪಂದನಾ ಕಾರ್ಯಕ್ರಮ ಜನರಿಂದ ಉತ್ತಮ ಸ್ಪಂದನೆ ಸಿಗುತ್ತಿದೆ. ಸಾರ್ವಜನಿಕರ ಸಮಸ್ಯೆಗಳಿಗೆ ತತಕ್ಷಣ ಪರಿಹಾರ ಸಿಗಬೇಕು, ಎಂದು ಜನರನ್ನು ನೇರ ಮಾಡಿದಾಗ ಸಮಸ್ಯೆಗಳ ಕುರಿತು ಅಧಿಕಾರಿಗಳ ಸಮ್ಮುಖದಲ್ಲಿ ನಿವಾರಣೆ ಮಾಡಲಾಗುತ್ತಿದೆ.

ಕಸವಿಲೇವಾರಿ, ಇ.ಖಾತ ಮತ್ತು ನೀರಿನ ಸಮಸ್ಯೆ ಹಾಗೂ ರಸ್ತೆ ಗುಂಡಿ ಪಿಂಚಣಿ ಸೌಲಭ್ಯ ಹಾಗೂ ರಸ್ತೆ ಡಾಂಬರೀಕರಣಕ್ಕೆ ಮನವಿ ಹಾಗೂ ವೈದ್ಯಕೀಯ ನೆರವು ಸಾರ್ವಜನಿಕರಿಂದ ಈ ವಿಷಯಗಳು ಕುರಿತು ಹೆಚ್ಚಿನ ದೂರುಗಳು ಬರುತ್ತಿದೆ.

ಫೆಬ್ರವರಿ ತಿಂಗಳು ಬಿಸಿಲಿನ ತಾಪ ಹೆಚ್ಚಾಗಿದೆ ಮತ್ತು ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದೆ. ಬೋರ್ ವೆಲ್ ಗಳು ಒತ್ತಿಹೋಗಿದೆ ಮತ್ತು ಕೆಲವು ಬೋರ್ ವೆಲ್ ಗಳಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿದೆ.


ಮಂಡಲದ ಅಧ್ಯಕ್ಷರಾದ ಸುದರ್ಶನ್, ಪ್ರಧಾನ ಕಾರ್ಯದರ್ಶಿ ಗಿರೀಶ್ ಗೌಡ, ಮಾಜಿ ಉಪಮಹಾಪೌರರಾದ ರಂಗಣ್ಣ, ಮಾಜಿ ಮಹಾನಗರ ಪಾಲಿಕೆ ಸದಸ್ಯರುಗಳಾದ ಎಂ.ಮುನಿರಾಜು, ರಾಜಣ್ಣ, ಹೆಚ್.ಆರ್.ಕೃಷ್ಣಪ್ಪ, ದೀಪಾ ನಾಗೇಶ್, ಪ್ರತಿಮಾ, ಬಿಜೆಪಿ ಮುಖಂಡರುಗಳಾದ ಯಶಸ್ ನಾಯಕ್, ಅಮಿತ್ ಜೈನ್, ವಿಶ್ವನಾಥ, ಟಿ.ಎನ್.ರಮೇಶ್, ಉಮೇಶ್, ಗೌತಮ್, ಪ್ರವೀಣ್, ಮೋಹನ್ ರಾಜ್, ಕೃಷ್ಣಮೂರ್ತಿ ಮತ್ತು ಬಿಬಿಎಂಪಿ ಇಂಜನಿಯರ್ ವಿಭಾಗ, ಆರೋಗ್ಯ, ಕಂದಾಯ, ತೋಟಗಾರಿಕೆ ಅರಣ್ಯ ಘಟಕ ಮತ್ತು ಪೊಲೀಸ್ ಇಲಾಖೆ, ಬೆಸ್ಕಾಂ ಹಾಗೂ ಜಲಮಂಡಳಿ ಅಧಿಕಾರಿಗಳು ಭಾಗವಹಿಸದ್ದರು.

**ಬೇಸಿಗೆ ಕಾಲ, ಕಾವೇರಿ ನದಿ ಪಾತ್ರದಲ್ಲಿ ನೀರಿಲ್ಲ ಸಾರ್ವಜನಿಕರು ನೀರು ಅಮೂಲ್ಯ ಮಿತವಾಗಿ ಬಳಸಿ. ಬೆಂಗಳೂರು ಬೆಳೆಯುತ್ತಿದೆ. ಸಮಸ್ಯೆಗಳು ನಿರಂತರ ಶಾಶ್ವತ ಪರಿಹಾರ ಸಿಗಬೇಕು ಹಾಗೂ ಮೂಲಭೂತ ಸಮಸ್ಯೆಗಳು ಬೇಗನೆ ಪರಿಹಾರ ವಾಗಬೇಕು ಎಂದು ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.**

# ನಾನು ಸದಾ ರೈತರ ಪರ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ರೈತರ ಬೇಡಿಕೆಗಳನ್ನು ನಿರಂತರವಾಗಿ ಈಡೇರಿಸುತ್ತಲೇ ಬಂದಿದೆ. ನಾವು ಸದಾ ರೈತ ಕುಲದ ಪರವಾಗಿ ಇರುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ರೈತರ ಸಂಘಟನೆಯ ಪ್ರತಿನಿಧಿಗಳು ಹಾಗೂ ರೈತ ಮುಖಂಡರೊಂದಿಗೆ 2025-26ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಆರಂಭಿಕವಾಗಿ ಮಾತನಾಡಿದ ಮುಖ್ಯಮಂತ್ರಿಗಳು, ಅತಿ ಹೆಚ್ಚು ಉದ್ಯೋಗ ಸೃಷ್ಟಿಯಾಗುವುದು ಕೃಷಿಯಲ್ಲೇ ಹಾಗಾಗಿ ರೈತರ ಬೇಡಿಕೆಗಳಿಗೆ ನನ್ನ ಪ್ರಥಮ ಆದ್ಯತೆ ಇರುತ್ತದೆ ಎಂದರು. ಸರ್ಕಾರ ರೈತರ ಬೇಡಿಕೆಗಳನ್ನು ನಿರಂತರವಾಗಿ ಈಡೇರಿಸುತ್ತಲೆ ಬಂದಿದೆ ಎಂದು ಅವರು ಹೇಳಿದರು. ಸಭೆಯ ಆರಂಭದಲ್ಲಿ ವಿವಿಧ ರೈತ ಸಂಘದ ಸಂಘಟನೆಗಳ ಪ್ರತಿನಿಧಿಗಳು, ಈ ಬಜೆಟ್‌ನಲ್ಲಿ ರೈತರಿಗೆ ಆಗಬೇಕಾಗಿರುವ ನೆರವು, ಕಾರ್ಯಕ್ರಮಗಳ ಘೋಷಣೆ ಬಗ್ಗೆ ಮನವಿ ಪತ್ರ ಸಲ್ಲಿಸಿದರು.



ಸುಗ್ರೀವಾಜ್ಞೆ ಮೂಲಕ ಮೈಕ್ರೋ ಫೈನಾನ್ಸ್‌ಗಳ ಬಲವಂತದ ವಸೂಲಿಗೆ ಕಡಿವಾಣ ಹಾಕಿದ್ದಕ್ಕೂ ರೈತ ಮುಖಂಡರುಗಳು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಇದೇ ಸಂದರ್ಭದಲ್ಲಿ ಅಭಿನಂದಿಸಿದರು.

# ಫೆ.18ರಂದು ವಿದ್ಯಾರ್ಥಿಗಳ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಮತ್ತೆ ಮರುಪರೀಕ್ಷೆಗೆ ಆಗ್ರಹ**

ಕರ್ನಾಟಕ ಸಾರ್ವಜನಿಕ ಸೇವಾ ಆಯೋಗ (ಕೆಪಿಎಸ್‌ಸಿ) ನಡೆಸಿದ ಕೆಎಎಸ್ ಪರೀಕ್ಷೆಗಳಲ್ಲಿನ ಕನ್ನಡ ಪ್ರಶ್ನೆಪತ್ರಿಕೆಗಳಲ್ಲಿ ಮತ್ತೆ ತಪ್ಪುಗಳಾಗಿದ್ದು, ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗಿದೆ ಎಂಬ ಮಾತುಗಳು ಕೇಳಿ ಬರುತ್ತಿವೆ. ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆ ಅನ್ಯಾಯವಾಗಿದ್ದು, ಇವರಿಗೆ ನ್ಯಾಯ ದೊರಕಿಸಲು ಮತ್ತೊಮ್ಮೆ ಪರೀಕ್ಷೆ ನಡೆಸಬೇಕು. ಪ್ರಶ್ನೆಪತ್ರಿಕೆಗಳಲ್ಲಿ ಮತ್ತೆ ತಪ್ಪುಗಳಾಗದಂತೆ ಎಚ್ಚರಿಕೆ ವಹಿಸಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಆಗ್ರಹಿಸಿದೆ. ಅಲ್ಲದೆ, ಫೆಬ್ರವರಿ 18ರಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆಯನ್ನೂ ಹಮ್ಮಿಕೊಂಡಿದೆ. ಲೇಖಕ ಬರಗೂರು ರಾಮಚಂದ್ರಪ್ಪ ಅವರು ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದು, ಕನ್ನಡದಲ್ಲಿ ಪರೀಕ್ಷೆ ಬರೆದ ವಿದ್ಯಾರ್ಥಿಗಳಲ್ಲಿ ಕೇವಲ ಶೇ.15 ರಿಂದ 20 ರಷ್ಟು ವಿದ್ಯಾರ್ಥಿಗಳು ಮಾತ್ರ ಉತ್ತೀರ್ಣರಾಗಿದ್ದಾರೆಂದು ಹೇಳಿದ್ದು, ತಾರತಮ್ಯದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಆಗಸ್ಟ್ 27, 2024 ರಂದು 384 ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳ ನೇಮಕಾತಿಗಾಗಿ ಪರೀಕ್ಷೆ ನಡೆಸಲಾಗಿತ್ತು. ಈ ಪರೀಕ್ಷೆ ವಿವಾದ ಸೃಷ್ಟಿಸಿತ್ತು. ಕನ್ನಡ ಆವೃತ್ತಿಯ ಪ್ರಶ್ನೆ ಪತ್ರಿಕೆಯಲ್ಲಿ ದೋಷಗಳಿವೆ ಎಂದು ಆರೋಪಿಸಲಾಗಿತ್ತು, ಇದು ವಿದ್ಯಾರ್ಥಿಗಳಿಂದ ಪ್ರತಿಭಟನೆಗೆ ಕಾರಣವಾಯಿತು.

**ಕನ್ನಡ ಅಭಿವೃದ್ಧಿ ಪ್ರಾಧಿಕಾರ (ಕೆಡಿಎ) ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಅವರು ಮಾತನಾಡಿ, ಪ್ರಾಧಿಕಾರವು ಈ ವಿಷಯವನ್ನು ರಾಜ್ಯ ಸರ್ಕಾರದೊಂದಿಗೆ ಚರ್ಚಿಸಲಿದೆ ಎಂದು ಹೇಳಿದರು. ಕೆಪಿಎಸ್‌ಸಿ ನಿಖರತೆಯನ್ನು ಖಚಿತಪಡಿಸಿಕೊಳ್ಳಲು ರಾಜ್ಯದ ಅನುವಾದ ವಿಭಾಗವನ್ನು ಒಳಗೊಳ್ಳಬೇಕಾಗಿತ್ತು. ಇದು ಹೀಗೆಯೇ ಮುಂದುವರಿದರೆ, ಈ ಪರೀಕ್ಷೆಗಳನ್ನು ನಡೆಸುವ ಜವಾಬ್ದಾರಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ (ಕೆಇಎ) ವಹಿಸಬೇಕೆಂದು ಸೂಚಿಸಬೇಕಾಗಬಹುದು ಎಂದೂ ತಿಳಿಸಿದರು,**

# ಬಿಜೆಪಿಯ ಮುಖ್ಯಮಂತ್ರಿಗಳು ಸಿಟಿ ರೌಂಡ್ ಮಾಡಿದ್ದು ಫೋಟೋಶೂಟಿಗಾ

• ಉದಯವಾಹಿನಿ, ಬೆಂಗಳೂರು

ಈ ಹಿಂದೆ ಬಿಜೆಪಿಯ ಮುಖ್ಯಮಂತ್ರಿಗಳು ಬೆಂಗಳೂರು ಪ್ರದರ್ಶನ ಹಾಕಿದ್ದು, ಫೋಟೋಶೂಟ್ ಮಾಡಲಿಕ್ಕಾ ಆಗ ಅಶೋಕ್ ಅವರು ಅವರ ಕಾರಿನಲ್ಲಿ ಕೂತು ಹೋಗುತ್ತಿದ್ದರಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದರು. ನಿಮ್ಮ ಬೆಂಗಳೂರು ಸಿಟಿ ರೌಂಡ್ ಅನ್ನು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಫೋಟೋ ಶೂಟ್ ಎಂದು ಟೀಕಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ''ಬಿಜೆಪಿವರು ಇರುವುದೇ ಟೀಕೆ ಮಾಡಲು. ಬಿಜೆಪಿಗೆ ಬೇರೆ ಏನು ಕೆಲಸ ಇದೆ.

ನಾವು ನಮ್ಮ ಕರ್ತವ್ಯ ಮಾಡುತ್ತಿದ್ದೇವೆ. ಇದು ದೊಡ್ಡ ಮೊತ್ತದ ಯೋಜನೆ, ಇದರ ಗುಣಮಟ್ಟ ಸರಿಯಾಗಿದೆಯೇ ಸದ್ಯ 150 ಕಿ.ಮೀ ಉದ್ದದ ರಸ್ತೆ ಕಾಮಗಾರಿ ನಡೆಯುತ್ತಿದೆ. 1,700 ಕೋಟಿ ಮೊತ್ತದ ಯೋಜನೆ. ಇದನ್ನು ಕಾಲಮಿತಿಯೊಳಗೆ ಮುಗಿಸುವ ಗುರಿ ಹೊಂದಿದ್ದೇವೆ. ಮುಂದೆಯೂ ಇಂತಹ ಯೋಜನೆ ಕೈಗೆತ್ತಿಕೊಳ್ಳುವ ಉದ್ದೇಶವಿದೆ. ಈ ವಿಚಾರವಾಗಿ ಸ್ಥಳೀಯ ಶಾಸಕರ ಅಭಿಪ್ರಾಯ ಏನಿದೆ ಎಂದು ಚರ್ಚೆ ಮಾಡಿದ್ದೇನೆ. ಮತ್ತೆ ಕೆಲವು ಯೋಜನೆ ಕಾಮಗಾರಿ ಆದೇಶ ಆಗಿಲ್ಲ. ಬೆಂಗಳೂರಿನ ರಸ್ತೆಗಳನ್ನು ಸುಧಾರಿಸಲು 600 ಕೋಟಿ ಮೊತ್ತದ ಯೋಜನೆ ಹಮ್ಮಿಕೊಂಡಿದ್ದೇವೆ ಎಂದಿದ್ದಾರೆ.



**600 ಕೋಟಿ ಮೊತ್ತದ ಯೋಜನೆ**

ಕೇಂದ್ರ ಸಚಿವ ಅಶ್ವಿನ್ ವೈಷ್ಣವ್ ಅವರು ಬೆಂಗಳೂರಿನ ಕೆಲವು ಸಂಚಾರಿ ಯೋಜನೆಗಳ ಬಗ್ಗೆ ಎತ್ತಿರುವ ಪ್ರಶ್ನೆ ಬಗ್ಗೆ ಕೇಳಿದಾಗ, ''ಅವರು ಏನು ಹೇಳಿದ್ದಾರೆ ಹೆಚ್ಚಿನ ಮಾಹಿತಿ ಇಲ್ಲ. ಅವರು ಒಳ್ಳೆಯ ಸಲಹೆ ಕೊಟ್ಟಿದ್ದರೆ ತೆಗೆದುಕೊಳ್ಳುತ್ತೇವೆ. ರಾಜಕಾರಣ ಇದ್ದರೆ ನಾವು ಅದನ್ನು ನಿಭಾಯಿಸುತ್ತೇವೆ ಎಂದರು.

**ಎಐಸಿಸಿಯನ್ನು ನೀವು ದುರ್ಬಳಕೆ ಮಾಡಿಕೊಳ್ಳುತ್ತಿದ್ದೀರಿ ಎಂದು ರಾಜಣ್ಣ ಹೇಳಿದ್ದಾರೆ ಎಂದು ಕೇಳಿದಾಗ, ಈಗ ಚರ್ಚೆ ಬೇಡ, ನಾನು ಪಕ್ಷದ ಕಾರ್ಯಕ್ರಮ ಹಿನ್ನೆಲೆಯಲ್ಲಿ ಕೇರಳಕ್ಕೆ ಹೋಗುತ್ತಿದ್ದೇನೆ. ನಂತರ ರಾಜಸ್ಥಾನದಲ್ಲಿ ಸಚಿವರುಗಳ ಸಭೆ ಇದ್ದು, ಅಧಿಕಾರಿಗಳ ಸಮೇತ ಪ್ರಯಾಣ ಮಾಡುತ್ತಿದ್ದೇನೆ. ಅಲ್ಲಿಂದ ಬಂದ ನಂತರ ಮಾತನಾಡುತ್ತೇನೆ ಎಂದು ತಿಳಿಸಿದರು.**

ಕೆಲವು ತಿಂಗಳಿಂದ ಅನ್ನಭಾಗ್ಯ ಅಕ್ಕಿ ಹಣ ಹಾಗೂ ಗೃಹಲಕ್ಷ್ಮಿ ಹಣ ಬಂದಿಲ್ಲ ಎಂದು ಕೇಳಿದಾಗ, ಮೂರು ತಿಂಗಳಿಂದ ಬಂದಿಲ್ಲ. ಈ ಹಣವನ್ನು ನಾವು ಹಾಕುತ್ತೇವೆ. ನಾವು ಕೊಟ್ಟ ಮಾತಿನಂತೆ ನಡೆಯುತ್ತೇವೆ ಎಂದು ತಿಳಿಸಿದರು.

# ದರ ಹೆಚ್ಚಳಕ್ಕೂ ಸರ್ಕಾರಕ್ಕೂ ಸಂಬಂಧವಿಲ್ಲ

## ಮೆಟ್ರೋ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮತಿ ಪಡೆದ ನಂತರ ಜಾರಿ

• ಉದಯವಾಹಿನಿ, ಬೆಂಗಳೂರು

ಮೆಟ್ರೋ ರೈಲು ಪ್ರಯಾಣದರ ಏರಿಕೆಗೂ ರಾಜ್ಯ ಸರ್ಕಾರಕ್ಕೂ ಸಂಬಂಧವಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರವೇ ಸಮಿತಿಯನ್ನು ರಚನೆ ಮಾಡಲಿದ್ದು, ಆ ಸಮಿತಿ ಶಿಫಾರಸ್ಸಿನ ಮೇಲೆ ಕೇಂದ್ರ ನಗರಾಭಿವೃದ್ಧಿ ಸಚಿವಾಲಯದ ಕಾರ್ಯದರ್ಶಿಗಳು ದರ ಏರಿಕೆಗೆ ನಿರ್ಧಾರ ಮಾಡಿದ್ದಾರೆ ಎಂದರು. ದರ ಏರಿಕೆ ಸಮಿತಿ ಮಾಡುವ ಶಿಫಾರಸ್ಸನ್ನು ಮೆಟ್ರೋ ಮಂಡಳಿ ಸಭೆಯಲ್ಲಿ ಮಂಡಿಸಿ ಅನುಮತಿ ಪಡೆದ ನಂತರ ಜಾರಿಗೆ ತರಲಾಗುತ್ತದೆ. ಮೆಟ್ರೋ ರೈಲು ಪ್ರಯಾಣದರ ಏರಿಕೆ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಯಾವುದೇ ಶಿಫಾರಸ್ಸು ಸಲ್ಲಿಸುವುದಿಲ್ಲ. ಇದು ಎಲ್ಲಾ ರಾಜ್ಯಗಳಿಗೂ ಅನ್ವಯವಾಗುತ್ತದೆ ಎಂದು ಸ್ಪಷ್ಟಪಡಿಸಿದರು.

ಬಿಜೆಪಿ ನಾಯಕರು ತಪ್ಪು ಮಾಹಿತಿ ನೀಡಿ ಜನರನ್ನು ದಾರಿ ತಪ್ಪಿಸುತ್ತಿದ್ದಾರೆ. ಜನರಿಗೆ ಹೊರೆಯಾಗುತ್ತಿದ್ದು, ಕೇಂದ್ರ ಸರ್ಕಾರ ಅನುದಾನ ನೀಡಲಿ, ಬಿಜೆಪಿಯವರು ಈ ಬಗ್ಗೆ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ಮಾಡಬೇಕು. ಪ್ರಧಾನಿ ನರೇಂದ್ರಮೋದಿಯವರನ್ನು ಕೇಳಲು ಬಿಜೆಪಿಯವರಿಗೆ ಧಮ್ ಇಲ್ಲ ಎಂದರು.

ಜನರ ಹಿತದೃಷ್ಟಿಯಿಂದ ಪ್ರಯಾಣ ದರ ಕಡಿಮೆ ಮಾಡಲು ಸಿಎಂ ಸಿದ್ದರಾಮಯ್ಯ ಅವರು ಮೆಟ್ರೋ ರೈಲು ನಿಗಮಕ್ಕೆ ಪತ್ರ ಬರೆದಿದ್ದರು ಬಿಎಂಆರ್‌ಸಿಎಲ್‌ನ ವ್ಯವಸ್ಥಾಪಕರು, ಕೇಂದ್ರ ನಗರಾಭಿವೃದ್ಧಿ ಕಾರ್ಯದರ್ಶಿ ಅವರೊಂದಿಗೆ ಮಾತನಾಡಿ ದರ ಕಡಿಮೆ ಮಾಡಿಸಿದ್ದಾರೆ ಎಂದು ಸ್ಪಷ್ಟಪಡಿಸಿದರು.

### ಸರ್ಕಾರವು ದರ ಪರಿಷ್ಕರಣೆಗೆ ಸಮಿತಿ

**ಕೇಂದ್ರ ಸಚಿವರಾದ ಅಶ್ವಿನಿ ಶ್ರೀವೈಷ್ಣವ್, ಪ್ರಹ್ಲಾದ್ ಜೋಷಿ, ಮಾಜಿ ಮುಖ್ಯಮಂತ್ರಿಗಳಾದ ಜಗದೀಶ್ ಶೆಟ್ಟರ್, ಸಂಸದರಾದ ಪಿ.ಸಿ.ಮೋಹನ್ ತೇಜಸ್ವಿ ಸೂರ್ಯ ಅವರು ಮೆಟ್ರೋ ಪ್ರಯಾಣ ದರ ಏರಿಕೆ ಬಗ್ಗೆ ಜನರಿಗೆ ತಪ್ಪು ಮಾಹಿತಿ ನೀಡುತ್ತಿದ್ದಾರೆ. ನಾವೇ ಮೆಟ್ರೋ ತಂದಿದ್ದು ಎಂದು ಪೋಸ್ ಕೊಡುತ್ತಾರೆ. ಇಂಥ ಆರೋಪಗಳ ಬಂದಾಗ ರಾಜ್ಯ ಸರ್ಕಾರದ ಮೇಲೆ ಹಾಕುತ್ತಾರೆ ಎಂದು ಹೇಳಿದರು. ಮೆಟ್ರೊ ರೈಲು ಇರುವ ಎಲ್ಲಾ ರಾಜ್ಯಗಳಲ್ಲೂ ಇದೇ ರೀತಿ ದರ ಏರಿಕೆ ಕೋರಿ ಕೇಂದ್ರ ಸರ್ಕಾರ ಪತ್ರ ಸಲ್ಲಿಸಲಾಗುತ್ತಿದೆ. ಕೇಂದ್ರ ಸರ್ಕಾರವು ದರ ಪರಿಷ್ಕರಣೆಗೆ ಸಂಬಂಧಿಸಿದಂತೆ ಸಮಿತಿಯನ್ನು ರಚಿಸುತ್ತದೆ. ಅದೇ ರೀತಿ ಬೆಂಗಳೂರು ಮೆಟ್ರೋ ರೈಲು ನಿಗಮವು ಪತ್ರ ಬರೆದಿದೆ. ಅದರಂತೆ ಸಮಿತಿ ರಚನೆಯಾಗಿದೆ ಎಂದು ಸ್ಪಷ್ಟಪಡಿಸಿದರು.**

**ದರ ಏರಿಕೆ ಸಮಿತಿ ಮಾಡುವ ಶಿಫಾರಸು**



# ಕುಡಿಯುವ ನೀರು ಪೋಲು ಮಾಡಿದರೆ 5,000 ದಂಡ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರದಲ್ಲಿ ನೀರಿನ ಪೋಲು ತಡೆಗಟ್ಟಲು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮುಂದಾಗಿದೆ. ಈ ಸಂಬಂಧ ನೀರು ಪೋಲು ಮಾಡುವವರಿಗೆ 5,000 ರೂ. ದಂಡ ವಿಧಿಸಲಾಗುವುದು ಎಂದು ಆದೇಶ ಹೊರಡಿಸಿದೆ. ಕುಡಿಯುವ ನೀರನ್ನು ಇನ್ನಿತರ ಉದ್ದೇಶಕ್ಕೆ ಬಳಸುವಂತಿಲ್ಲ ಎಂದು ಬೆಂಗಳೂರು ನೀರು ಸರಬರಾಜು , ಒಳಚರಂಡಿ ಮಂಡಳಿ ಹೇಳಿದೆ. ಒಂದೊಮ್ಮೆ ಕುಡಿಯುವ ನೀರನ್ನು ಅನ್ಯ ಉದ್ದೇಶಕ್ಕೆ ಬಳಸುವುದು ಕಂಡುಬಂದಲ್ಲಿ ದಂಡ ವಿಧಿಸುವುದಾಗಿ ಎಚ್ಚರಿಕೆ ನೀಡಿದೆ. ಅಲ್ಲದೆ, ನೀರು ಪೋಲು ಮಾಡುವುದು ಕಂಡು ಬಂದಲ್ಲಿ ದೂರು ನೀಡುವಂತೆಯೂ ಸಾರ್ವಜನಿಕರಿಗೆ ಮನವಿ ಮಾಡಿದೆ.

ಬೆಂಗಳೂರು ಮಹಾನಗರದಲ್ಲಿ ಖಾಯಂ ನಿವಾಸಿಗಳು ಹಾಗೂ ಬಂದು ಹೋಗುವವರನ್ನು ಸೇರಿಸಿ ಸುಮಾರು 1 ಕೋಟಿ 40 ಲಕ್ಷ ಜನಸಂಖ್ಯೆ ಇದೆ. ಎಲ್ಲರಿಗೂ ಕುಡಿಯುವ ನೀರನ್ನು ಪೂರೈಕೆ ಮಾಡುವುದು ಅವಶ್ಯವಾಗಿದೆ. ಪ್ರಸ್ತುತ ನಗರದಲ್ಲಿ ಪ್ರತಿದಿನ ಉಷ್ಣಾಂಶ ಏರುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಮಳೆಯ ಕೊರತೆಯಿಂದ ಅಂತರ್ಜಲ ಕೂಡ ಕುಸಿದಿದೆ. ಹೀಗಾಗಿ ಬೆಂಗಳೂರು ನಗರದಲ್ಲಿ ನೀರನ್ನು ಪೋಲು ಮಾಡುವುದನ್ನು ತಡೆಗಟ್ಟುವುದು ಅವಶ್ಯಕವಾಗಿದೆ. ಕುಡಿಯುವ ನೀರನ್ನು ಸಾರ್ವಜನಿಕರು ಮಿತವಾಗಿ ಬಳಸುವುದು ಅಗತ್ಯವಾಗಿದೆ. ಈ ಹಿನ್ನಲೆಯಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ಈ ಆದೇಶ ಹೊರಡಿಸಲಾಗಿದೆ, ಎಂದು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ತನ್ನ ಸುತ್ತೋಲೆಯಲ್ಲಿ ತಿಳಿಸಿದೆ. ಯಾವುದಕ್ಕೆಲ್ಲ ಕುಡಿಯುವ ನೀರು ಬಳಸುವಂತಿಲ್ಲ ವಾಹನಗಳ ಸ್ವಚ್ಚತೆಗೆ ಕೈದೋಟಕ್ಕೆ ಕಟ್ಟಡ ನಿರ್ಮಾಣಕ್ಕೆ ಮನೋರಂಜನೆಗಾಗಿ ಕಾರಂಜಿಯಂತಹ ಆಕರ್ಷಕ ವ್ಯವಸ್ಥೆಗೆ ಸಿನಿಮಾ ಮಂದಿರ ಮತ್ತು ಮಾಲುಗಳಲ್ಲಿನ ನೀರಿನ ಹೊರತು ಇನ್ನಿತರೆ ಬಳಕೆಗೆ ರಸ್ತೆ ನಿರ್ಮಾಣ ಮತ್ತು ಸ್ವಚ್ಚತೆಗೆಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಕಾಯ್ದೆ-1964ರ ಕಲಂ 33 ಮತ್ತು 34ರ ಅನುಸಾರ ಬೆಂಗಳೂರು ನಗರದಲ್ಲಿ ಕುಡಿಯುವ ನೀರನ್ನು ಈ ಮೇಲಿನ ಉದ್ದೇಶಗಳಿಗೆ ಬಳಸುವುದನ್ನು ನಿಷೇಧಿಸಲಾಗಿದೆ.

### 1916ಕ್ಕೆ ಕರೆ ಮಾಡಲು ಸಲಹೆ

**ಮೇಲೆ ಹೇಳಿದ ನಿಷೇಧಗಳನ್ನು ಯಾರಾದರೂ ಉಲ್ಲಂಘನೆ ಮಾಡುವುದು ಕಂಡುಬಂದಲ್ಲಿ ಸಾರ್ವಜನಿಕರು ಕೂಡಲೇ ಜಲಮಂಡಳಿಯ ಕಾಲ್ ಸೆಂಟರ್ ಸಂಖ್ಯೆ 1916 ಕರೆ ಮಾಡಿ ತಿಳಿಸಬಹುದು ಎಂದು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಪ್ರಕಟಣೆಯಲ್ಲಿ ತಿಳಿಸಿದೆ.**

# ಮುಖ್ಯಮಂತ್ರಿಗಳ ಕೊಡುಗೆ ಜನರಿಗೆ ತಿಳಿಸಬೇಕು

• ಉದಯವಾಹಿನಿ ಮೈಸೂರು


ಉದಯವಾಹಿನಿ ಚಿತ್ರ

ರಾಜ್ಯದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ಹಾಗೂ ಸಾಧನೆ ಮಾಡಿದ ಎಲ್ಲಾ ಮುಖ್ಯಮಂತ್ರಿಗಳ ಬಗ್ಗೆ ಜನರಿಗೆ ತಿಳಿಸುವ ನಿಟ್ಟಿನಲ್ಲಿ ಸಂಶೋಧನಾ ಕೇಂದ್ರ ಸ್ಥಾಪನೆ ಆಗಬೇಕೆಂದು ಕೆಪಿಸಿಸಿ ವಕ್ತಾರ ಎಚ್.ಎ.ವೆಂಕಟೇಶ್ ಹೇಳಿದರು.

ಮೈಸೂರಿನ ದಿ ಇನ್ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್‌ನಲ್ಲಿ ಅನ್ವೇಷಣಾ ಸೇವಾ ಟ್ರಸ್ಟ್ ವತಿಯಿಂದ ಧ್ವನಿ ಕೊಟ್ಟ ಧಣಿ ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ವಿಧಾನಪರಿಷತ್ ಸದಸ್ಯ ಡಾ.ತಿಮ್ಮಯ್ಯ ಅಧ್ಯಕ್ಷರಾಗಿರುವ ಅರಸು ಚಾರಿಟಬಲ್ ಟ್ರಸ್ಟ್‌ಗೆ ಸರ್ಕಾರದಿಂದ 10 ಎಕರೆ ಸಂಶೋಧನಾ ಕೇಂದ್ರ ತೆರೆಯಲು ಸರ್ಕಾರ ಜಾಗ ನೀಡಬೇಕು.

ಡಿ.ದೇವರಾಜ ಅರಸು, ಎಚ್.ಡಿ.ದೇವೇಗೌಡ, ಕೆಂಗಲ್ ಹನುಮಂತಯ್ಯ, ವೀರೇಂದ್ರ ಪಾಟೀಲ್, ವೀರಪ್ಪಮೊಯಿಲಿ, ಬಂಗಾರಪ್ಪನವರಿಂದ ಈಗಿನ ಸಿದ್ದರಾಮಯ್ಯ ಅವರವರೆಗಿನ ಎಲ್ಲಾ ಭಾಗ್ಯ ಹಾಗೂ ಕೊಡುಗೆಗಳ ಬಗ್ಗೆ ಜನರಿಗೆ ತಿಳಿಸಿಕೊಡುವ ಕೆಲಸ ಮಾಡಬೇಕಿದೆ. ಮಾತ್ರವಲ್ಲದೆ, ಈ ಬಗ್ಗೆ ರಾಜಕೀಯ ಚರ್ಚೆ, ವಿಮರ್ಶೆ ನಡೆಸುವ ಕೆಲಸವನ್ನು ಪಕ್ಷಾತೀತವಾಗಿ ನಡೆಸುವ ಮೂಲಕ ಹಿಂದಿನ ಚಿಂತನೆಗೆ ಮರುಹುಟ್ಟು ಕೊಡುವ ಕೆಲಸ ಆಗಬೇಕಿದೆ ಎಂದು ತಿಳಿಸಿದರು. ಉಳುವವನೇ ಭೂಮಿಯ ಒಡೆಯ, ರಾಜಕೀಯ ಮೀಸಲಾತಿ, ಅನೇಕ ಭಾಗ್ಯಗಳನ್ನು ನಮ್ಮನಾಳಿದ ನಾಯಕರು ಕೊಡುಗೆಯಾಗಿ ನೀಡಿದ್ದಾರೆ. ಅವರ ಕೊಡುಗೆಗಳನ್ನು ಶಾಶ್ವತವಾಗಿ ಸ್ಮರಿಸಬೇಕಿದೆ ಎಂದು ತಿಳಿಸಿದರು.

ಅರಸು ಚಾರಿಟಬಲ್ ಟ್ರಸ್ಟ್ ಮೂಲಕ ಅರಸು ಅವರ ಸಾಮಾಜಿಕ ಚಿಂತನೆಗಳು ನಿರಂತರವಾಗಿ ಚರ್ಚೆ ನಡೆಯಬೇಕು. ಮುಂದೆ ಯಾವುದೇ ಸರ್ಕಾರ ಇದ್ದರೂ ಸಹ ಜನಸಾಮಾನ್ಯರಿಗೆ ಯಾವ ರೀತಿ ಆಡಳಿತ ನೀಡಬೇಕೆಂಬುದು ಸಹ ಇಲ್ಲೇ ಚರ್ಚೆ ಆಗಬೇಕು. ರಾಜಕೀಯ ಮುಖಂಡರು, ರಾಜ್ಯಶಾಸ್ತ್ರ, ಅರ್ಥಶಾಸ್ತ್ರ ಹಾಗೂ ಇನ್ನಿತರ ಬುದ್ಧಿಜೀವಿಗಳೊಂದಿಗೆ ಮುಕ್ತ ಸಂವಾದದ ಚರ್ಚೆ ಆಗಬೇಕು ಎಂದರು.

> ರಾಜಕೀಯಕ್ಕೆ ಪ್ರಾಮಾಣಿಕರು, ಉತ್ತಮರು ಬರಬೇಕಿದೆ. ಅರಸು ಮೊಮ್ಮಗನಾಗಿ ನಾನು ಅವರ ಬಗ್ಗೆ ಮಾತನಾಡುವುದು ಸರಿಯಲ್ಲ. ಅವರು ಸಾವನ್ನಪ್ಪಿದ ಬಳಿಕ ಜನರೆ ಅವರ ಕುರಿತು ಮಾತನಾಡುತ್ತಿರುವುದು ಸಂತಸ ತಂದಿದೆ
> -ಸೂರಜ್ ಹೆಗಡೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ

ಕಂಠೀರವ ಪ್ರಾಧಿಕಾರದ ಮಾಜಿ ಅಧ್ಯಕ್ಷೆ ವಿಜಯಲಕ್ಷ್ಮಿ ಅರಸ್ ಮಾತನಾಡಿ, ದೇವರಾಜ ಅರಸು ಅವರ ಮೇಲೆ ಭ್ರಷ್ಟಾಚಾರದ ಆರೋಪ ಕೇಳಿ ಬಂದಿತ್ತು. ಆದರೆ, ಅವರು ಸಾವನ್ನಪ್ಪಿದ ಬಳಿಕ ಅವರ ಪತ್ನಿ ಮಕ್ಕಳಿಗಾಗಿ ಎರಡು ನಿವೇಶನವನ್ನಾದರೂ ಮಾಡಿ ಎಂದು ಕೇಳಿಕೊಂಡಿದ್ದರು. ಆದರೆ, ಅರಸರು ಅದು ಸಹ ಮಾಡಿರಲಿಲ್ಲ. ಆಗ ಅವರ ಪ್ರಮಾಣಿಕತೆ ಎಲ್ಲರಿಗೂ ಅರಿವಿಗೆ ಬಂತೂ ಎಂದು ಸ್ಮರಿಸಿದರು.

# ಯುವಕರು ಮಾದಕ ವಸ್ತುಗಳಿಂದ ದೂರವಿರಬೇಕು

• ಉದಯವಾಹಿನಿ ಚಾಮರಾಜನಗರ



ಉದಯವಾಹಿನಿ ಚಿತ್ರ

ಯುವಕರು ಮಾದಕ ವಸ್ತುಗಳಿಂದ ದೂರವಿರಬೇಕು. ಮಾದಕವಸ್ತುಗಳು ರೋಗಗಳನ್ನು ಸೃಷ್ಟಿಸುತ್ತದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ.ಕವಿತಾ ತಿಳಿಸಿದರು. ಚಾಮರಾಜನಗರದ ಹೊರವಲಯದಲ್ಲಿ ಇರುವ ಸಿಮ್ಸ್ ಕಾಲೇಜಿನ ಸಭಾಂಗಣದಲ್ಲಿ ಚಾಮರಾಜನಗರ ಜಿಲ್ಲಾ ಪೊಲೀಸ್, ಗ್ರಾಮಾಂತರ ಪೊಲೀಸ್ ಇಲಾಖೆ ಹಾಗೂ ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಹಯೋಗದಲ್ಲಿ ಕಾಲೇಜು ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳಿಂದಾಗೂವ ಪರಿಣಾಮದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕರ್ನಾಟಕ ಪೊಲೀಸ್ ಇಲಾಖೆ ಮಾದಕ ವಸ್ತುಗಳ ತಡೆಗಾಗಿ ಡ್ರಗ್ಸ್ ಫ್ರೀ ಕರ್ನಾಟಕ ಎಂಬ ಅಪ್ಲಿಕೇಷನ್ ಹೊರತಂದಿದ್ದು ಇದನ್ನು ಸಾರ್ವಜನಿಕರು ಬಳಸಿಕೊಂಡು ಮಾದಕ ವಸ್ತುಗಳ ಸಾಗಣಿಕೆ, ಬಳಕೆ, ಸಾಗುವಳಿ, ಸಂಗ್ರಹಣೆ ಹಾಗೂ ಇನ್ನಿತರೆ ಮಾಹಿತಿಗಳನ್ನು ತಮ್ಮ ಯಾವುದೇ ವೈಯಕ್ತಿಕ ಮಾಹಿತಿ ಹಂಚಿಕೊಳ್ಳದೆ. ಸಂದೇಶ ಕಳಿಸುವುದರ ಮೂಲಕ ಹತ್ತಿರವಿರುವ ಪೊಲೀಸ್ ಠಾಣೆಗೆ ತಿಳಿಸಬಹುದಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ಎಚ್ಚರವಹಿಸಬೇಕು. ಮಾದಕ ವಸ್ತುಗಳ ಮಾರಾಟ ದಂಧೆಯನ್ನು ತಡೆಯಲು ಪೊಲೀಸ್ ಇಲಾಖೆಯ ಜೊತೆ ಕೈ ಜೋಡಿಸಬೇಕು. ಸ್ವಂತ ಮನೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದರೆ ಹಾಗೂ ಕಾಲೇಜ್ ಆವರಣದಲ್ಲಿ ಮಾದಕ ವಸ್ತು ಸೇವನೆ ಮಾಡಿರುವ ವ್ಯಕ್ತಿಗಳಿಂದ ಗಲಾಟೆಯಾದರೆ 112 ಟೋಲ್ ಫ್ರೀ ನಂಬರ್‌ಗೆ ಮಾಹಿತಿ ನೀಡಬಹುದು.

ಸಣ್ಣ ಪುಟ್ಟ ಗಲಾಟೆಗಳನ್ನು ನಿಮ್ಮ ಕಾಲೇಜ್ ಮುಖ್ಯಸ್ಥರೆ ಬಗೆಹರಿಸುತ್ತಾರೆ ಎಂದು ತಿಳಿಸಿದರು. ಸಿಮ್ಸ್ ಆಸ್ಪತ್ರೆಯ ನಿವಾಸಿ ವೈದ್ಯರಾದ ಡಾ. ಮಹೇಶ್ ಮಾತನಾಡಿ ಮಾದಕ ವಸ್ತುಗಳ ಬಳಕೆ ಆರೋಗ್ಯದ ಮೇಲೆ ಪರಿಣಾಮ ಬೀರಲಿದೆ. ಸಮಾಜದಲ್ಲಿ ಅಹಿತಕರ ಘಟನೆಗಳು ನಡೆಯಲು ಕಾಣವಾಗುತ್ತದೆ. ಯುವ ಸಮುದಾಯವು ಮಾದಕ ವಸ್ತು ಸೇವನೆ ದಾಸರಾಗುತ್ತಿರುವುದು ಅಂತರಿಕಕಾರಿ ಬೆಳವಣಿಗೆ ಎಂದರು.

## ಮಿನಿ ನ್ಯೂಸ್

### ಬಾಲ ಕಾರ್ಮಿಕರ ನಿರ್ಮೂಲನಾ ಸಭೆ

• ಉದಯವಾಹಿನಿ ಗೌರಿಬಿದನೂರು

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ವತಿಯಿಂದ ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ನಿರ್ಮೂಲನೆ ಮಾಡಲು ತಾಲ್ಲೂಕು ಮಟ್ಟದ ಕಾರ್ಯಪಡೆ ಸಭೆಯನ್ನು ಸೋಮವಾರ ನಡೆಸಲಾಯಿತು. ತಹಶೀಲ್ದಾರ್ ಮಹೇಶ್ ಪತ್ರಿ ಮಾತನಾಡಿ, ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕರನ್ನು ಕೆಲಸಗಳಲ್ಲಿ ನೇಮಿಸಿಕೊಳ್ಳುವುದು ಅಪರಾಧ. ಮಕ್ಕಳು ಶಿಕ್ಷಣ ಪಡೆಯುವುದು ಅವರ ಹಕ್ಕು. ಯಾರಾದರೂ ಕೆಲಸಕ್ಕೆ ನೇಮಿಸಿಕೊಂಡಿರುವುದು ಕಂಡು ಬಂದರೆ ಅಂತಹವರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಕಾರ್ಮಿಕ ನಿರೀಕ್ಷಕ ಟಿ.ಬಿ ಸತೀಶ್ ಮಾತನಾಡಿ, ತಾಲ್ಲೂಕಿನಾದ್ಯಂತ ತಿಂಗಳಿಗೆ ಒಮ್ಮೆ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಜಂಟಿ ತಪಾಸಣೆ ನಡೆಸಿ, ಬಾಲ ಕಾರ್ಮಿಕ ನಿರ್ಮೂಲನೆ ಮಾಡುವ ಕ್ರಮ ಜರುಗಿಸಲಾಗುವುದು. 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಲ್ಲಿ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಿ ಮೊಕದ್ದಮೆ ದಾಖಲಿಸಲಾಗುವುದು ಎಂದು ತಿಳಿಸಿದರು.

### ಕೊಡಗು ವಿ.ವಿ. ಉಳಿಸಲು ಹೋರಾಟ

• ಉದಯವಾಹಿನಿ ಕುಶಾಲನಗರ

ತಾಲ್ಲೂಕಿನ ಚಿಕ್ಕಅಳುವಾರ ಸ್ನಾತಕೋತ್ತರ ಕೇಂದ್ರದಲ್ಲಿ 2 ವರ್ಷಗಳ ಹಿಂದೆ ಆರಂಭಗೊಂಡ ಪ್ರತ್ಯೇಕ ಕೊಡಗು ವಿಶ್ವವಿದ್ಯಾಲಯವನ್ನು ಯಾವುದೇ ಕಾರಣಕ್ಕೂ ಮುಚ್ಚದಂತೆ ಸರ್ಕಾರವನ್ನು ಒತ್ತಾಯಿಸಲು ಭಾನುವಾರ ನಡೆದ ಕೊಡಗು ವಿಶ್ವವಿದ್ಯಾಲಯ ಹಿತರಕ್ಷಣಾ ಬಳಗದ ಸಭೆಯಲ್ಲಿ ನಿರ್ಣಯಿಸಲಾಯಿತು. ನೂತನ ಹೋರಾಟ ಸಮಿತಿಯನ್ನು ರಚನೆ ಮಾಡಲಾಯಿತು.

ಚಿಕ್ಕ ಅಳುವಾರ ಗ್ರಾಮದ ಅಳುವಾರಮ್ಮ ದೇವಾಲಯಸಮುದಾಯ ಭವನದಲ್ಲಿ ಕೊಡಗು ವಿಶ್ವವಿದ್ಯಾಲಯ ಹಿತರಕ್ಷಣಾ ಬಳಗದ ಅಧ್ಯಕ್ಷ ಕೆ.ಎಸ್.ಕೃಷ್ಣಗೌಡ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಜಿಲ್ಲಾಮಟ್ಟದಲ್ಲಿ ಹೋರಾಟ, ಸರ್ಕಾರಕ್ಕೆ ನಿಯೋಗ ತೆರಳುವುದು ಪಕ್ಷಾತೀತವಾ ಹೋರಾಟಕ್ಕೆ ಸಮಿತಿಯನ್ನು ರಚನೆ ಮಾಡಲಾಯಿತು.

ಗ್ಯಾರಂಟಿ ಅನುಷ್ಠಾನದ ತಾಲ್ಲೂಕು ಸಮಿತಿ ಅಧ್ಯಕ್ಷ ವಿ.ಪಿ.ಶಶಿಧರ್ ಮಾತನಾಡಿ ಸಚಿವ ಸಂಪುಟದ ಉಪಸಮಿತಿಯಲ್ಲಿ 9 ನೂತನ ವಿವಿಗಳನ್ನು ಮುಚ್ಚಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ. ಕೊಡಗು ಗುಡ್ಡಗಾಡು ಪ್ರದೇಶವಾಗಿದ್ದು, ವಿಶ್ವವಿದ್ಯಾಲಯ ಮುಂದುವರಿಸಬೇಕು. ನೂರು ಎಕರೆ ಪ್ರದೇಶವನ್ನು ಹೊಂದಿದೆ. ತಾಂತ್ರಿಕ ಅಡಚಣೆ ಇಲ್ಲ. ಸೌಕರ್ಯ, ಮಾನದಂಡವನ್ನು ಹೊಂದಿದೆ. ಸಿಬ್ಬಂದಿ ನೇಮಕವಾಗಿದೆ. ಮಂಗಳೂರು ವಿವಿ ಯಿಂದ ಸಂಬಳ ಬರುತ್ತಿತ್ತು. ಸರ್ಕಾರದ ನೂತನ ಕುಲಪತಿ ಅನುದಾನವಿಲ್ಲದೆ ವಿವಿಯನ್ನು ಮುನ್ನಡೆಸುತ್ತಿದ್ದಾರೆ. ನಮ್ಮ ಜಿಲ್ಲೆಯ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗಾಗಿ ಕೊಡಗು ವಿವಿ ಉಳಿಸಲು ಹೋರಾಟ ಅನಿವಾರ್ಯವಾಗಿದೆ ಎಂದರು.

# ಮೌಢ್ಯ ಭಯ ತೊರೆದರೆ ಸಾಮಾಜಿಕ ಸುಧಾರಣೆ ಸಾಧ್ಯ: ಸತೀಶ್ ಜಾರಕಿಹೊಳಿ

## ಟಿ.ಚನ್ನಯ್ಯ ರಂಗಮಂದಿರದಲ್ಲಿ ಅರಿವು ಭಾರತ ವತಿಯಿಂದ ಸಮಾಜ ಸುಧಾರಣೆಯ ದಶಮಾನೋತ್ಸವ ಕಾರ್ಯಕ್ರಮ

• ಉದಯವಾಹಿನಿ ಕೋಲಾರ


ಉದಯವಾಹಿನಿ ಚಿತ್ರ

ಒಳ-ಹೊರಗು ಕೃತಿ ಬಿಡುಗಡೆ

ಅಸ್ಪೃಶ್ಯತೆ, ಮೌಢ್ಯತೆ ಬಗ್ಗೆ ಶೋಷಿತ ಸಮುದಾಯಗಳಲ್ಲಿ ಇರುವ ಭಯ ಹೋದಾಗ ಮಾತ್ರ, ಸಾಮಾಜಿಕ ಸುಧಾರಣೆ ಸಾಧ್ಯ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು. ನಗರದ ಟಿ.ಚನ್ನಯ್ಯ ರಂಗಮಂದಿರ ದಲ್ಲಿ ಅರಿವು ಭಾರತ ವತಿಯಿಂದ ಸಮಾಜ ಸುಧಾರಣೆಯ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಒಳ-ಹೊರಗು ಕೃತಿ ಬಿಡುಗಡೆಗೊಳಿಸಿ ಮಾತನಾಡಿದರು.

ಮನುಷ್ಯರನ್ನು ಮನುಷ್ಯರನ್ನಾಗಿ ಕಾಣುವ ಮನಸ್ಸು ಪ್ರತಿಯೊಬ್ಬರಲ್ಲೂ ಇರಬೇಕು. ಅದು ಬಿಟ್ಟು ಒಬ್ಬರನ್ನು ಇನ್ನೊಬ್ಬರು ತುಳಿಯುವ ಕೆಲಸ ಆಗಬಾರದು ಎಂದು ತಿಳಿಸಿದರು.

ಅನಿಷ್ಠ ಪದ್ಧತಿಗನ್ನು ದೂರ ಮಾಡಿ, ಎಲ್ಲರು ಒಂದೇ ಎಂಬ ಮನೋಭಾವ ಮೂಡಬೇಕು, ಸಮಾಜ ಸುಧಾರಣೆ ಕಾರ್ಯ ಮಾಡುವುದು ಸುಲಭವಲ್ಲ. ಬಹಳಷ್ಟು ಸಂಕಷ್ಟ ಎದುರಾಗುತ್ತದೆ. ಅದು ಸಹ ಮೊದಲು ಕುಟುಂಬದಿಂದಲೇ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿ ಸಮುದಾಯದವರು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂಬ ಛಲ ಬರಬೇಕು. ಆ ನಿಟ್ಟಿನಲ್ಲಿ ಅಲೋಚನೆ, ಚಿಂತನೆಗಳು ಆಗಬೇಕು. ಅನಿಷ್ಠ ಪದ್ಧತಿಗಳಿಂದ ಆಗುತ್ತಿರುವ ಪರಿಣಾಮಗಳ ಬಗ್ಗೆ ಜನ ಜಾಗೃಕರಾಗಬೇಕು. ಹಿಂದೆ ಇಲ್ಲದ ಅನಿಷ್ಠ ಪದ್ಧತಿಗಳನ್ನು ಈಗಿನವರು ಮನಸ್ಸಿನಲ್ಲಿ ಬಹಳ ಗಟ್ಟಿಯಾಗಿ ನಾಟಿ ಮಾಡಿಕೊಂಡಿದ್ದು ಇದನ್ನು ಹೋಗಲಾಡಿಸಲು ಮುಂದಾಗಬೇಕು ಎಂದು ಎಚ್ಚರಿಸಿದರು. ಶಿಕ್ಷಣ, ಮೀಸಲಾತಿ, ವಿಜ್ಞಾನ, ತಂತ್ರಜ್ಞಾನದ ಬದಲಾವಣೆಗಳು, ಆರ್ಥಿಕ, ರಾಜಕೀಯ ಸಬಲತೆಗಳು ಅಸ್ಪೃಶ್ಯತೆಗೆ ಹಿನ್ನಡೆಯಾಗಿದೆ.

ಕಾರು, ಬಸ್, ಹೋಟೆಲ್, ವಿಮಾನ, ವ್ಯಾಪಾರ, ಆಸ್ಪತ್ರೆ, ಸರ್ಕಾರಿ ಕಚೇರಿಗಳಲ್ಲಿ ಇಲ್ಲವೇ, ಇಲ್ಲಿ ಕಾನೂನು, ಶಿಕ್ಷಣ, ವಿಜ್ಞಾನ ಕೆಲಸ ಮಾಡುವುದಿಲ್ಲ, ಮನ ಪರಿವರ್ತನೆ ಕೆಲಸ ಮಾಡುತ್ತಿದೆ. ಶಾಂತಿ, ಪ್ರೀತಿಯಿಂದ ಜಗತ್ತನ್ನು ಗೆಲ್ಲಬೇಕಾಗಿದೆ. ಬಹಳಷ್ಟು ಶಕ್ತಿಯಿರುವ ಆಯುದ ಪ್ರೀತಿ. ಇದರ ಮೂಲಕ ಅರಿವು ಭಾರತ ಸಮಾಜ ಸುಧಾರಣೆಗೆ ಹೆಜ್ಜೆಯಿಟ್ಟಿದ್ದು, ನಾವೆಲ್ಲ ಸಾಥ್ ಬೀಡಬೇಕು ಎಂದು ಹೇಳಿದರು.

ಶಿಕ್ಷಣ ಇಲಾಖೆ ಆಯುಕ್ತ ಡಾ.ಕೆ.ವಿ.ತ್ರಿಲೋಕ ಚಂದ್ರ ಮಾತನಾಡಿ, ಅಸ್ಪೃಶ್ಯತೆ ಸ್ವಾತಂತ್ರ್ಯ ಪೂರ್ವದಿಂದಲೂ ಆಚರಣೆಯಲ್ಲಿದ್ದು, ಇದೊಂದು ಸಾಮಾಜಿಕ ಪಿಡುಗು ಆಗಿದೆ. ಸಮಾಜದ ಮೇಲೆ ಸಾಕಷ್ಟು ಪರಿಣಾಮ ಬೀರುತ್ತಿದೆ. ಇದನ್ನು ಕಾನೂನಿನಿಂದ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ, ಮಾನವೀಯ ಪರಿವರ್ತನೆಯಿಂದ ಮಾತ್ರ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಹೊರಗೆ ಏನಾದರು ಜನ ನಾನಾ ರೀತಿ ಮಾಡನಾಡಿಕೊಳ್ಳಬಹುದು, ಈ ಸಮಸ್ಯೆಯು ವೈಯಕ್ತಿಕವಾದದ್ದು, ಕೆಟ್ಟ ಪರಿಣಾಮವನ್ನು ತೊಲಗಿಸಬೇಕು. ಸಹ ಬೋಜನ ಕಾರ್ಯಕ್ರಮ ಮಾಡುವುದರಿಂದ ಜನರ ಮನಸ್ಸನ್ನು ಬದಲಾವಣೆ ಮಾಡಬಹುದು. ಹಿರಿಯರ ಆಶೋತ್ತರಗಳನ್ನು ಈಡೇರಿಸಿ ಸಮಾಜ ಬದಲಾವಣೆ ಕಾಣಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಮಾತನಾಡಿ, ಪ್ರಸ್ತುತ ಕಾಲಗಟ್ಟದಲ್ಲಿ ಸನ್ನಿಗ್ಧತೆಯಲ್ಲಿ ಸಿಕ್ಕಿ ಹಾಕಿಕೊಂಡಿದ್ದೇವೆ. ಅಸ್ಪೃಶ್ಯತೆ ನಿರ್ಮೂಲನೆ ಕಾರ್ಯಕ್ರಮ ಮನೆಮನೆಯ ಕಾರ್ಯಕ್ರಮ ಚಳವಳಿಯಾಗಿ ರೂಪುಗೊಂಡಿದೆ. ಇಂತಹ ಸಮಾಜ ಮುಖಿ ಕಾರ್ಯಗಳಿಗೆ ಜಿಲ್ಲಾಡಳಿತದಿಂದ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಉಪ ವಿಭಾಗಾಧಿಕಾರಿ ಡಾ.ಮೈತ್ರಿ ಎಚ್.ಪಿ.ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರವಿಶಂಕರ್, ಪತ್ರಕರ್ತ ಕೆ.ನರಸಿಂಹಮೂರ್ತಿ, ರಾಜ್ಯ ಜಾನಪದ ಅಕಾಡೆಮಿ ಮಾಜಿ ಅಧ್ಯಕ್ಷ ಪಿಚ್ಚಳ್ಳಿ ಶ್ರೀನಿವಾಸ್, ಮುಖಂಡರಾದ ಟಿ.ವಿಜಯಕುಮಾರ್, ಅಬ್ಬಣಿ ಶಿವಪ್ಪ, ಆನಂದ್ ಕುಮಾರ್, ಪಂಡಿತ್ ಮುನಿವೆಂಟಪ್ಪ, ವರದೇನಹಳ್ಳಿ ವೆಂಕಟೇಶ್, ಮಾಲೂರು ವೆಂಕಟರಾಮ್ ಇದ್ದರು.

### ಮನ ಪರಿವರ್ತನೆ ಮಾಡಿ ಬದಲಾವಣೆ ಕಾಣಬೇಕು

ಬುದ್ಧ, ಬಸವ, ಅಂಬೇಡ್ಕರ್ ಅವರು ಅವರದಿಂದ ಕೆಲ ಮಂದಿಗೆ ಜ್ಞಾನೋದಯವಾಗಿದೆ. ಸಂವಿಧಾನ ರಚನೆಯಿಂದ ಸಾಕಷ್ಟು ಮಂದಿ ಎಚ್ಚರಗೊಂಡು ಜೀವನ ನಡೆಸುತ್ತಿದ್ದಾರೆ. ಶೋಷಿತ ಸಮುದಾಯಗಳಲ್ಲಿ ಇರುವ ಭಯ ಹೋಗಬೇಕು, ಅದ್ದರಿಂದಲೇ ನಾನು ನಾಲ್ಕು ಬಾರಿ ಶಾಸಕನಾದರು ರಾಹುಕಾಲದಲ್ಲೆ ನಾಮಪತ್ರ ಸಲ್ಲಿಸಿದೆ. ಅಮಾವಾಸ್ಯೆ ದಿನ ಗೃಹ ಪ್ರವೇಶ ಮಾಡಿರುವುದು, ಬದಲಾವಣೆ ಕಾಣಲು ಮಾನವ ಬಂಧುತ್ವ ವೇದಿಕೆ ಕಟ್ಟಲಾಗಿದೆ ಎಂದು ಹೇಳಿದರು. ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ್ ದಾಸ್ ಮಾತನಾಡಿ, ಅಸ್ಪೃಶ್ಯತೆ, ಮೌಢ್ಯಚಾರಕ್ಕೆ ಸಂಬಂಧವಿದ್ದು, ಇದನೆಲ್ಲ ತಲೆಯಿಟ್ಟುಕೊಂಡು ಸುಧಾರಣೆ ಕಾಣಲು ಸಾಧ್ಯವಿಲ್ಲ. ಪ್ರೀತಿಯ ಮೂಲಕ ಮನ ಪರಿವರ್ತನೆ ಮಾಡಿ ಬದಲಾವಣೆ ಕಾಣಬೇಕು ಎಂದು ಎಚ್ಚರಿಸಿದರು.

### ಸಂವಿಧಾನದ ಅನುಚೇದ 17ರಲ್ಲಿ ಅಸ್ಪೃಶ್ಯತೆ ನಿಷೇಧ

ಜಿಲ್ಲೆಯಲ್ಲಿ 10 ವರ್ಷಗಳ ಹಿಂದೆ ಗೃಹ ಪ್ರವೇಶ ಕಾರ್ಯಕ್ರಮ ಶುರುವಾಗಿ ಅದು ಈಗ ಅರಿವು ಭಾರತ ಸಂಘಟನೆಯಾಗಿ ರೂಪ ತಾಳಿ ಚಳವಳಿಯಾಗಿ ಹೋರಾಟ ನಡೆಸುತ್ತಿದೆ. ಈ ಹೋರಾಟವನ್ನು ಯಾರು ನಿಲ್ಲಸಲಾಗದು. ಮಾನವೀಯ ಪರಿವರ್ತನೆಯು ರಾಜ್ಯವಲ್ಲದೆ ದೇಶಾದ್ಯಂತ ಆಗುವ ನಿರೀಕ್ಷೆಯಿದೆ ಎಂದು ಅಭಿಪ್ರಾಯಪಟ್ಟರು. ಸಂವಿಧಾನದಡಿಯಲ್ಲಿ ಅನುಚೇದ 17ರಲ್ಲಿ ಅಸ್ಪೃಶ್ಯತೆ ನಿಷೇಧಿಸಲಾಗಿದ್ದು, ಆಚರಿಸಿದರೆ ಶಿಕ್ಷೆ ವಿಧಿಸುವ ಬಗ್ಗೆ ಪ್ರಸ್ತಾಪಿಸಲಾಗಿದೆ. ಸರ್ಕಾರಗಳು ಸಾಥ್ ನೀಡುತ್ತಿದ್ದು ಅಧಿಕಾರಿಗಳು ಅನುಷ್ಠಾನಕ್ಕೆ ತರುತ್ತಿದ್ದಾರೆ. ಕಾನೂನನ್ನು ದುರುಪಯೋಗ ಮಾಡಿಕೊಳ್ಳುತ್ತಿರುವದನ್ನು ಕಾಣಲಾಗುತ್ತಿದೆ ಎಂದರು.

# ದೇವಾಲಯಗಳು ಆಧ್ಯಾತ್ಮಿಕ ಚಟುವಟಿಕೆಗಳ ಸ್ಥಳ: ನಿರ್ಮಲಾನಂದಶ್ರೀ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕೆ.ಆರ್.ಪೇಟೆ.

ದೇವಾಲಯಗಳು ಕೇವಲ ಪೂಜೆಗೆ ಮಾತ್ರ ಸೀಮಿತವಲ್ಲ ಅವುಗಳು ಧಾರ್ಮಿಕ ಮತ್ತು ಆಧ್ಯಾತ್ಮಿಕ ಚಟುವಟಿಕೆಗಳಿಗೆ ಮೀಸಲಾಗಿರುವ ಸ್ಥಳ. ಗೋಪುರಗಳು ಪ್ರತಿ ಹಿಂದೂ ದೇವಸ್ಥಾನಗಳ ದೈವ ಸನ್ನಿಧಿಗೆ ಆಭರಣ ಭೂಷಣವಾಗಿವೆ ಎಂದು ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷರಾದ ಶ್ರೀ. ಡಾ.ನಿರ್ಮಲಾನಂದ ಸ್ವಾಮೀಜಿ ಅಭಿಪ್ರಾಯಪಟ್ಟರು.

ಅವರು ತಾಲ್ಲೂಕಿನ ಹೊಸಹೊಳಲು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಕೋಟೆಭೈರವೇಶ್ವರ ಸ್ವಾಮಿಯ ದೇವಾಲಯದ ರಾಜಗೋಪುರ ಹಾಗು ಸಮುದಾಯ ಭವನ ಉದ್ಘಾಟನಾ ಸಮಾರಂಭ ದಲ್ಲಿ ಆಶೀರ್ವಚನ ನೀಡಿ ಮಾತನಾಡಿದರು.

ನಮ್ಮ ದೇಶದಲ್ಲಿ ದೇವಾಲಯಗಳು, ಅಶ್ವಥಕಟ್ಟೆ ಗುಡಿ ಗೋಪುರಗಳನ್ನು ನಿರ್ಮಿಸುತ್ತಾರೆ ಕೇವಲ ನಿರ್ಮಾಣ ಮಾಡಿದರೆ ಸಾಲದು ಅವುಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಣೆ ಮಾಡಬೇಕು. ಭಾರತೀಯ ಸನಾತನ ಸಂಸ್ಕೃತಿಯು ಜನರನ್ನು ಧಾರ್ಮಿಕವಾಗಿ ಒಂದುಗೂಡಿಸುತ್ತದೆ. ಪೋಷಕರು ತಮ್ಮ ಮಕ್ಕಳಿಗೆ ದೇವರ ಬಗ್ಗೆ ಒಲವು ಮೂಡುವಂತೆ ಮಾಡಬೇಕು. ಇಂದಿನ ಯುವಕರಲ್ಲಿ ದೇವರ ಹಾಗೂ ಭಕ್ತಿಯ ಬಗ್ಗೆ ಆಸಕ್ತಿ ಕಡಿಮೆಯಾಗುತ್ತಿದೆ. ಇದು ಆತಂಕಕಾರಿ ವಿಷಯ. ಮುಂದಿನ ದಿನಗಳಲ್ಲಿ ಹೀಗಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಹೊಣೆಯಾಗಿದೆ. ಎಲ್ಲಿ ಗಂಗೆ ಇರುತ್ತದೆಯೋ ಅಲ್ಲಿ ನಾಗರೀಕತೆ ಬೆಳೆಯುತ್ತದೆ ಹಾಗೆಯೇ ಈ ಗ್ರಾಮದ ಕೆರೆಯ ದಂಡೆಯಲ್ಲಿ ಶ್ರೀ ಕಾಲಭೈರವಸ್ವಾಮಿ ಅದ್ಭುತವಾಗಿ ನೆಲೆಯೂರಿದ್ದಾರೆ. ಈ ಪುಣ್ಯಕಾರ್ಯಕ್ಕೆ ತಮ್ಮ ಅಳಿಲು ಸೇವೆ ಸಲ್ಲಿಸಿದ ಎಲ್ಲರಿಗೂ ಭಗವಂತನ ಅನುಗ್ರಹವಿರಲಿ ಎಂದ ಶ್ರೀಗಳು ಸ್ವಾಮಿವಿವೇಕಾನಂದ, ರಾಮಕೃಷ್ಣಪರಮಹಂಸ ಮುಂತಾದವರಿಂದ ರೂಪುಗೊಂಡು ಬೆಳೆದು ಬಂದಿರುವ ನಮ್ಮ ಸನಾತನ ಸಂಸ್ಕೃತಿ ಇಡೀ ವಿಶ್ವಕ್ಕೇ ಮಾದರಿಯಾಗಿದೆ ಅದನ್ನು ನಾವುಗಳು ನಮ್ಮ ಮುಂದಿನ ತಲೆಮಾರಿಗೂ ಉಳಿಸಿ, ಬೆಳೆಸಿಕೊಂಡು ಹೋಗುವ ಕೆಲಸ ಮಾಡಬೇಕು ಎಂದರು. ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮಾತನಾಡಿ ಐತಿಹಾಸಿಕ ಇತಿಹಾಸ ಹಿನ್ನೆಲೆಯುಳ್ಳ ಈ ಸ್ಥಳ ಇಂದು ಸುಂದರ ಸ್ಥಳವಾಗಿ ನಿರ್ಮಾಣವಾಗಿದೆ ಶ್ರೀಗಳು 2011 ರಲ್ಲಿ ಕೆ.ಆರ್.ಪೇಟೆಯಲ್ಲಿ ತಹಶಿಲ್ದಾರ್ ಆಗಿದ್ದ ವೇಳೆ ಈ ದೇವಾಲಯಕ್ಕೆ ವಿಶೇಷ ಅನುದಾನ ನೀಡಿದ್ದೆ ಎಂದರು.

> 23 ವರ್ಷದ ಹಿಂದೆ ಇಲ್ಲಿ ಚಿಕ್ಕ ಗುಡಿಯಂತ ದೇವಾಲಯವಾಗಿತ್ತು. ಮಾಜಿ ಮುಖ್ಯಮಂತ್ರಿ ಕುಮಾರಣ್ಣ, ಮಾಜಿ ಸಚಿವ ಸಾ.ರಾ.ಮಹೇಶ್ ಸೇರಿದಂತೆ ಹಲವರು ದೇಗುಲ ನಿರ್ಮಾಣ ಕಾರ್ಯಕ್ಕೆ ಒಂದೂವರೆ ಕೋಟಿ ರೂಪಾಯಿಗಳಿಗು ಅಧಿಕ ಹಣಕಾಸಿನ ನೆರವು ನೀಡಿದ್ದಾರೆ ಅದಲ್ಲದೆ ಕೋಟೆ ಭೈರವೇಶ್ವರಸ್ವಾಮಿಯ ಒಕ್ಕಲಿನ ಗ್ರಾಮಗಳಾದ ಮಿರ್ಲೆ, ಸಾಲಿಗ್ರಾಮ ಸೇರಿದಂತೆ ಹಲವು ಗ್ರಾಮಗಳ ಭಕ್ತರ ಶ್ರಮದ ಫಲವಾಗಿ ಸುಂದರ ದೇವಾಲಯ ನಿರ್ಮಾಣಗೊಂಡಿದೆ. ಐತಿಹಾಸಿಕ ಹಿನ್ನೆಲೆ ಇರುವ ಈ ಸ್ಥಳದಲ್ಲಿ ಶ್ರೀ ಕಾಲಭೈರವೇಶ್ವರ ನೆಲೆಯೂಗಿದೆ. ಈ ಸ್ಥಳ ಪ್ರವಾಸಿತಾಣವಾಗಿ ಮಾರ್ಪಾಡಾಗಬೇಕು
> -ಹೆಚ್.ಟಿ.ಮಂಜು, ಶಾಸಕ

# ಸುಫಾರಿ ಕೊಟ್ಟು ತಮ್ಮನನ್ನೇ ಕೊಲೆ ಮಾಡಿಸಿದ ಅಣ್ಣ ಪ್ರಕರಣ ಭೇಧಿಸುವಲ್ಲಿ ಪೊಲೀಸರು ಯಶಸ್ವಿ

• ಉದಯವಾಹಿನಿ ಮಂಡ್ಯ


ಉದಯವಾಹಿನಿ ಚಿತ್ರ

ಸುಪಾರಿ ಹಂತಕರನ್ನು ಬಂಧನ

ಲಕ್ಷ್ಮೀಗೌಡನ ದೊಡ್ಡಿ ಗ್ರಾಮದಲ್ಲಿ ನಡೆದಿದ್ದ ಕೃಷ್ಣೇಗೌಡ ಕೊಲೆ ಪ್ರಕರಣವನ್ನು ಭೇಧಿಸುವಲ್ಲಿ ಪೊಲೀಸರು ಯಶಸ್ವಿಯಾಗಿದ್ದು, ತಮ್ಮನ ಕೊಲೆಗೆ ಅಣ್ಣನೇ ಸುಫಾರಿ ನೀಡಿರುವುದು ಬೆಳಕಿಗೆ ಬಂದಿದೆ.

ಕೆ.ಎಂ.ದೊಡ್ಡಿ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಪತ್ತೆ ಹಚ್ಚಿದ್ದು, ತಮ್ಮ ಕೃಷ್ಣೇಗೌಡನ ಕೊಲೆಗೆ ಅಣ್ಣ ಗುಡ್ಡಪ್ಪ ಶಿವನಂಜೇಗೌಡ 5 ಲಕ್ಷ ಸುಪಾರಿ ನೀಡಿದ್ದು, ಎಲ್ಲಾ ಸುಪಾರಿ ಹಂತಕರನ್ನು ಬಂದಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮಳವಳ್ಳಿ ತಾಲ್ಲೂಕು ನಿಟ್ಟೂರು ಗ್ರಾಮದ ಲೇಟ್ ಸ್ವಾಮಿರ ಪುತ್ರ ಚಂದ್ರಶೇಖರ್ ಎನ್.ಎಸ್, ಮದ್ದೂರು ತಾಲ್ಲೂಕು ಕೊಪ್ಪದ ಬೋರೇಗೌಡರ ಪುತ್ರ ಆಟೋ ಚಾಲಕ ಸುನಿಲ್ ಬಿ, ಹಾಗೂ ಪ್ರಕಾಶ್ ರವರ ಪುತ್ರ ಮರದ ವ್ಯಾಪಾರಿ ಕೆ.ಪಿ.ಉಲ್ಲಾಸ್ ಗೌಡ, ಆಬಲವಾಡಿ ಗ್ರಾಮದ ಲೇಟ್ ಮರಿಯಯ್ಯರ ಪುತ್ರ ಪ್ರತಾಪ ಎ ಎಂ,ಹಾಗೂ ಲೇಟ್ ಮರಿಯಪ್ಪರ ಪುತ್ರ ಆಟೋ ಚಾಲಕ ಕೆ.ಎಂ. ಅಭಿಷೇಕ್ ಮತ್ತು ಲೇಟ್ ಕೃಷ್ಣಪ್ಪರ ಪುತ್ರ ಕಾರು ಚಾಲಕ ಕೆ.ಶ್ರೀನಿವಾಸ್, ರಾಮನಗರ ಜಿಲ್ಲೆಯ ಜಕ್ಕೇಗೌಡನ ದೊಡ್ಡಿ ಗ್ರಾಮದ ಹನುಮೇಗೌಡರ ಪುತ್ರ ಹರ್ಷ ಹಾಗೂ ಕೊಲೆಯಾದ ಕೃಷ್ಣೇಗೌಡನ ಅಣ್ಣ ಶಿವನಂಜೇ ಗೌಡನನ್ನು ಬಂಧಿಸಲಾಗಿದೆ ಎಂದು ತಿಳಿಸಿದರು. ಕೆ.ಎಂ.ದೊಡ್ಡಿ ಪೊಲೀಸ್ ಠಾಣಾ ವ್ಯಾಪ್ತಿಯ ಲಕ್ಷ್ಮೀಗೌಡನದೊಡ್ಡಿ ಗ್ರಾಮದ ಮಾದನಹಟ್ಟಿ ಅಮ್ಮನ ದೇವಸ್ಥಾನದ ಪಕ್ಕದಲ್ಲಿರುವ ಜಮೀನಿನಲ್ಲಿ ಅಪರಿಚಿತ ಮೂರು ಜನರು ಮಾರಕಾಸ್ತ್ರಗಳಿಂದ ಕೃಷ್ಣೇಗೌಡನನ್ನು ಚುಚ್ಚಿ ಕೊಲೆ ಮಾಡಿ ಪರಾರಿಯಾಗಿದ್ದರು ಈ ಬಗ್ಗೆ ಶಂಕರೇಗೌಡ ಎಂಬುವವರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿತ್ತು.

ನಿಟ್ಟೂರು ಗ್ರಾಮದ ಚಂದ್ರಶೇಖರ ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಕೊಲೆಯಾದ ಕೃಷ್ಣೇಗೌಡ ಸಾಲ ಮಾಡಿಕೊಂಡಿದ್ದು ಸಾಲವನ್ನು ಅಣ್ಣನಾದ ಗುಡ್ಡಪ್ಪ ಶಿವನಂಜೇಗೌಡ ತೀರಿಸಿದ್ದನು. ಇದಕ್ಕೆ ಪ್ರತಿಯಾಗಿ ತನ್ನ ಜಮೀನನ್ನು ಅತ್ತಿಗೆ ಹೆಸರಿಗೆ ಮಾಡಿಕೊಡಲಾಗಿತ್ತು, ಆದರೆ ಜಮೀನನ್ನು ಬಿಟ್ಟುಕೊಡದ ಕೃಷ್ಣೇಗೌಡ ಅಕ್ಕತಂಗಿಯರನ್ನು ಪುಸಲಾಯಿಸಿ ಜಮೀನು ವಿಚಾರದಲ್ಲಿ ಶಿವನಂಜೇಗೌಡನ ವಿರುದ್ಧ ಕೇಸು ದಾಖಲಿಸಿದ್ದನು, ಅಷ್ಟೇ ಅಲ್ಲದೆ ಶಿವನಂಜೇಗೌಡನ ವಿರುದ್ಧ ಮಾತನಾಡುತ್ತಾ ಅವಮಾನ ಮಾಡುವ ರೀತಿಯಲ್ಲಿ ವರ್ತಿಸು ತ್ತಿದ್ದನು ಇದರಿಂದ ರೊಚ್ಚಿಗೆದ್ದ ಅಣ್ಣ ತಮ್ಮನನ್ನೆ ಕೊಲೆ ಮಾಡಲು 5 ಲಕ್ಷ ಸುಪಾರಿ ನೀಡಿರುವುದು ಬೆಳಕಿಗೆ ಬಂದಿದೆ ಎಲ್ಲಾ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ತಿಳಿಸಿದರು. ಕೊಲೆ ಪ್ರಕರಣದ ಆರೋಪಿಗಳ ಪತ್ತಗೆ ಜಿಲ್ಲಾ ಅಪರ ಪೊಲೀಸ್ ಅಧೀಕಕರುಗಳಾದ ಸಿ.ಇ ತಿಮ್ಮಯ್ಯ,.ಎಸ್.ಇ. ಗಂಗಾಧರ ಸ್ವಾಮಿ ಮಾರ್ಗದರ್ಶನದಲ್ಲಿ ಮಳವಳ್ಳಿ ಉಪ-ವಿಭಾಗದ ಡಿವೈಎಸ್.ಪಿ. .ವಿ ಕೃಷ್ಣಪ್ಪ ನೇತೃತ್ವದಲ್ಲಿ ಕೆ.ಎಂ.ದೊಡ್ಡಿ ಪೊಲೀಸ್ ಠಾಣೆಯ ಪೊಲೀಸ ಇನ್ಸ್‌ಪೆಕ್ಟರ್ ಎಸ್.ಆನಂದ್, ಹೆಡ್ ಕಾನ್ಸ್ ಟೇಬಲ್ ಗಳಾದ ನಟರಾಜು, ಮಹೇಶ್, ರಾಜಶೇಖರ್, ರಾಜೇಂದ್ರ, ಶ್ರೀಕಾಂತ್, ಪೊಲೀಸ್ ಕಾನ್ಸ್‌ಟೇಬಲ್‌ಗಳಾದ ವಿಶ್ವಲ್ ಜೆ. ಕರಿಗಾರ, ಅರುಣ್, ಶ್ರೀಕಾಂತ್. ಅನಿಲ್ ಕುಮಾರ್, ಕೌಶಿಕ್, ಚಿರಂಜೀವಿ, ವಿಷ್ಣುವರ್ಧನ, ಕಿರಣ್ ಕುಮಾರ್, ರವಿಕಿರಣ್, ಲೋಕೇಶ್ ಮತ್ತು ವಾಸುದೇವ ರನ್ನು ಒಳಗೊಂಡ ತಂಡ ರಚನೆ ಮಾಡಲಾಗಿತ್ತು. ಸದರಿ ತಂಡದ ಅಧಿಕಾರಿಗಳು ಮತ್ತು ಸಿಬ್ಬಂದಿಯವರ ಕಾರ್ಯದ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು.

# ಮಂಡ್ಯ ತಾಲ್ಲೂಕು ಕಚೇರಿಗೆ ಡಿಸಿ ಡಾ.ಕುಮಾರ ಭೇಟಿ, ಪರಿಶೀಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮಂಡ್ಯ

ಜಿಲ್ಲಾಧಿಕಾರಿ ಡಾ.ಕುಮಾರ ಅವರು ಶನಿವಾರ ಮಂಡ್ಯ ತಾಲ್ಲೂಕು ಕಚೇರಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾರ್ವಜನಿಕರಿಂದ ಕುಂದು ಕೊರತೆ ಅರ್ಜಿಗಳನ್ನು ಸ್ವೀಕರಿಸಿ ಕಾನೂನು ರೀತಿ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ತಾಲ್ಲೂಕು ಕಚೇರಿಗೆ ವಿವಿಧ ಶಾಖೆಗಳಿಗೆ ಭೇಟಿ ನೀಡಿ ಕಡತ ವಿಲೇವಾರಿ ಕುರಿತು ಮಾಹಿತಿ ಪಡೆದುಕೊಂಡು ನಿಗದಿತ ಅವಧಿಯಲ್ಲಿ ಕಡತ ವಿಲೇವಾರಿ ಯಾಗಬೇಕು.ವಿನಾಕರಣ ಸಾರ್ವಜನಿಕರನ್ನು ಕಚೇರಿಗೆ ಅಲೆದಾಡಿಸಬಾರದು ಎಂದು ಸೂಚನೆ ನೀಡಿದರು.

ಸಹಾಯವಾಣಿ ಗ್ರಾಮ ಆಡಳಿತಾಧಿಕಾರಿಗಳ ಕೆಲಸ ಪ್ರಮುಖವಾಗಿದ್ದು,ಅವರು ಅನಿರ್ಧಿಷ್ಟ ಅವಧಿ ಮುಷ್ಕರ ಕೈಗೊಂಡಿರುವ ಹಿನ್ನಲೆ ವಿದ್ಯಾರ್ಥಿಗಳಿಗೆ ಜಾತಿ,ಆದಾಯ ಪ್ರಮಾಣ ಪತ್ರ ನೀಡಲು ತೊಂದರೆಯಾಗುತ್ತಿರುವುದು ಕಂಡುಬಂದಿರುವ ಹಿನ್ನಲೆಯಲ್ಲಿ ಆನ್ ಲೈನ್ ಮೂಲಕ ಗ್ರಾಮ ಆಡಳಿತಾಧಿಕಾರಿಗಳಿಗೆ ಸಲ್ಲಿಸಿರುವ ಅರ್ಜಿಯನ್ನು ಕಂದಾಯ ನಿರೀಕ್ಷಕರ ಲಾಗ್ ಇನ್ ಗೆ ವರ್ಗಾಯಿಸಲಾಗಿದೆ. ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತುರ್ತಾಗಿ ಆದಾಯ ಅಥವಾ ಜಾತಿ ಪ್ರಮಾಣ ಪತ್ರ ಬೇಕಿದ್ದಲ್ಲಿ ನೀಡಲು ಸಹಾಯವಾಣಿ ಸಹ ತೆರೆಯಲಾಗಿದೆ ಎಂದರು. ಜಿಲ್ಲಾಧಿಕಾರಿಗಳು ಕಡತಗಳ ಗಣಕೀಕರಣ ಕೆಲಸಗಳನ್ನು ಸಹ ಪರಿಶೀಲಿಸಿದರು.ಇದೇ ಸಂದರ್ಭದಲ್ಲಿ ಮುಷ್ಕರ ನಿರತ ಗ್ರಾಮ ಆಡಳಿತಾಧಿಕಾರಿಗಳಿಂದ ಮನವಿ ಸ್ವೀಕರಿಸಿದರು.

# ಸಾಹಿತ್ಯ ರಚನೆ ಶೈಕ್ಷಣಿಕ ವಲಯಕ್ಕೆ ಸೀಮಿತವಾಗದಿರಲಿ

## ರೈತರು, ಕಾರ್ಮಿಕರು ಸೇರಿದಂತೆ ಎಲ್ಲಾ ವರ್ಗಗಳ ಜನರ ಅಭಿಪ್ರಾಯಗಳು ದಾಖಲಾಗಬೇಕು: ದೇವನೂರು

• ಉದಯವಾಹಿನಿ ಮೈಸೂರು


ಉದಯವಾಹಿನಿ ಚಿತ್ರ

ಸಾಹಿತ್ಯ ರಚನೆ ಕೇವಲ ಶೈಕ್ಷಣಿಕ ವಲಯಕ್ಕೆ ಸೀಮಿತವಾಗಬಾರದು. ಏಕತಾನತೆಯಿಂದ ನರಳಬಾರದು. ರೈತರು, ಕಾರ್ಮಿಕರು ಸೇರಿದಂತೆ ಎಲ್ಲಾ ವರ್ಗಗಳ ಜನರ ಅಭಿಪ್ರಾಯಗಳು ದಾಖಲಾಗಬೇಕು ಎಂದು ಜೆಎಸ್‌ಎಸ್ ಮಹಿಳಾ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕ ಡಾ.ಮಹೇಂದ್ರಮೂರ್ತಿ ದೇವನೂರು ಹೇಳಿದರು.

ನಂಜನಗೂಡಿನ ಅನುರಾಗ್ ಮಕ್ಕಳ ಮನೆ ಆವರಣದಲ್ಲಿ ಭಾನುವಾರ ಬಿಡುಗಡೆಯಾದ ಗುಂಡ್ಲುಪೇಟೆ ತಾ.ವಡ್ಡಗೆರೆಯ ಡಾ.ಎನ್.ಗವಿಸ್ವಾಮಿ ಅವರ ಮಕ್ಕಳ ಸಾಕಿ ನೋಡು ಕೃತಿ ಕುರಿತು ಮಾತನಾಡಿದ ಅವರು, ಅಕಾಡೆಮಿಕ್ ವಲಯದವರು ರಚಿಸಿರುವ ಸಾಹಿತ್ಯ ಶ್ರೇಷ್ಠ, ಇತರರದು ಆ ರೀತಿ ಇರುವುದಿಲ್ಲ ಎಂಬ ಭಾವನೆ ಹೋಗಬೇಕು. ಎಲ್ಲಾ ವರ್ಗದ ಜನತೆ ತಮ್ಮ ಅನುಭವಗಳನ್ನು ದಾಖಲು ಮಾಡಿದಾಗ ಮಾತ್ರ ಸಾಹಿತ್ಯ ಸಮೃದ್ಧವಾಗಲು ಸಾಧ್ಯ ಎಂದರು. ಇದೇ ರೀತಿ ಇಲ್ಲಿ ಡಾ.ಎನ್.ಗವಿಸ್ವಾಮಿ ಅವರು ತಮಗೆ ದಕ್ಕಿದ ಅನುಭವಗಳನ್ನು ಅಕ್ಷರರೂಪದಲ್ಲಿ ದಾಖಲು ಮಾಡಿದ್ದಾರೆ. ಅವರದು ಮಾತು ಕಡಿಮೆ. ಆದರೆ ಬರವಣಿಗೆ ಮೊನಚು ಎಂದರು. ಕೃತಿ ಬಿಡುಗಡೆ ಮಾಡಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಡಾ.ಎನ್. ಗವಿಸ್ವಾಮಿ ಅವರ ಎಲ್ಲಾ ಕೃತಿಗಳು ಕೂಡ ವೃತ್ತಿ ಹಾಗೂ ವೈಯಕ್ತಿಕ ಬದುಕಿನ ಅನುಭವಗಳಿಂದ ಕೂಡಿವೆ. ತಾವು ಕಂಡಿದ್ದನ್ನು ಸ್ವಾರಸ್ಯಕರವಾಗಿ ಕಟ್ಟಿಕೊಟ್ಟಿದ್ದಾರೆ. ಮಕ್ಕಳ ಲಾಲನೆ-ಪಾಲನೆಯಲ್ಲಿ ಇಷ್ಟೊಂದು ಸಂಕೀರ್ಣತೆ ಇದೆ ಎಂಬುದ ತಿಳಿಯಬೇಕಾದರೆ ಈ ಕೃತಿಯನ್ನು ಓದಬೇಕು ಎಂದರು. ಚಾಮರಾಜನಗರ ರಂಗವಾಹಿನಿ ಸಂಸ್ಥೆಯ ಮುಖ್ಯಸ್ಥ, ಖ್ಯಾತ ಜನಪದ ಗಾಯಕ ಸಿ.ಎಂ.ನರಸಿಂಹಮೂರ್ತಿ ಮಾತನಾಡಿ, ಮಹದೇಶ್ವರ, ಮಂಟೇಸ್ವಾಮಿ, ಸಂಚಿ ಹೊನ್ನಮ್ಮ, ನಿಜಗುಣ, ಷಡಕ್ಷರಿ. ಹನೂರು ಕೃಷ್ಣಮೂರ್ತಿ, ಹನೂರು ಚನ್ನಪ್ಪ ಸೇರಿದಂತೆ ಹಲವಾರು ಸಾಹಿತಿಗಳನ್ನು ಕೊಡುಗೆಯಾಗಿ ನೀಡಿರುವ ಚಾಮರಾಜನಗರಪ ಜಿಲ್ಲೆಯಿಂದ ಈಗ ಡಾ.ಎನ್.ಗವಿಸ್ವಾಮಿ ಗಮನ ಸೆಳೆಯುವ ಸಾಹಿತ್ಯ ರಚನೆಯಲ್ಲಿ ತೊಡಗಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು.

ಅಧ್ಯಕ್ಷತೆ ವಹಿಸಿದ್ದ ಅನುರಾಗ್ ಸೇವಾ ಟ್ರಸ್ಟ್ ಅಧ್ಯಕ್ಷ ಡಿ.ಜಿ. ಸೋಮಶೇಖರಮೂರ್ತಿ ಮಾತನಾಡಿ, ಮಕ್ಕಳಿಗೆ ಅಕ್ಷರ, ಆರೋಗ್ಯ ಸೇವೆ ಒದಗಿಸಲಾಗುತ್ತಿದೆ. ಉತ್ತಮ ಸಂಸ್ಕಾರ ಕಲಿಸಲಾಗುತ್ತಿದೆ. ಮಕ್ಕಳಿಗೆ ಗುರುಗಳಾಗುವ ಬದಲು ಪೋಷಕರಂತೆಯೇ ನಡೆದುಕೊಳ್ಳಲಾಗುತ್ತಿದೆ ಎಂದರು. ಸಾಹಿತಿ ಕಳಲೆ ಜವರನಾಯಕ ಮುಖ್ಯ ಅತಿಥಿಗಳಾಗಿದ್ದರು. ಇನಿತನಿ ಪ್ರಕಾಶನದ ಸಿ.ಎಂ.ನರಸಿಂಹಮೂರ್ತಿ ಜನಪದಗೀತೆಗಳನ್ನು ಹಾಡಿದರು. ಮಹೇಶ್ ಸ್ವರಚಿತ ಕವನ ವಾಚಿಸಿದರು. ಪುಟಾಣಿ ಇನಿ ವಚನಗೀತೆ ಹಾಡಿದಳು. ಸೌಭಾಗ್ಯ ಮಹದೇವಸ್ವಾಮಿ ಪ್ರಾರ್ಥಿಸಿದರು. ವೃಷಬೇಂದ್ರ ಸ್ವಾಗತಿಸಿದರು.

### ಚಾ. ನಗರ ಸೀಮೆಯ ಹಲವಾರು ಕನ್ನಡ ಪದಗಳನ್ನು ಈ ಕೃತಿಯಲ್ಲಿ ಬಳಕೆ

ಮೊಬೈಲ್ ಬಂದು ಯಾರೂ ಓದದಂತೆ ಮಾಡಿದೆ. ಸಾಮಾಜಿಕ ಜಾಲತಾಣದ ಸಂಕೀರ್ಣ ಸಂದರ್ಭದಲ್ಲಿ ಪ್ರಸ್ತುತ ಲೇಖಕನೇ ತನ್ನ ಕೃತಿಯ ಬಗ್ಗೆ ಮಾರ್ಕೆಟ್ ಮಾಡಬೇಕಾಗಿದೆ. ಕನ್ನಡದ ಬಹುದೊಡ್ಡ ಸಮಸ್ಯೆ ಎಂದರೇ ಇದು ಅನ್ನಕೊಡುವ ಭಾಷೆಯಲ್ಲ ಎಂಬ ಮನೋಭಾವ. ಇದು ಹೋಗಬೇಕು. ಭಾಷೆ ಒಗ್ಗೂಡಿಸಬೇಕೆ ಹೊರತು ವಿಭಜಿಸಬಾರದು ಎಂದು ಅವರು ಹೇಳಿದರು.

### ಭಾಷೆಯ ಸೊಗಡಿನ ವಿಚಾರ ಬಂದಾಗಲೆಲ್ಲಾ ದೇವನೂರು ಅವರ ಹೆಸರು ಪ್ರಸ್ತಾಪ

ಕುವೆಂಪು ಅವರ ಪ್ರಭಾವದಿಂದ ಹೊರಬರಲು ಜಿ.ಎಸ್.ಶಿವರುದ್ರಪ್ಪ ಎರಡು ಕವನ ಸಂಕಲನಗಳನ್ನು ಹೊರತರಬೇಕಾಯಿತು. ಅದೇ ರೀತಿ ದ.ರಾ.ಬೇಂದ್ರೆ ಅವರ ಪ್ರಭಾವದಿಂದ ಹೊರಬರಲು ಚೆನ್ನವೀರ ಕಣವಿ ಅವರು ಶ್ರಮ ಪಡಬೇಕಾಯಿತು. ದೇವನೂರು ಮಹದೇವ ಅವರಂತೆ ಮೊಗಳ್ಳಿ ಗಣೇಶ್ ಬರೆಯಬಹುದು. ಅದೇ ರೀತಿ ಡಾ.ಸಿದ್ದಲಿಂಗಯ್ಯ ಅವರದು ಬೆಂಗಳೂರು ಕನ್ನಡ, ಅರವಿಂದ ಮಾಲಗತ್ತಿ ಅವರದು ಮತ್ತೊಂದು ರೀತಿ. ನಂಜನಗೂಡು, ಚಾಮರಾಜನಗರ ಭಾಷೆಯ ಸೊಗಡಿನ ವಿಚಾರ ಬಂದಾಗಲೆಲ್ಲಾ ದೇವನೂರು ಮಹಾದೇವ ಅವರ ಹೆಸರು ಪ್ರಸ್ತಾಪವಾಗುತ್ತದೆ. ಅದೇ ರೀತಿ ಡಾ.ಗವಿಸ್ವಾಮಿ ಅವರು ಚಾಮರಾಜನಗರ ಸೀಮೆಯ ಹಲವಾರು ಕನ್ನಡ ಪದಗಳನ್ನು ಈ ಕೃತಿಯಲ್ಲಿ ಬಳಕೆ ಮಾಡಿದ್ದಾರೆ ಎಂದು ಅವರು ಹೇಳಿದರು.

> ಪಿ. ಲಂಕೇಶ್ ಅವರ ಅವ್ವ ಕವನ, ಜಿ.ಎಸ್. ಶಿವರುದ್ರಪ್ಪ ಅವರ ದೀಪಧಾರಿ ಕವನ, ನಮ್ಮ ಮನೆಯ ದೀಪ ಎಂಬ ಕವನದ ಸಂದೇಶಗಳು ಡಾ.ಎನ್.ಗವಿಸ್ವಾಮಿ ಅವರ ಲೇಖನಗಳಲ್ಲಿ ಕಂಡು ಬರುತ್ತವೆ. ಮಕ್ಕಳೊಂದಿಗಿನ ಅವರ ಅಭಿವ್ಯಕ್ತಿ ಇಲ್ಲಿ ಅಕ್ಷರ ರೂಪದಲ್ಲಿ ವ್ಯಕ್ತವಾಗಿದೆ. ಇಲ್ಲಿನ ಲೇಖನಗಳನ್ನು ಗಮನಿಸಿದಾಗ ಲೇಖನ, ಪ್ರಬಂಧ, ಕತೆಗಳ ನಡುವಿನ ಗೆರೆ ಅಳಿಸಿ ಹೋಗಿದೆ. ಇಲ್ಲಿ ಕಟ್ಟಿಕೊಟ್ಟಿರುವುದು ಆತ್ಮಕತೆಯೂ ಹೌದು, ಜೀವನಾನುಭವೂ ಹೌದು
> -ಡಾ.ಮಹೇಂದ್ರಮೂರ್ತಿ ದೇವನೂರು

ಅಂತರಾಳದಿಂದ... EDITORIAL

# ಕೇಂದ್ರ ಬಜೆಟ್‌ಗೆ ಭಾರವಾದ ದಲಿತರು

ದೇಶವೆಂದರೆ ಅದರ ಮಣ್ಣು ಮಾತ್ರವಲ್ಲ, ದೇಶವೆಂದರೆ ಅದರ ಜನರು'' ಎಂದು ಖ್ಯಾತ ತೆಲುಗು ಕವಿ ಗುರಜದ ಅಪ್ಪಾ ರಾವ್ ಅವರ ಪ್ರಸಿದ್ಧ ಸಾಲಿನೊಂದಿಗೆ ಈ ಬಾರಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್‌ನ್ನು ಮಂಡಿಸಿದ್ದರು. ದೇಶ ಕಟ್ಟುವುದೆಂದರೆ, ತೆರಿಗೆ ವಿಧಿಸುವ ಮೂಲಕ ಜನಸಾಮಾನ್ಯರನ್ನು ಸುಲಿಗೆ ಮಾಡುವುದು ಎಂಬ ಬಿಜೆಪಿಯ ರಾಷ್ಟ್ರೀಯವಾದಕ್ಕೆ ವ್ಯತಿರಿಕ್ತವಾಗಿ ವಿತ್ತ ಸಚಿವೆಯ ಬಾಯಿಯಿಂದ ಉದುರಿದ ಕವಿತೆಯ ಸಾಲು ಜನತೆಗೆ ಅನಿರೀಕ್ಷಿತವಾಗಿತ್ತು. ದೇಶ ಕಟ್ಟುವುದಕ್ಕೂ ಜನಸಾಮಾನ್ಯರ ಬದುಕಿಗೂ ಸಂಬಂಧವೇ ಇಲ್ಲ ಎನ್ನುವಂತಹ ಆರ್ಥಿಕ ನೀತಿಗಳಿಂದ ಸುಸ್ತು ಹೊಡೆದಿದ್ದ ಜನರು, ಈ ಬಾರಿಯ ಬಜೆಟ್‌ನಲ್ಲಿ ಕನಿಷ್ಠ, ದೇಶವಂದರೆ ಬರೀ ಗಡಿಗಳಲ್ಲ, ಅಲ್ಲಿ ಮನುಷ್ಯರಿಗೂ ಪಾಲಿದೆ ಎನ್ನುವುದನ್ನು ಬಾಯಿ ಮಾತಿಗಾದರೂ ಪ್ರಧಾನಿ ಮೋದಿ ಒಪ್ಪಿಕೊಂಡರಲ್ಲ ಎಂದು ಜನರು ಸಂತೃಪ್ತಿಪಟ್ಟುಕೊಂಡರು.

ಕೇಂದ್ರ ಸರಕಾರದ ತೆರಿಗೆ ಭಯೋತ್ಪಾದನೆಯಿಂದ ತತ್ತರಿಸಿದ ಜನರ ಪಾಲಿಗೆ ತೆರಿಗೆಯ ವಿನಾಯಿತಿ ಬಹುದೊಡ್ಡ ಕೊಡುಗೆ ಎಂಬಂತೆ ವಿತ್ತಸಚಿವರು ಬಣ್ಣಿಸಿದರು.

ಸರಕಾರ ಮೊಣಕೈಗೆ ಹಚ್ಚಿದ ಬೆಣ್ಣೆಯನ್ನು ಯಾವ ರೀತಿ ಚಪ್ಪರಿಸಬೇಕು ಎನ್ನುವುದನ್ನರಿಯದೆ ಈ ದೇಶದ ಮಧ್ಯಮ ವರ್ಗ ಇನ್ನೂ ನಾಲಗೆ ಹೊರಳಿಸುತ್ತಲೇ ಇದೆ. ಬೆಲ್ಲವಿನ್ನೂ ಅವರ ನಾಲಗೆಗೆ ಎಟಕಿಲ್ಲ. ಇದೇ ಹೊತ್ತಿಗೆ ಈ ದೇಶದ ದೊಡ್ಡ ಸಂಖ್ಯೆಯ ದಲಿತರು ನೇರ ತೆರಿಗೆಯ ವ್ಯಾಪ್ತಿಗೆ ಬರದವರು ಇನ್ನೂ ದೇಶದ ಅಭಿವೃದ್ಧಿಯ ಕಲ್ಪನೆಯಿಂದ ಸಂಪೂರ್ಣ ಹೊರಗಿದ್ದಾರೆ. ಈ ಬಜೆಟ್‌ನಲ್ಲಿ ಇವರ ಸ್ಥಾನ ಎಲ್ಲಿದೆ ಎಂದು ಯೋಚಿಸಿದರೆ, ಅಪ್ಪಾರಾವ್ ಕವಿತೆಯನ್ನು ವಿತ್ತ ಸಚಿವೆ ಯಾಕೆ ಉಲ್ಲೇಖಿಸಿದರು ಎನ್ನುವುದು ಅರ್ಥವಾಗಿಡುತ್ತದೆ. ಇಡೀ ಬಜೆಟ್‌ನ್ನು ಅವಲೋಕಿಸಿದಾಗ ದಲಿತರು ಈ ದೇಶಕ್ಕೆ ಸಂಬಂಧಪಟ್ಟ ಜನರು ಅಲ್ಲವೇನೋ ಎನ್ನುವ ಅನುಮಾನ ಹುಟ್ಟಿಬಿಡುತ್ತದೆ. 2011ರ ಜನಗಣತಿಯ ಪ್ರಕಾರ, ದೇಶದಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಜಾತಿಗಳ ಜನಸಂಖ್ಯೆ 16.6 ಶೇ. ಅವರ ಪೈಕಿ ಹೆಚ್ಚಿನವರು ಅತಿ ಬಡವರು. ಪರಿಶಿಷ್ಟ ಜಾತಿಗಳ ಜನಸಂಖ್ಯೆಗೆ ಅನುಗುಣವಾಗಿ ಅವರ ಕಲ್ಯಾಣ ಯೋಜನೆಗಳಿಗೆ ಅನುದಾನ ನೀಡುವಂತೆ ಸಮುದಾಯದ ಹಕ್ಕುಗಳ ಪರವಾಗಿ ಹೋರಾಡುತ್ತಿರುವ ಸಂಘಟನೆಗಳು ಒತ್ತಾಯಿಸುತ್ತಲೇ ಬರುತ್ತಿವೆ. ಆದರೆ, ಈ ಬೇಡಿಕೆಯನ್ನು ಈ ಬಜೆಟ್‌ನಲ್ಲೂ ಸಂಪೂರ್ಣವಾಗಿ ನಿರ್ಲಕ್ಷಿಸಲಾಗಿದೆ. ಬಜೆಟ್‌ನ ಕೇವಲ 3.4 ಶೇ. ಅನುದಾನವನ್ನು ಮಾತ್ರ ಅವರಿಗೆ ನೀಡಲಾಗಿದೆ. ಇದರಲ್ಲೂ, ಹೆಚ್ಚಿನ ಹಣವನ್ನು ಕಾರ್ಪೊರೇಟ್ ಕಂಪೆನಿಗಳಿಗೆ ನೀಡಲಾಗಿದೆ. ಅಂದರೆ ಈ ದೇಶ ಎಂದರೆ ಯಾರು ಎನ್ನುವುದನ್ನು ಈ ಮೂಲಕ ನಾವು ಅರ್ಥಮಾಡಿಕೊಳ್ಳಬೇಕಾಗಿದೆ. ಪರಿಶಿಷ್ಟ ಜಾತಿಗಳ ಜನರ ಶಿಕ್ಷಣಕ್ಕಾಗಿ ಬಜೆಟ್‌ನಲ್ಲಿ ವಿಶೇಷ ಅನುದಾನ ಒದಗಿಸಬೇಕೆಂಬ ಪ್ರಸ್ತಾವವನ್ನು ಪೂನಾ ಒಪ್ಪಂದದಲ್ಲೇ ಸೇರಿಸಲಾಗಿತ್ತು. ವಂಚಿತ ವಿಭಾಗಗಳಿಗೆ ಉತ್ತಮ ಅವಕಾಶಗಳನ್ನು ನೀಡುವ ಮೂಲಕ ಸಾಮಾಜಿಕ, ರಾಜಕೀಯ ಮತ್ತು ಆರ್ಥಿಕ ಅಸಮಾನತೆಯನ್ನು ಹೋಗಲಾಡಿಸುವುದು ಸರಕಾರದ ಜವಾಬ್ದಾರಿಯಾಗಿದೆ ಎಂಬುದಾಗಿ ಡಾ. ಬೀಮರಾವ್ ಅಂಬೇಡ್ಕರ್ ಅಭಿಪ್ರಾಯಪಟ್ಟಿದ್ದಾರೆ. 2017ರಲ್ಲಿ, ಮೋದಿ ಸರಕಾರವು ಪರಿಶಿಷ್ಟ ಜಾತಿಗಳಿಗೆ ಸಂಬಂಧಿಸಿದ ಯೋಜನೆಗಳ ಹೆಸರನ್ನು 'ಪರಿಶಿಷ್ಟ ಜಾತಿ ಕಲ್ಯಾಣ ಕಾರ್ಯಕ್ರಮ' ಎಂಬುದಾಗಿ ಬದಲಾಯಿಸಿತು. ಪರಿಶಿಷ್ಟ ಜಾತಿಗಳ ಜನರ ಸಾಮಾಜಿಕ ಸಬಲೀಕರಣ, ಶೈಕ್ಷಣಿಕ ಪ್ರಗತಿ ಮತ್ತು ಆರ್ಥಿಕ ಸಬಲೀಕರಣಕ್ಕಾಗಿ ಅವರ ಆದಾಯ ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು ಕಾರ್ಯಕ್ರಮದ ಉದ್ದೇಶ ಎಂಬುದಾಗಿ ಘೋಷಿಸಲಾಯಿತು. ಅವರ ಆದಾಯ ಹೆಚ್ಚಿಸುವ ಯೋಜನೆಗಳು, ಕೌಶಲ ಅಭಿವೃದ್ಧಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಹಣ ಖರ್ಚು ಮಾಡಲಾಗುತ್ತದೆ ಎಂಬುದಾಗಿ ಸ್ಪಷ್ಟವಾಗಿ ಹೇಳಲಾಗಿತ್ತು. ಕೌಶಲ ಅಭಿವೃದ್ಧಿಗೆ ಉಪ ಯೋಜನೆ ಬಜೆಟ್‌ನ 10 ಶೇ. ದಷ್ಟನ್ನು ಖರ್ಚು ಮಾಡುವುದು ಕಡ್ಡಾಯ ಎಂಬುದಾಗಿಯೂ ಹೇಳಲಾಗಿತ್ತು. 2025-26ರ ಸಾಲಿನ ಬಜೆಟ್ ಗಮನಿಸಿದರೆ, ಪರಿಶಿಷ್ಟ ಜಾತಿಗಳಿಗೆ 1,68,478.38 ಕೋಟಿ ರೂ. ಅನುದಾನ ಒದಗಿಸಲಾಗಿದೆ. ಇದು ಕಳೆದ ವರ್ಷದ ಅನುದಾನ 1,65,500.05 ಕೋಟಿ ರೂ.ಗಿಂತ ಕೊಂಚ ಹೆಚ್ಚಾಗಿದೆ. 5 ಶೇ. ಹಣದುಬ್ಬರವನ್ನು ಗಣನೆಗೆ ತೆಗೆದುಕೊಂಡರೆ, ವಾಸ್ತವಿಕವಾಗಿ ಅನುದಾನದಲ್ಲಿ ಕಡಿತವಾಗಿದೆ. ಇನ್ನೊಂದು ಮುಖ್ಯ ವಿಷಯವೂ ಇದೆ. ಕಳೆದ ಹಣಕಾಸು ವರ್ಷದಲ್ಲಿ ಒದಗಿಸಲಾಗಿದ್ದ ಅನುದಾನದ ಪೈಕಿ ಕೇವಲ 1,38,362.52 ಕೋಟಿ ರೂ. ಮೊತ್ತವನ್ನು ಮಾತ್ರ ಖರ್ಚು ಮಾಡಲಾಗಿದೆ. ಭಾರತವನ್ನು ಕುಶಲ ಉದ್ಯೋಗಿಗಳ ದೊಡ್ಡ ಮಾರುಕಟ್ಟೆಯನ್ನಾಗಿ ಮಾಡಲಾಗುವುದು ಮತ್ತು ಕುಶಲ ಉದ್ಯೋಗಿಗಳನ್ನು ವಿದೇಶಗಳಿಗೆ ಪೂರೈಸಲಾಗುವುದು ಎಂಬುದಾಗಿ ಸ್ವತಃ ಪ್ರಧಾನಿ ನರೇಂದ್ರ ಮೋದಿ ಬಜೆಟ್‌ಗೆ ಮೊದಲು ಘೋಷಿಸಿದ್ದರು. ಆದರೆ, ಕೌಶಲ ಅಭಿವೃದ್ಧಿಯ ಪ್ರಮುಖ ಸಂಸ್ಥೆಗಳ ಪರಿಶಿಷ್ಟ ಜಾತಿ ಉಪ ಯೋಜನೆ ಬಜೆಟ್‌ನತ್ತ ನೋಡಿದರೆ ನಿರಾಶೆಯಾಗುತ್ತದೆ. ಐಐಟಿಯಂಥ ಖ್ಯಾತ ಸಂಸ್ಥೆಗಳ ಪರಿಶಿಷ್ಟ ಜಾತಿ ಬಜೆಟ್‌ಗೆ ಕಳೆದ ವರ್ಷ 631.60 ಕೋಟಿ ರೂ. ಒದಗಿಸಲಾಗಿತ್ತು. ಈ ಬಾರಿ ಆ ಮೊತ್ತವನ್ನು ಕೇವಲ 50 ಕೋಟಿ ರೂ.ಯಷ್ಟು ಹೆಚ್ಚಿಸಲಾಗಿದೆ.ಐಐಟಿ ಹೈದರಾಬಾದ್‌ನಲ್ಲಿ 2023-24ರಲ್ಲಿ ಪರಿಶಿಷ್ಟ ಜಾತಿಗಳ ವಿದ್ಯಾರ್ಥಿಗಳಿಗಾಗಿ 48.54 ಕೋಟಿ ರೂ. ಖರ್ಚು ಮಾಡಲಾಗಿತ್ತು. ಈ ಬಾರಿ ಅದಕ್ಕೆ ಯಾವುದೇ ಅನುದಾನ ಒದಗಿಸಲಾಗಿಲ್ಲ. ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನಂಥ ಮಹತ್ವದ ಸಂಸ್ಥೆಗೆ 2023-24ರಲ್ಲಿ 20.63 ಕೋಟಿ ರೂ. ಒದಗಿಸಲಾಗಿತ್ತು.

**ಪದ್ಯದ ಸಾಲಿಗೆ ತಾಳ ಕುಟ್ಟುವಂತೆ, ದೇಶದಲ್ಲಿ ಬಡತನ ಶೂನ್ಯವಾಗಿಸುವುದು, 100 ಶೇ. ಗುಣಮಟ್ಟದ ಶಾಲಾ ಶಿಕ್ಷಣ, ಉತ್ತಮ ಗುಣಮಟ್ಟದ ಹಾಗೂ ಮಿತದರದ ಸಮಗ್ರ ಆರೋಗ್ಯ ಸೇವೆ, ಕುಶಲ ಕೆಲಸಗಾರರಿಗೆ 100 ಶೇಕಡ ಉದ್ಯೋಗ, ಆರ್ಥಿಕ ಚಟುವಟಿಕೆಗಳಲ್ಲಿ 70 ಶೇಕಡ ಮಹಿಳೆಯರು ಪಾಲ್ಗೊಳ್ಳುವಂತೆ ಮಾಡುವುದು, ರೈತರ ಸಮೃದ್ಧಿಯನ್ನು ಖಾತರಿಪಡಿಸುವುದು ತನ್ನ ಬಜೆಟ್‌ನ ಉದ್ದೇಶವಾಗಿದೆ ಎಂದೂ ಸಚಿವೆ ವಿವರಿಸಿದರು.**



# ರಾಮಾಯಣ


ದಶರಥ ಕೈಕೇಯಾದೇವಿಯರ ಸಂವಾದ

• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಕೃಪೆ ಮಾಡು. ಅಧಿಕವಾದ ದುಃಖಾತಿಶಯದಿಂದ ಹಂಬಲಿಸುತ್ತ ಚೈತನಿಗೆಟ್ಟು ಬಳಲಿ ಬೀಳುತ್ತ ಶೋಕಸಮುದ್ರದಲ್ಲಿ ಮುಳುಗಿರುವ ನನ್ನನ್ನು ಉದ್ಧರಿಸಿ ಕಡೆಹಾಯಿಸು ಎಂದು ದಶರಥನು ಗೋಳಾಡಿದನು.

ಆಗ ಕೈಕೇಯಾದೇವಿಯು ಅತಿರೌದ್ರವಾಗಿ ಕರ್ಣಕಠೋರವಾದ ವಾಕ್ಯಗಳಿಂದ ಹೀಗೆಂದಳು : ಮಹಾರಾಜ, ನನ್ನ ಇಷ್ಟಾರ್ಥವನ್ನು ಸಲ್ಲಿಸಿಕೊಡುವುದಾಗಿ ಪ್ರತಿಜ್ಞೆಯನ್ನು ಮಾಡಿ ಈಗ ವಶ್ಚಾತ್ತಾಪಪಾಡುವ ನೀನು ಲೋಕದಲ್ಲಿ ಹೇಗೆ ತಾನೆ ಧಾರ್ಮಿಕನೆನ್ನಿಸಿಕೊಳ್ಳುತ್ತೀಯೆ ಇನ್ನು ಮುಂದೆ ದಶರಥರಾಯನು ಮಹಾಸತ್ಯಸಂಧನೆಂದೂ ಸಮಸ್ತ ರಹಸ್ಯಗಳನ್ನು ಬಲ್ಲವನೆಂದೂ ಕೊಂಡಾಡಿದವರೊಡನೆ ಏನೆಂದು ನುಡಿಯುವೆ ನನ್ನ ಮಿತ್ರರೊಡನೆ ಇಷ್ಟಕಥಾಲಾಪದಲ್ಲಿ ನಾನು ಕೈಕೇಯಿಯಿಂದ ಜೀವಿಸಿಕೊಂಡಿದ್ದೇನೆ. ಆಕೆಯು ಪೂರ್ವದಲ್ಲಿ ನನಗೆ ಒಂದು ಆಪತ್ತು ಬಂದಾಗ ನನ್ನನ್ನು ರಕ್ಷಿಸಿದಳು. ಆ ದೇವಿಯು ನನ್ನ ಪ್ರಾಣಗಳಿಗಿಂತಲೂ ಅಧಿಕಳು' ಎಂದು ನುಡಿಯುತ್ತಿದ್ದ ನೀನು ಮುಂದೆ ಕೈಕೇಯಿಯು ದುಷ್ಟೆ' ಎಂದರೆ ಕೇಳಿದವರು ನಿನ್ನ ಮಾತನ್ನು ಹೇಗೆ ಪ್ರಮಾಣಿಸುವರು ಈಗ ನನಗೆ ಬೇಕಾದ ವರಗಳನ್ನು ಕೊಡುವುದಾಗಿ ಹೇಳಿ ಹೀಗೆ ತಪ್ಪು ಮಾತುಗಳನ್ನಾಡಿದರೆ ನೀನು ನಿನ್ನ ವಂಶದ ಸಮಸ್ತ ರಾಯರಿಗೂ ಅಪಕೀರ್ತಿಯನ್ನು ತರದೆ ಇರುವುದಿಲ್ಲ. ಪುರಾಣಗಳಲ್ಲಿ ರೈನಕಪೋತಾಖ್ಯಾನವೆಂಬ ಇತಿಹಾನ ಒಂದುಂಟು : ಗಿಡಗ ಪಾರಿವಾಳದಕ್ಷಿಗಳಿಗೆ ಯುದ್ಧವಾಗಿ ಗಿಡಗನು ಪಾರಿವಾಳಪಕ್ಷಿಯನ್ನು ಕೊಂದು ತಿನ್ನಬೇಕೆಂದು ಅಟ್ಟಿಬರಲು ಆ ಪಾರಿವಾಳದಕ್ತಿಯು ಬೇಟೆಗಾಗಿ ಹೋಗಿದ್ದ ಶಿಬಿಚಕ್ರವರ್ತಿದಯ ಮರೆಹೊಕ್ಕಿತು. ವಿಬಿಚಕ್ರದರ್ಶಿಯು ಆ ಗಿಡಗನಿಗೆ ತನ್ನ ಶರೀರದ ಮಾಂಸವನ್ನು ಕತ್ತರಿಸಿಕೊಟ್ಟು ಮರೆಹೊಕ್ಕ ಪಾರಿವಾಳಪಕ್ಷಿಯನ್ನು ರಕ್ಷಿಸಿದ. ಅಲರ್ಕನೆಂಬ ಧರ್ಮಿಷ್ಟನು ರಾಜದಂಡದಿಂದ ಒಬ್ಬ ಬ್ರಾಹ್ಮಣನ ನಯನೋತ್ಪಾಟನವನ್ನು ಮಾಡಿ ಆ ಅಪರಾಧಕ್ಕೋಸ್ಕರ ತನ್ನ ಕಣ್ಣನ್ನು ಕೊಟ್ಟು ಆ ಬ್ರಾಹ್ಮಣನನ್ನು ರಕ್ಷಿಸಿದನೆಂಬ 'ಕಥಾವೃತ್ತಾಂತವನ್ನು ಕೇಳಿಲ್ಲವೆ ಸಮುದ್ರವು ತನ್ನ ದಡವನ್ನು ಅತಿಕ್ರಮಿಸದಿರುವುದನ್ನು ಬಲ್ಲೆಯೋ ಈ ಧರ್ಮರಹಸ್ಯಗಳನ್ನು ವಿಚಾರಿಸಿ ನಿನ್ನ ವಂಶದ ರಾಯರ ಹಾಗೆ ನಡೆ ! ಎಲೈ ಅಜ್ಞಾನಿಯಾದ ದಶರಥರಾಯನೆ ನೀನು ಸತ್ಯವನ್ನೂ ಧರ್ಮವನ್ನೂ ಬಿಟ್ಟು ಶ್ರೀರಾಮನಿಗೆ ಪಟ್ಟಾಭಿಷೇಕವನ್ನು ಮಾಡಿ ನನ್ನನ್ನು ಉಪೇಕ್ಷೆಮಾಡಿ ನಿನ್ನ ಪ್ರಿಯಳಾದ ಕೌಸ ಯೊಡನೆ ಸುಖವಾಗಿರಬೇಕೆಂಬ ಯತ್ನವನ್ನು ಮಾಡುತ್ತಿದ್ದೀಯೆ. ಸತ್ಯವಾದರೂ ಆಗಲಿ, ಅಸತ್ಯ ವಾದರೂ ಆಗಲಿ. ನೀನು ನನ್ನ ಸಂಗದ ಆಡಿದ ಮಾತನ್ನು ತಪ್ಪಿ ರಾಮನಿಗೆ ಪಟ್ಟಾಭಿಷೇಕವನ್ನು ಮಾಡಿ ದರೆ ನಿನ್ನ ಮುಂದೆಯೇ ವಿಷಪಾನವನ್ನು ಮಾಡಿ ಶರೀರವನ್ನು ಬಿಡುತ್ತೇನೆ. ನೀನು ರಾಮನಿಗೆ ಪಟ್ಟಾಭಿಷೇಕವನ್ನು ಮಾಡಿದರೆ ಆತನ ತಾಯಿಯಾದ ಕೌಸಲ್ಯಾದೇವಿಯು ಏಕಾಧಿಪತ್ಯವನ್ನು ಪಡೆದು ಸಮಸ್ತ ಜನರಿಂದಲೂ ಕೈಮುಗಿಸಿಕೊಳ್ಳುವಳು.

ಮುಂದುವರಿಯುವುದು...




# ನೆನಪುಗಳ ಖಾತೆಗೆ ಸಾವಿರದ ಶರಣು

## ಹಿರಿಯರು ಬೆಳಕು ನೀಡುವ ಹಣತೆಯಂತೆ




ವಿಶ್ವಾಸ್.ಡಿ.ಗೌಡ

• ಉದಯವಾಹಿನಿ, ವಿಶೇಷ

ಪುಸ್ತಕ ಬರೆಯುವ ಹವ್ಯಾಸವುಳ್ಳವನು ಪುಸ್ತಕಗಳನ್ನು ಓದುವ ಹವ್ಯಾಸಿಯಾಗಿರಬೇಕು. ಆ ನಿಟ್ಟಿನಲ್ಲಿ ವಿಶ್ವಾಸ್ ಡಿ ಗೌಡ ಸಕಲೇಶಪುರ ಹಾಸನ ಇವರು ರಚಿಸಿರುವಂತಹ ಕೃತಿ ನೆನಪುಗಳ ಖಾತೆ ಇದು ಒಂದು ರೀತಿಯ ಸಾಮಾಜಿಕ, ಆಧ್ಯಾತ್ಮಿಕ, ಧಾರ್ಮಿಕ, ವಿಚಾರಗಳನ್ನು ಅವರ ವಿದ್ವತ್ತು ಬರವಣಿಗೆಯ ಮೂಲಕ ಈ ಒಂದು ಕೃತಿಯು ಮೂಡಿಬಂದಿದೆ. ಈ ಕೃತಿಯು ಒಟ್ಟು 41 ಲೇಖನಗಳನ್ನು ಒಳಗೊಂಡಿರುವಂತಹ ಮಹತ್ವವನ್ನು ಪಡೆದಂತಹ ವಸ್ತು ವಿಷಯವನ್ನು ಒಳಗೊಂಡಿದೆ. ಪ್ರತಿಯೊಂದು ಲೇಖನಗಳು ಕೂಡ ಲೇಖಕರ ಪ್ರಭುತ್ವವನ್ನು, ಪ್ರಬುದ್ಧತೆಯನ್ನು ಹೆಚ್ಚಿಸುವಂತಹ ಕೆಲಸವನ್ನು ಮಾಡಿದೆ. ಮನೆಯೇ ಮೊದಲ ಪಾಠಶಾಲೆ,ತಾಯಿನೇ ಮೊದಲ ಗುರು ಎನ್ನುವಂತೆ ಹಾಗೂ ಒಂದಕ್ಕರ ಕಲಿಸಿದಾತಂ ಗುರುಎನ್ನುವ ಮಾತಿನಂತೆ ಗುರು ಎನ್ನುವ ಪದ ತುಂಬಾ ಪರಿಪೂರ್ಣತೆಯನ್ನು ಹೊಂದಿರುವಂಥದ್ದು ಪ್ರಸ್ತುತ ದಿನಮಾನವು ತಂತ್ರಜ್ಞಾನಮಯವಾಗಿ ಬೆಳೆಯುತ್ತಿದೆ. ಹೀಗಿದ್ದರೂ ಕೂಡ ಶಿಕ್ಷಕರ ಒಂದು ಗೌರವ, ಘನತೆಯು ಯಾವುದೇ ನಿಟ್ಟಿನಲ್ಲಿ ಕ್ಷೀಣಿಸಿಲ್ಲ. ಪ್ರಸ್ತುತ ಶಿಕ್ಷಣ ವ್ಯವಸ್ಥೆಯು ಕೇವಲ ಅಂಕಗಳನ್ನಾಧರಿಸಿ ವಿದ್ಯೆ ನೀಡುತ್ತಿರುವುದು ತುಂಬಾ ಶೋಚನೀಯ ಸಂಗತಿ. ಮಕ್ಕಳಿಗೆ ವಿದ್ಯೆಯ ಜೊತೆಗೆ ಸಂಸ್ಕಾರ, ಸಂಸ್ಕೃತಿ, ಬುದ್ಧಿವಂತಿಕೆ ಇವುಗಳ ಬಗ್ಗೆ ತಿಳಿಸಿದಾಗ ಸಮಾಜದ ಬದಲಾವಣೆಯನ್ನು ಮಾಡುವಲ್ಲಿ ವಿದ್ಯಾರ್ಥಿಗಳು ಹಾಗೂ ಯುವ ನಾಗರಿಕರ ಪಾತ್ರ ತುಂಬಾ ಮುಖ್ಯವಾಗಿರುವುದು. ಇದರ ಬಗ್ಗೆ ಲೇಖಕರು ಬರೆದಂತಹ ಅಂಕಗಳ ಬೆನ್ನೇರಿ ಎನ್ನುವ ಲೇಖನವೂ ಹೊಸ ವಿಷಯವನ್ನು ಇಲ್ಲಿ ಆಧರಿಸಿದೆ.

ಈ ಒಂದು ಲೇಖನ ಸಂಕಲನವು ಪ್ರಸ್ತುತ ಸಮಾಜದ ಸ್ಥಿತಿಗತಿಗಳು, ಮನುಷ್ಯರ ವೈಯಕ್ತಿಕ ಆಲೋಚನೆಗಳು, ಸಮಸ್ಯೆಗಳು, ಕುರುಡು ಪ್ರೀತಿ, ಢಾಂಬಿಕತನ ಮೂಢನಂಬಿಕೆ, ಮಕ್ಕಳ ಮೇಲಿನ ಅತಿಯಾದ ವ್ಯಾಮೋಹ, ರೈತನ ನೋವು, ಹೆತ್ತವರ ಪ್ರೀತಿ, ಸ್ನೇಹ ಬಂಧನ, ಹಬ್ಬ ಹರಿದಿನಗಳು, ನಾಡು ನುಡಿಯ ಬಗ್ಗೆ ಇರುವಂತಹ ಪ್ರೇಮ,ಅಭಿಮಾನ,ತಮ್ಮ ಆರೋಗ್ಯಕ್ಕೆ ಉತ್ತಮ ಆಹಾರ, ತತ್ವಜ್ಞಾನಿಗಳ ಹಿತನುಡಿಗಳು ಈ ಎಲ್ಲಾ ವಸ್ತು ವಿಷಯದ ಚಿತ್ರಣವನ್ನು ಈ ಒಂದು ಕೃತಿಯು ಒಳಗೊಂಡಿದೆ. ಲೇಖಕರು ತಾವು ಬರೆದಂತಹ ಈ ಎಲ್ಲಾ ಲೇಖನಗಳು ವ್ಯಕ್ತಿಯ ಜೀವನಕ್ಕೆ ಬೇಕಾದಂತಹ ಉತ್ತಮ ಅಂಶಗಳನ್ನು ಓದುಗರಿಗೆ ಉಣಬಡಿಸುತ್ತವೆ.



ಇಲ್ಲಿ ಬಿಸಿಲಿನ ಬೇಗೆ ತಣಿಸುವುದು ಹೇಗೆ ಎನ್ನುವ ಲೇಖನದಲ್ಲಿ ಬೇಸಿಗೆಯ ಕಾಲದಲ್ಲಿ ಜಳಪಿಸುವ ಬಿಸಿಲಿನ ಶಾಖಕ್ಕೆ ಪ್ರಕೃತಿಯಲ್ಲಿ ಹಲವಾರು ಬದಲಾವಣೆಗಳು ಕಾಣುವುದುಂಟು. ಪ್ರಸ್ತುತ ದಿನಮಾನಗಳಲ್ಲಿ ಪರಿಸರ ನಾಶದಿಂದಾಗಿ ಪ್ರಕೃತಿ ಮಾತೆಯು ಅಸಮತೋಲನವಾಗಿ ಕಾಣುತ್ತಿದ್ದಾಳೆ. ಮಾನವನ ದುರಾಸೆಯಿಂದ ಕಾಡು ನಾಶವಾಗಿ ಕಾಡಿನ ಪ್ರಾಣಿಗಳೆಲ್ಲ ತಮ್ಮ ಬದುಕನ್ನು ಸಾಗಿಸಲಿಕ್ಕೆ ನಾಡಿನ ಕಡೆ ಮುಖ ಮಾಡುತ್ತಿವೆ.ಇಂತಹ ಸ್ಥಿತಿಯಲ್ಲಿ ಸೂರ್ಯನ ಶಾಖವು ಭೂಮಿಗೆ ನೇರವಾಗಿ ಬೀಳುವುದು ಖಚಿತ ಪರಿಸರವನ್ನು ಉಳಿಸೋಣ ಮನುಕುಲವನ್ನು ರಕ್ಷಿಸೋಣ ಬೇಸಿಗೆಯ ಸಮಯದಲ್ಲಿ ಎಂತಹ ಆಹಾರ ಪದ್ಧತಿಯನ್ನು ಈ ರೂಢಿಸಿಕೊಳ್ಳಬೇಕು ಎಂಬುದು ಈ ಒಂದು ಲೇಖನದಲ್ಲಿ ಲೇಖಕರು ತಿಳಿಸಿಕೊಟ್ಟಿದ್ದಾರೆ. ದಾಂಪತ್ಯ ಎನ್ನುವ ಲೇಖನವೂ ಗಂಡ ಹೆಂಡತಿಯ ಮಧ್ಯದಲ್ಲಿ ಯಾವ ರೀತಿಯ ಸಹಬಾಳ್ವೆಯ ಬದುಕು ಸಾಗಿಸಬಹುದು ಎಂಬುದನ್ನು ಕೂಡ ತಿಳಿಸಿಕೊಟ್ಟಿದ್ದಾರೆ. ವ್ಯಕ್ತಿಯು ಜನಿಸಿದ್ದಾನೆಂದರೆ ಅವನಿಗೆ ಕೊನೆಗೊಂದಿನ ಮೋಕ್ಷ ಎಂಬುದು ಪ್ರಾಪ್ತಿಯಾಗಲೇಬೇಕು. ಮನೆಯಲ್ಲಿ ಹಿರಿಯರು ಬೆಳಕು ನೀಡುವ ಹಣತೆಯಂತೆ, ಅದು ಸದಾ ಉರಿಯುತ್ತಿದ್ದರೆ ಮನೆಯು ಬೆಳಕಿನ ವಾತಾವರಣದಿಂದ ಹೊಳೆಯುತ್ತದೆ.

ಹಿರಿಯರು ನಮಗೆಲ್ಲಾ ದಾರಿದೀಪವಿದ್ದಂತೆ ಅವರ ಅನುಭವದ ಮಾತುಗಳು ಜೀವನದ ಸತ್ಯ ಘಟನೆಗಳು ಎಲ್ಲವೂ ಮುಂದಿನ ಪೀಳಿಗೆಗೆ ಮಾರ್ಗ ಸೂಚಿಗಳು. ಈ ಎಲ್ಲಾ ನವ್ಯತೆಯನ್ನು ಸೃಷ್ಟಿಯಾಗಲಿಕ್ಕೆ ಲೇಖಕರು ಹಲವಾರು ನಿದರ್ಶನಗಳನ್ನು ಇಟ್ಟುಕೊಂಡು ಓದುಗರಿಗೆ ಅರ್ಥಗರ್ಭಿತವಾಗಿ ಹೊಸ ವಿಷಯದ ಕುರಿತು ತಿಳಿಸಿಕೊಟ್ಟಿದ್ದಾರೆ.ಈ ಕೃತಿಯು ಪ್ರತಿಯೊಬ್ಬ ಓದುಗನ ಕೈಗೆ ಸಿಗಲಿ ಎಂದು ಹಾರೈಸುವೆ. ಬರೆದದ್ದನ್ನು ಓದದೆ ಹಾಗೆ ಇಟ್ಟರೆ ಅದು ನಿರ್ಜೀವತೆಯನ್ನು ಕಾಣುತ್ತದೆ. ಒಂದು ವೇಳೆ ಅದನ್ನು ಪ್ರತಿಯೊಬ್ಬರೂ ಮೆಲುಕು ಹಾಕುತ್ತಿದ್ದಾಗ ಹೊಸ ಚೇತನವನ್ನು ಕಂಡುಕೊಳ್ಳುತ್ತದೆ. ಅದಕ್ಕೆ ಜೀವವು ಕೂಡ ಬಂದಂತಾಗುತ್ತದೆ.

**ಬಿ. ಹೆಚ್.ತಿಮ್ಮಣ್ಣ ಯಾದಗಿರಿ ಜಿಲ್ಲೆ (ಯುವಕವಿಗಳು,ಲೇಖಕರು, ಹವ್ಯಾಸಿ ಬರಹಗಾರರು) ದೂ.ಸಂ.-6361627958**

# ಹಿಂದೂ ಜನಜಾಗೃತಿ ಸಮಿತಿ ಆಗ್ರಹ

• ಉದಯವಾಹಿನಿ, ಬೆಂಗಳೂರು



## ಕುಂಭ ನಿಷ್ಪ್ರಯೋಜಕ ಆಕ್ಷೇಪಾರ್ಹ ಹೇಳಿಕೆ

144 ವರ್ಷಗಳಲ್ಲಿ ಒಮ್ಮೆ ಬರುವ ಮಹಾಕುಂಭ ಮೇಳಕ್ಕೆ ಭಾರತದ 50 ಕೋಟಿಗೂ ಹೆಚ್ಚು ಹಿಂದೂ ಭಕ್ತರು, 50 ಕ್ಕೂ ಹೆಚ್ಚು ದೇಶಗಳ ಲಕ್ಷಾಂತರ ವಿದೇಶಿಗರು ಹೆಚ್ಚಿನ ಭಕ್ತಿಯಿಂದ ಬರುತ್ತಿದ್ದಾರೆ ಮತ್ತು ಆನಂದವನ್ನು ಅನುಭವಿಸುತ್ತಿದ್ದಾರೆ. ಪ್ರಪಂಚದಾದ್ಯಂತದ ವಿಜ್ಞಾನಿಗಳು, ವಿದ್ವಾಂಸರು ಮತ್ತು ಚಿಂತಕರು ಮಹಾಕುಂಭದ ಆಧ್ಯಾತ್ಮಿಕ ಮತ್ತು ವೈಜ್ಞಾನಿಕ ಮಹತ್ವವನ್ನು ಗಮನಿಸುತ್ತಾರೆ. ಅಂತಹ ಜಾಗತಿಕ ಉತ್ಸವವನ್ನು 'ನಿಷ್ಪ್ರಯೋಜಕ' ಎಂದು ಕರೆಯುವ ಮಾಜಿ ಕೇಂದ್ರ ರೈಲ್ವೆ ಸಚಿವ ಮತ್ತು ಆರ್‌ಜೆಡಿ ಮುಖ್ಯಸ್ಥ ಲಾಲು ಪ್ರಸಾದ ಯಾದವ್ ಇವರು ಕೋಟ್ಯಂತರ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದ್ದಾರೆ. ಹಿಂದೂ ಜನಜಾಗೃತಿ ಸಮಿತಿಯು ಈ ಹೇಳಿಕೆಯನ್ನು ತೀವ್ರವಾಗಿ ಖಂಡಿಸುತ್ತದೆ ಮತ್ತು ಲಾಲು ಪ್ರಸಾದ ಯಾದವ್ ಅವರ ಮೇಲೆ ತಕ್ಷಣ ಕಾನೂನು ಕ್ರಮ ಕೈಗೊಳ್ಳುವಂತೆ ಸರಕಾರಕ್ಕೆ ಒತ್ತಾಯಿಸುತ್ತದೆ !

ದೆಹಲಿ ರೈಲು ನಿಲ್ದಾಣದಲ್ಲಿ ನಡೆದ ಕಾಲ್ತುಳಿತದ ಬಗ್ಗೆ ಪ್ರತಿಕ್ರಿಯೆ ವ್ಯಕ್ತಪಡಿಸಿದ ಲಾಲು ಪ್ರಸಾದ ಯಾದವ್ ಅವರನ್ನು ಮಹಾಕುಂಭ ಮೇಳದ ಜನಸಂದಣಿಯ ಬಗ್ಗೆ ಕೇಳಿದಾಗ, ಕುಂಭಕ್ಕೆ ಯಾವುದೇ ಅರ್ಥವಿಲ್ಲ. ಕುಂಭ ನಿಷ್ಪ್ರಯೋಜಕ ಎಂದು ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ. ಇದನ್ನು ಎಎನ್‌ಐ ಸುದ್ದಿ ಸಂಸ್ಥೆ ವರದಿ ಮಾಡಿದೆ. ಲಾಲು ಪ್ರಸಾದ ಯಾದವ್ ಅವರು ಎಂದಾದರೂ ಇತರ ಧರ್ಮಗಳ ಯಾತ್ರೆಗಳ ಬಗ್ಗೆ ಇಂತಹ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ್ದಾರೆಯೇ ಹಿಂದೂ ಧರ್ಮ ಮತ್ತು ಅದರ ಶ್ರದ್ಧಾಸ್ಥಾನಗಳನ್ನು ಅವಮಾನಿಸುವ ಈ ಪ್ರವೃತ್ತಿಯನ್ನು ಹಿಂದೂ ಸಮಾಜ ಸಹಿಸುವುದಿಲ್ಲ.

**ಹಲವು ವರ್ಷಗಳ ಕಾಲ ಜೈಲಿನಲ್ಲಿ ಕಳೆದ ನಂತರವೂ ಅಪರಾಧಗಳ ಬಗ್ಗೆ ಪಶ್ಚಾತ್ತಾಪ ಪಡದ ಲಾಲು ಪ್ರಸಾದ ಯಾದವ್ ಜಾಮೀನಿನ ಮೇಲೆ ಹೊರಗಿರುವಾಗ ಹಿಂದೂ ಸಮಾಜದ ಶ್ರದ್ಧಾಸ್ಥಾನಗಳನ್ನು ಅವಮಾನಿಸುವ ವಿವಾದಾತ್ಮಕ ಹೇಳಿಕೆಗಳನ್ನು ನೀಡುತ್ತಿದ್ದಾರೆ, ಇದು ಸಮಾಜದಲ್ಲಿ ಬಿರುಕು ಮೂಡಿಸುವ ಮತ್ತು ಹಿಂದೂಗಳ ಭಾವನೆಗಳನ್ನು ಕೆರಳಿಸುವ ಪ್ರಯತ್ನವಾಗಿದೆ. ಸರಕಾರವು ಇದನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಸಮಿತಿಯು ಹೇಳಿದೆ.**

# ನಕಲಿ ದಾಖಲೆಗೆ ಇ-ಖಾತೆ, ಅಧಿಕಾರಿಗಳ ಸಹಿಯೂ ನಕಲು!

• ಉದಯವಾಹಿನಿ, ನೆಲಮಂಗಲ

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಧಿಕಾರಿಗಳ ಸಹಿ ನಕಲು ಮಾಡಿ, ಕೋಟ್ಯಂತರ ರೂ. ವಂಚನೆ ಮಾಡುವುದು ಅವ್ಯಾಹತವಾಗಿ ನಡೆಯುತ್ತಿದೆ. ಕೆಲ ಪ್ರಭಾವಿಗಳೇ ಈ ಅಕ್ರಮದಲ್ಲಿ ತೊಡಗಿದ್ದಾರೆ ಎಂಬ ಆರೋಪ ಕೇಳಿಬಂದಿರುವುದು ಅಚ್ಚರಿಯ ವಿಷಯ. ದೊಡ್ಡಬಳ್ಳಾಪುರದಲ್ಲಿ ತಹಶೀಲ್ದಾರ್ ಸಹಿ ನಕಲಿ ಮಾಡಿ 59 ಲಕ್ಷ ರೂ. ವಂಚನೆ ಪ್ರಕರಣದಲ್ಲಿ ಆರ್‌ಐ ಬಂಧನವಾಗಿದೆ. ಇದು ಜನರನ್ನು ಬೆಚ್ಚಿಬೀಳಿಸಿದೆ. ಇದರ ಬೆನ್ನಲ್ಲೇ ಕೆಲ ಪ್ರಭಾವಿಗಳು ಇಂತಹ ಅಕ್ರಮದಲ್ಲಿ ತೊಡಗಿರುವುದು ಬೆಳಕಿಗೆ ಬರುತ್ತಿದ್ದು, ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಈ ಪ್ರಭಾವಿಗಳು ನಕಲಿ ದಾಖಲೆ ಸೃಷ್ಟಿಸಿ, ತಹಶೀಲ್ದಾರ್, ಇಒ, ಪಿಡಿಒ ಸಹಿಗಳನ್ನು ನಕಲಿ ಮಾಡಿ ಸರಕಾರಕ್ಕೆ ಹಾಗೂ ಬಡಜನರಿಗೆ ಮೋಸ ಮಾಡುವಲ್ಲಿ ನಿರತರಾಗಿದ್ದಾರೆ. ಇದಕ್ಕೆ ನೆಲಮಂಗಲ ತಾಲ್ಲೂಕಿನ ಹೊನ್ನೇನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ನಡೆದಿರುವ ಪ್ರಕರಣವೊಂದು ನಿದರ್ಶನವಾಗಿದೆ. ಕೆಂಗಲ್ ಕೆಂಪೋಹಳ್ಳಿ ಗ್ರಾಮದ ಸರ್ವೆ ನಂಬರ್ 25ರಲ್ಲಿ 25 ರಿಂದ 30 ಲಕ್ಷ ರೂಪಾಯಿಗೂ ಹೆಚ್ಚು ಬೆಲೆ ಬಾಳುವ ನಿವೇಶನಗಳನ್ನು ಇದೇ ರೀತಿ 20ಕ್ಕೂ ಹೆಚ್ಚು ಆಶ್ರಯ ಯೋಜನೆಯಡಿ ಮಂಜೂರಾದಂತೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಸೈಟ್‌ಗಳನ್ನು ಹಂಚಿಕೆ ಮಾಡಿದ್ದು, ಒಂದು ನಿವೇಶನಕ್ಕೆ 3 ರಿಂದ 5 ಲಕ್ಷ ಪಡೆದಿದ್ದಾರೆ ಎಂಬ ಆರೋಪ ವ್ಯಕ್ತವಾಗಿದೆ. ಡಾಬಸ್‌ಪೇಟೆಯ ಬಿಜೆಪಿ ಹೋಬಳಿ ಅಧ್ಯಕ್ಷರೂ ಆಗಿರುವ ಮುರುಳೀಧರ್ ಕೆ.ಎಂ. ವಿರುದ್ಧ ಅಕ್ರಮದ ಆರೋಪಗಳು ಹೆಚ್ಚಾಗಿವೆ. ಆದರೆ ಅಧಿಕಾರಿಗಳು ಕ್ರಮ ಕೈಗೊಳ್ಳುವಲ್ಲಿ ವಿಳಂಬ ಮಾಡುತ್ತಿದ್ದಾರೆಂಬ ಎಂಬ ದೂರು ಕೇಳಿ ಬಂದಿದೆ.

# ಆರೋಗ್ಯ ಚೆನ್ನಾಗಿದೆ ಎಂದು ಸೂಚಿಸುವ ಲಕ್ಷಣಗಳಿವು

• ಉದಯವಾಹಿನಿ, ಬೆಂಗಳೂರು




ಅಧಿಕ ಕೊಲೆಸ್ಟ್ರಾಲ್ ಹೃದಯಾಘಾತ ಮತ್ತು ಪಾರ್ಶ್ವವಾಯು ಸೇರಿದಂತೆ ಗಂಭೀರ ಹೃದಯ ಸಂಬಂಧಿ ಸಮಸ್ಯೆಗಳಿಗೆ ಕಾರಣವಾಗಬಹುದು. ಆದಾಗ್ಯೂ, ನಿಮ್ಮ ದೇಹವು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದರೆ, ನಿಮ್ಮ ಹೃದಯವು ಉತ್ತಮ ಸ್ಥಿತಿಯಲ್ಲಿದ್ದರೆ, ನೀವು ಅಧಿಕ ಕೊಲೆಸ್ಟ್ರಾಲ್‌ನಿಂದ ಅಂದರೆ ಬಳಲುತ್ತಿಲ್ಲ ಎಂದು ಕೆಲವು ಚಿಹ್ನೆಗಳು ಸೂಚಿಸುತ್ತವೆ ಕೆಲವೊಮ್ಮೆ ಮನುಷ್ಯನ ದೇಹದ ರಚನೆ ಸರಿಯಾಗಿ ತಿಳಿದುಕೊಳ್ಳಲು ವೈದ್ಯರಿಗೂ ಕೂಡ ಸಾಧ್ಯವಾಗುವುದಿಲ್ಲ ಯಾಕೆಂದ್ರೆ, ಮನುಷ್ಯನ ದೇಹದಲ್ಲಿ ಯಾವುದೇ ಒಂದು ಅಂಶದಲ್ಲಿ ಸ್ವಲ್ಪ ಏರುಪೇರಾದರೂ ಸಾಕು, ಬೇಗನೇ ಕಂಡು ಹಿಡಿಯಲು ಸಾಧ್ಯವಾಗದಷ್ಟು ಮಟ್ಟಿಗೆ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡು ಬಿಡುತ್ತವೆ! ಹೀಗಾಗಿ ಪ್ರತಿಯೊಂದು ಪೋಷಕಾಂಶಗಳು ಕೂಡ ದೇಹದಲ್ಲಿ ಸಮತೋಲನದಲ್ಲಿ ಇರಬೇಕು. ಕೊಲೆಸ್ಟ್ರಾಲ್ ಎಂಬ ಅಂಶ ಕೂಡ ಇದರಲ್ಲಿ ಒಂದಾಗಿದೆ. ಒಂದು ವಿಚಾರ ನಮಗೆಲ್ಲಾ ಗೊತ್ತಿರಬೇಕು, ಅದೇನೆಂದ್ರೆ, ದೇಹದಲ್ಲಿ ಬದಲಾವಣೆ ಕಾಣುವ ಹಾರ್ಮೋನ್ ಮತ್ತು ಪ್ರಮುಖ ವಿಟಮಿನ್ ಗಳಾಗಿರುವ ವಿಟಮಿನ್ ಡಿ ಉತ್ಪತ್ತಿ ಮಾಡಲು ಕೊಲೆಸ್ಟ್ರಾಲ್ ಅಗತ್ಯವಾಗಿ ಬೇಕು. ಆದರೆ ಕೊಲೆಸ್ಟ್ರಾಲ್ ನಲ್ಲಿ ಕೂಡ ಎರಡು ವಿಧವಿದ್ದು, ಒಂದು ಕೆಟ್ಟ ಕೊಲೆಸ್ಟ್ರಾಲ್(ಎಲ್ ಡಿಎಲ್) ಒಳ್ಳೆಯ ಕೊಲೆಸ್ಟ್ರಾಲ್(ಎಚ್ ಡಿಎಲ್). ಆದರೆ ದೇಹದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಮಟ್ಟವು ಅತಿಯಾದ ವೇಳೆ ಸಮಸ್ಯೆಗಳು ಉದ್ಭವವಾಗುವುದು

## ಏನಿದು ಕೊಲೆಸ್ಟ್ರಾಲ್

**ಏನಿದು ಕೊಲೆಸ್ಟ್ರಾಲ್ :** ಕೊಲೆಸ್ಟ್ರಾಲ್ ದೇಹದ ಪ್ರತಿಯೊಂದು ಜೀವಕೋಶದಲ್ಲೂ ಕಂಡುಬರುವ ಕೊಬ್ಬು-ಮೇಣದಂಥ ವಸ್ತುವಾಗಿದೆ. ಹೊಸ ಜೀವಕೋಶಗಳು ಮತ್ತು ಹಾರ್ಮೋನುಗಳ ಉತ್ಪಾದನೆಯಲ್ಲಿ ಬಳಸಿದಾಗ, ದೇಹದಲ್ಲಿ ಕೊಲೆಸ್ಟ್ರಾಲ್ ಮಟ್ಟಗಳು ಹೆಚ್ಚಾದಾಗ, ಅದು ಕೆಲವು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗಬಹುದು, ಸಮಯಕ್ಕೆ ಸರಿಯಾಗಿ ನಿಯಂತ್ರಿಸದಿದ್ದರೆ ಜೀವಕ್ಕೆ ಅಪಾಯಕಾರಿಯಾಗಬಹುದು.ಅಧಿಕ ಕೊಲೆಸ್ಟ್ರಾಲ್ ಹೃದಯಾಘಾತ ಮತ್ತು ಪಾರ್ಶ್ವವಾಯು ಸೇರಿದಂತೆ ಗಂಭೀರ ಹೃದಯ ಸಂಬಂಧಿ ಸಮಸ್ಯೆಗಳಿಗೆ ಕಾರಣವಾಗಬಹುದು. ಆದಾಗ್ಯೂ, ನಿಮ್ಮ ದೇಹವು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದರೆ ಮತ್ತು ನಿಮ್ಮ ಹೃದಯವು ಉತ್ತಮ ಸ್ಥಿತಿಯಲ್ಲಿದ್ದರೆ, ನೀವು ಅಧಿಕ ಕೊಲೆಸ್ಟ್ರಾಲ್‌ನಿಂದ ಅಂದರೆ ಬಳಲುತ್ತಿಲ್ಲ ಎಂದು ಕೆಲವು ಚಿಹ್ನೆಗಳು ಸೂಚಿಸುತ್ತವೆ ಅಧಿಕ ಕೊಲೆಸ್ಟ್ರಾಲ್‌ನಿಂದ ಉಸಿರಾಟದ ತೊಂದರೆ ಮತ್ತು ಎದೆ ನೋವು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ವಿಶೇಷವಾಗಿ ಎಲ್ ಡಿಎಲ್ ಅಥವಾ ಅಧಿಕ ಕೊಲೆಸ್ಟ್ರಾಲ್ ಮಟ್ಟವು ಹೆಚ್ಚಾದರೆ ರಕ್ತನಾಳಗಳಲ್ಲಿ ಅಡಚಣೆ ಉಂಟಾಗಿ ರಕ್ತ ಸಂಚಾರಕ್ಕೆ ತೊಂದರೆ ಆಗುವುದು ಇದೆ. ಒಂದು ವೇಳೆ ದೇಹದಲ್ಲಿ ಕೊಲೆಸ್ಟ್ರಾಲ್ ಅಂಶ ನಿಯಂತ್ರಣ ದಲ್ಲಿದ್ದರೆ, ಉಸಿರಾಟದ ಪ್ರಕ್ರಿಯೆಯು ಕೂಡ ಸರಿಯಾಗಿ ನಡೆ ಯುತ್ತದೆ. ಅಲ್ಲದೆ ಜಾಗಿಂಗ್ ಮಾಡುವಾಗ, ವೇಗವಾಗಿ ನಡೆಯುವ ಸಂದರ್ಭದಲ್ಲಿ ಅಥವಾ ದೈಹಿಕ ಚಟುವಟಿಕೆಯಂತಹ ವ್ಯಾಯಾಮ ಮಾಡುವಾಗ ಕೂಡ ಯಾವುದೇ ರೀತಿಯಲ್ಲಿ ಉಸಿ ರಾಟದ ತೊಂದರೆ ಮತ್ತು ಎದೆ ನೋವಿನಂತಹ ಲಕ್ಷಣಗಳು ಕಾಣಿಸಿ ಕೊಳ್ಳದಿದ್ದರೆ, ಹೃದಯರಕ್ತನಾಳದ ಆರೋಗ್ಯವು ಸರಿಯಾಗಿದೆ ಎಂದು ಸೂಚಿಸುತ್ತದೆ.


## ದೇಹದ ತೂಕ ನಿಯಂತ್ರಣದಲ್ಲಿದ್ದರೆ



**ದೇಹದ ತೂಕವನ್ನು ನಿರ್ವಹಣೆ ಮಾಡಿಕೊಳ್ಳುವುದು ಕೂಡ ಅಧಿಕ ಕೊಲೆಸ್ಟ್ರಾಲ್ ಅನ್ನು ಕಂಟ್ರೋಲ್ ನಲ್ಲಿ ಇಟ್ಟುಕೊಳ್ಳಬಹುದು ಎಂದು ತಜ್ಞರು ಕೂಡ ಸಲಹೆ ನೀಡುತ್ತಾರೆ. ಅದೇ ರೀತಿಯಾಗಿ, ನಿಮ್ಮ ಎತ್ತರ ಮತ್ತು ವಯಸ್ಸಿಗೆ ತಕ್ಕ ರೀತಿಯಲ್ಲಿ ದೇಹದ ತೂಕ ಇದ್ದರೆ, ನಿಮ್ಮ ದೇಹವು ಕೊಲೆಸ್ಟ್ರಾಲ್ ಅನ್ನು ಪರಿಣಾಮಕಾರಿ ಯಾಗಿ ನಿರ್ವಹಿಸುತ್ತಿದೆ ಎಂದು ಸೂಚಿಸುತ್ತದೆ. ಅಂದ್ರೆ ದೇಹದಲ್ಲಿ ಒಳ್ಳೆಯ ಕೊಲೆಸ್ಟ್ರಾಲ್ ಅಂಶಗಳು ಕಾರ್ಯ ನಿರ್ವಹಿ ಸುತ್ತಿವೆ ಎಂದು ಸೂಚಿಸುತ್ತದೆ. ನಿಮಗೆ ಗೊತ್ತಿರಲಿ ಯಾವಾಗ ದೇಹದ ತೂಕ ಹೆಚ್ಚಾಗುತ್ತದೆ ಆ ಸಂದರ್ಭದಲ್ಲಿ ಬೇಡದ ಕೆಟ್ಟ ಕೊಲೆಸ್ಟ್ರಾಲ್ ಹೆಚ್ಚಾಗುತ್ತದೆ ಮತ್ತು ಒಳ್ಳೆಯ ಮತ್ತು ಅವಶ್ಯಕತೆ ಇರುವ ಕೊಲೆಸ್ಟ್ರಾಲ್ ಕಡಿಮೆಯಾಗುತ್ತದೆ.**

ನಿಮಗೆ ಗೊತ್ತಿರಲಿ ಕೊಲೆಸ್ಟ್ರಾಲ್ ನಿಯಂತ್ರಣದಲ್ಲಿಡಲು ದೈಹಿಕ ಚಟುವಟಿಕೆಗಳು ಬಹಳ ಮುಖ್ಯ. ಈಗಾಗಲೇ ಅಧಿಕ ಕೊಲೆಸ್ಟ್ರಾಲ್ ಕಾಯಿಲೆಯಿಂದ ಬಳಲುತ್ತಿರುವವರು ಬೆಳಗ್ಗೆ ಸಂಜೆ ವಾಕಿಂಗ್ ಮಾಡುವುದು, ವ್ಯಾಯಾಮ ಮಾಡುವುದು, ಯೋಗ, ಧ್ಯಾನ ಇವುಗಳಿಂದ ಕೊಲೆಸ್ಟ್ರಾಲ್ ಕಂಟ್ರೋಲ್ ಮಾಡಿಕೊಳ್ಳಬಹುದು. **ಹಳದಿ ಬಣ್ಣದ ಲಕ್ಷಣಗಳು ಕಾಣಿಸಿಕೊಳ್ಳದಿದ್ದರೆ :** ದೇಹದಲ್ಲಿ ಕೊಲೆಸ್ಟ್ರಾಲ್ ಅತಿಯಾದರೆ ಆಗ ಚರ್ಮದಲ್ಲಿ ಹಳದಿ ಬಣ್ಣವು ಕಂಡುಬರಬಹುದು. ಇನ್ನು ಕೆಲವರಿಗೆ ಕಣ್ಣಿನ ಸುತ್ತಲು ಹಳದಿ ಬಣ್ಣದ ಬೊಕ್ಕೆಗಳು ಕಂಡುಬರಬಹುದು ಇದನ್ನು ಕ್ಸಾಂಥೆಲಾಸ್ಮಾ ಎಂದು ಕರೆಯಲಾಗುತ್ತದೆ ಇದು ಕೊಲೆಸ್ಟ್ರಾಲ್ ಹೆಚ್ಚಾಗಿರುವ ಪ್ರಮುಖ ಲಕ್ಷಣ ವಾಗಿದೆ. ಒಂದು ವೇಳೆ ಇಂತಹ ಅನಾರೋಗ್ಯ ಸಮಸ್ಯೆಗಳು ನಿಮ್ಮಲ್ಲಿ ಕಾಣಿಸಿಕೊಳ್ಳದಿದ್ದರೆ,

# ಶ್ರೀರಾಮಕೃಷ್ಣ ಪರಮಹಂಸರ 189ನೇ ವರ್ಷದ ಜನ್ಮಜಯಂತಿ




ಕಲಾ ಸಾಹಿತ್ಯ

ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• ಉದಯವಾಹಿನಿ, ವಿಶೇಷ

ಶ್ರೀರಾಮಕೃಷ್ಣ ಪರಮಹಂಸರು 1836 ಫೆಬ್ರುವರಿ 18 ರಂದು ಪಶ್ಚಿಮ ಬಂಗಾಳದ ಹೂಗ್ಲಿ ಎಂಬ ಜಿಲ್ಲೆಯ ಒಂದು ಚಿಕ್ಕ ಗ್ರಾಮದಲ್ಲಿ ಜನಿಸಿದರು. ತಂದೆ ಕ್ಷುದೀರಾಮ ಚಟ್ಟೋಪಾಧ್ಯಾಯ, ತಾಯಿ ಚಂದ್ರಮಣಿದೇವಿ.

ರಾಮಕೃಷ್ಣ ಪರಮಹಂಸರು ಶಾರದಾದೇವಿ ರವರೊಂದಿಗೆ ವಿವಾಹವಾಗಿ ಐಹಿಕ ಸುಖವನ್ನ ತ್ಯಜಿಸಿ ಅವರ ಸೇವೆ ಮಾಡುತ್ತಾ ಅವರ ಭಾಗಕ್ಕೆ ಜಗನ್ಮಾತೆಯ ಸ್ವರೂಪವಾಗಿದ್ದರು. ಶ್ರೀರಾಮಕೃಷ್ಣ ಪರಮಹಂಸರು ಚಿಕ್ಕವಯಸ್ಸಿನಿಂದಲೂ ಸಂಸ್ಕಾರ, ಸದ್ಬುದ್ಧಿ, ಸನ್ಮಾರ್ಗ, ಶಿಸ್ತುನೊಂದಿಗೆ ಆಧ್ಯಾತ್ಮ ಒಳಗೊಂಡ ಎಲ್ಲಾ ವಿದ್ಯೆಗಳನ್ನು ಕಲಿತು, ಮಾನವನಾಗಿ ಹುಟ್ಟಿ,ಮಾನವ ಗುಣ ಮತ್ತು ದೈವತ್ವ ಗುಣ ಗಳನ್ನು ಮೈಗೂಡಿಸಿ ಕೊಂಡು ದೇವ ಮಾನವರಾದರು. ಎಲ್ಲಾ ಧರ್ಮವನ್ನು ಪ್ರೀತಿಸುವ, ಗೌರವಿಸುವ ಮನೋಭಾವವನ್ನು ಜಗತ್ತಿಗೆ ಸಾರಿದರು. ಮನುಷ್ಯರು ಹೊಗಳುವುದು ಬೇಗ, ನಿಂದಿಸುವುದು ಬೇಗ ಆದ್ದರಿಂದಲೇ ಯಾರು ನಿನ್ನ ವಿಚಾರವಾಗಿ ಏನು ಹೇಳಿದರೂ ಅವುಗಳಿಗೆ ಮಹತ್ವ ಕೊಡಬೇಡ ಕೋಪ ತಾಮಸಿಕ ಚಿನ್ಹೆ. ಕೋಪ ಬಂದಾಗ ಮನುಷ್ಯ ವಿವೇಚನಾಶಕ್ತಿಯನ್ನು ಕಳೆದುಕೊಳ್ಳುವನು. ಹನುಮಂತನು ಲಂಕೆಗೆ ಬೆಂಕಿಯನ್ನು ಇಟ್ಟನು ಆದರೆ ಅವನಿಗೆ ಸೀತೆ ಇದ್ದ ಕಡೆಯೂ ಬೆಂಕಿ ತಗಲಬಹುದೆಂಬ ಯೋಚನೆ ಹೊಳೆಯಲಿಲ್ಲ. ಯಾವಾಗಲೂ ನಿನ್ನ ಧರ್ಮದಲ್ಲಿ ಅಚಲವಾದ ಶ್ರದ್ಧೆ ಇಡು, ಆದರೆ ಅನ್ಯ ಧರ್ಮದ ಮೇಲೆ ಅಸಹಿಷ್ಣತೆ ಮತ್ತು ಮತಾಂಧತೆ ಕೂಡದು ಇತ್ಯಾದಿ. ಮಹಾ ವಿಭೂತಿ ಪುರುಷರಾದ ಶ್ರೀರಾಮಕೃಷ್ಣ ಪರಮಹಂಸರು ಈ ರೀತಿಯಾಗಿ ಜಗತ್ತಿಗೆ ಸಂದೇಶವನ್ನು ಸಾರಿ ದ್ದಾರೆ.ಇಂತಹ ಮಹಾಚೈತನ್ಯ ಉಳ್ಳ ಶುದ್ಧ ಪರಿಶುದ್ಧ ದೇವಮಾನವ ಶ್ರೀರಾಮಕೃಷ್ಣ ಪರಮಹಂಸರು 1886 ಆಗಸ್ಟ್ 15 ರಂದು ಗಂಟಲು ವ್ಯಾಧಿಯಿಂದ ಬಳಲಿ ದೇವರಲ್ಲಿ ಐಕ್ಯರಾದರು. ಯುಗಪುರುಷ, ದೇವಮಾನವ ಎಂದು ಪ್ರಸಿದ್ಧರಾದ ಶ್ರೀ ರಾಮಕೃಷ್ಣ ಪರಮಹಂಸರು ಜಗತ್ತಿಗೆ ನೀಡಿರುವ ಸತ್ಯದರ್ಶನ, ಉಪದೇಶಾಮೃತ, ಸಮನ್ವಯ ಸಂದೇಶ ಇವುಗಳು ಶ್ರೀ ರಾಮಕೃಷ್ಣ ವಚನ ವೇದದಲ್ಲಿ ಧಾರೆಯಾಗಿ ಪ್ರವಹಿಸಿ ಪರಹಂಸರು ಆಧುನಿಕ ಯುಗಕ್ಕೆ ನೀಡಿದ ಅತ್ಯಮೂಲ್ಯ ಕೊಡುಗೆಯಾಗಿದೆ. ಇಂತಹ ಮಹಾ ಪುರುಷರನ್ನು ನಾವು ನೀವುಗಳು ಅವರ 189ನೇ ವರ್ಷದ ಈ ಜನ್ಮ ದಿನದೊಂದು ಸ್ಮರಿಸಿ, ನೆನೆಯುತ್ತಾ ಅವರ ಆದರ್ಶಗಳನ್ನು ಮತ್ತು ತತ್ವಸಿದ್ಧಾಂತಗಳನ್ನು ನಾವುಗಳು ಅನುಸರಿಸಿಕೊಂಡು ಜೀವನದ ಬದುಕಿನಲ್ಲಿ ಅಳವಡಿಸಿಕೊಂಡರೆ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕುತ್ತದೆ ಹಾಗೂ ದೊರಕಲೆಂದು ಆ ಭಗವಂತನಲ್ಲಿ ಪ್ರಾರ್ಥಿಸೋಣ.



**189ನೇ ವರ್ಷದ ಜನ್ಮ ದಿನದೊಂದು ಸ್ಮರಿಸಿ**

**ಸತ್ಯಂ ಶಿವಂ ಸುಂದರಂ**

## ಸಹಾಯ ಸಂಘಗಳಿಗೆ ಬ್ಯಾಂಕ್ ಸಾಲ ವಿತರಣೆ ಮಾಡಲು ಕ್ರಮ ವಹಿಸಿ

• ಉದಯವಾಹಿನಿ, ಕಲಬುರಗಿ


ಉದಯವಾಹಿನಿ ಚಿತ್ರ

**ಜಿಲ್ಲೆಯ ನಿಗದಿತ ಗುರಿ**

ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಕಲಬುರಗಿ ನಗರದ ಐವಾನ್ ಶಾಹಿ ಅತಿಥಿಗೃಹದಲ್ಲಿ ಭಾನುವಾರ ಕೌಶಲ್ಯಾಭಿವೃದ್ಧಿ ಇಲಾಖೆಯ ಎನ್.ಆರ್.ಎಲ್.ಎಮ್. ಯೋಜನೆ ಕುರಿತು ಪ್ರಗತಿ ಪರಿಶೀಲನೆ ಸಭೆ ನಡೆಸಿದರು.

ಜಿಲ್ಲೆಯಲ್ಲಿ ಸ್ವ-ಸಹಾಯ ಸಂಘಗಳ ಬ್ಯಾಂಕ್ ಲಿಂಕೇಜ್ ಕುಂಠಿತದ ಬಗ್ಗೆ ಅಸಮಾದಾನ ವ್ಯಕ್ತಪಡಿಸಿದ ಅವರು, ಮುಂದಿನ ಒಂದು ತಿಂಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಬ್ಯಾಂಕ್ ಶಾಖಾ ವ್ಯವಸ್ಥಾಪಕರು ಮತ್ತು ಜಿಪಿಎಲ್ಎಫ್ ಪದಾಧಿಕಾರಿಗಳು ಸಭೆ ನಡೆಸಿ, ಜಿಲ್ಲೆಯ ನಿಗದಿತ ಗುರಿಯಂತೆ ಸ್ವ-ಸಹಾಯ ಸಂಘಗಳಿಗೆ ಬ್ಯಾಂಕ್ ಸಂರ್ಪಕ ಮೂಲಕ ಸಾಲ ವಿತರಣೆ ಮಾಡಲು ಕ್ರಮವಹಿಸಬೇಕು ಎಂದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಮಾತನಾಡಿ, ಜಿಲ್ಲೆಯಲ್ಲಿ ಪ್ರಸ್ತುತ ಸಾಮಾಜಿಕ ಆಂದೋಲನ ಅಭಿಯಾನದ ಮೂಲಕ ಸ್ವ-ಸಹಾಯ ಸಂಘದಿಂದ ಹೊರಗುಳಿದ ಕುಟುಂಬಗಳಲ್ಲಿ 70,000 ಮಹಿಳಾ ಸದಸ್ಯರನ್ನು ಸ್ವ-ಸಹಾಯ ಸಂಘದಲ್ಲಿ ಸೇರ್ಪಡೆಗೆ ಕ್ರಮ ವಹಿಸಲಾಗುತ್ತಿದೆ. ಜಿಲ್ಲೆಯ ಎನ್ಆರೆಲ್ಎಂ ಸ್ವ-ಸಹಾಯ ಸಂಘಗಳಿಗೆ ಬ್ಯಾಂಕ್ ಲಿಂಕೇಜ್ ಮೂಲಕ ಒಟ್ಟು 25 ಕೋಟಿ ರೂ. ಗಳ ಸಾಲ ಸೌಲಭ್ಯ ಒದಗಿಸಲಾಗಿದ್ದು, ಕೃಷಿ ಜೀವನೋಪಾಯ, ಕೃಷಿಯೇತರ ಜೀವ ನೋಪಾಯ ಚಟುವಟಿಕೆಯಲ್ಲಿ ಸ್ವ-ಸಹಾಯ ಸಂಘಗಳ ಸದಸ್ಯರು ತೊಡಗಿರುವ ಆದಾಯ ಉತ್ಪನ್ನ ಚಟುವಟಿಕೆಗಳ ಬಗ್ಗೆ ವಿವರಿಸಿದರು.

ಸಭೆಯಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯ ಡಿಎಸ್‌ಡಿಓ, ಜಿಟಿಟಿಸಿ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಡಿಎಂಎಂಯು ಟಿಎಂಎಂಯು ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

> **ಗ್ರಾಮ ಮಟ್ಟದಲ್ಲಿ ಅರಿವು ಕಾರ್ಯಕ್ರಮ ಹಮ್ಮಿಕೊಂಡು ಗೃಹಲಕ್ಷ್ಮಿ ಫಲಾನುಭವಿಗಳು, ನರೇಗಾ ಫಲಾನುಭವಿಗಳು ಮತ್ತು ಅರ್ಹ ಫಲಾನುಭವಿಗಳು ಸೇರ್ಪಡೆಗೆ ಸೂಕ್ತ ಕ್ರಮವಹಿಸಬೇಕು. ನಿಯಮಾನುಸಾರ ಜಿಪಿಎಲ್ಎಫ್ ವಾರ್ಷಿಕ ಸಭೆ, ಅವಧಿ ಪೂರ್ಣವಾದ ಪದಾಧಿಕಾರಿಗಳ ಬದಲಾವಣೆ ಮಾಡಿ ಸಮುದಾಯ ಬಂಡವಾಳ ನಿಧಿ ಸರ್ಮಪಕವಾಗಿ ಬಳಕೆ ಮಾಡಿ**
> **- ಶರಣಪ್ರಕಾಶ ಪಾಟೀಲ, ಸಚಿವ**

## ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದಿ

• ಉದಯವಾಹಿನಿ, ಆಳಂದ


ಉದಯವಾಹಿನಿ ಚಿತ್ರ

**ಒಳ್ಳೆಯ ಹೆಸರು ತರಬೇಕು**

ವಿದ್ಯಾರ್ಥಿಗಳು ಕಷ್ಟಪಟ್ಟು ಓದುವುದಕ್ಕಿಂತ ಇಷ್ಟಪಟ್ಟು ಓದಬೇಕು ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ (ಪ್ರ) ಪ್ರೊ.ಗುರು ಶ್ರೀರಾಮಲು ಕರೆ ನೀಡಿದರು. ತಾಲ್ಲೂಕಿನ ಮಾಡಿಯಾಳದ ಜೆ.ಪಿ. ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ 43ನೇ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತ ನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಈ ಸಂಸ್ಥೆಯು ಗುಣ ಮಟ್ಟದ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ. ಇಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು, ದೇಶ ವಿದೇಶಗಳಲ್ಲಿ ಪ್ರತಿಷ್ಠಿತ ಹುದ್ದೆಗಳಲ್ಲಿ ಇರುವುದು ಬಹಳ ಸಂತೋಷದಾಯಕ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಸಚಿವ ಪ್ರೋ. ಆರ್.ಆರ್. ಬಿರಾದಾರ ಅವರು ಮಾತನಾಡುತ್ತ ಈ ವಿದ್ಯಾ ಸಂಸ್ಥೆಯಲ್ಲಿ ಓದಿದ ವಿದ್ಯಾರ್ಥಿಗಳು ಡಾಕ್ಟರ್, ಇಂಜಿನಿಯರ್, ಪ್ರೋಫೆಸರ್ ಯುವ ವಿಜ್ಞಾನಿಗಳು ಅನೇಕ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿರುವದು ಉತ್ತಮ ಬೆಳವಣಿಗೆ ಇಲ್ಲಿನ ಮಕ್ಕಳ ಶಿಸ್ತುಪಾಲನೆ, ಒಳ್ಳೆ ಬುನಾದಿ, ಶ್ರದ್ಧೆ, ನಿಷ್ಠೆ, ಪ್ರಾಮಾಣಿಕತೆಯಿಂದ ಎಲ್ಲಾವನ್ನೂ ಸಾಧಿಸಬಹುದು ಎಂದರು. ಅತಿಥಿಗಳಾಗಿ ಆಗಮಿಸಿದ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕ ಡಾ.ಎಂ.ಎಸ್.ಪಾಸೋಡಿ ಅವರು ಮಾತನಾಡುತ್ತ, ಈ ವಿದ್ಯಾಸಂಸ್ಥೆಯಲ್ಲಿ ಓದಿದ ಮಕ್ಕಳು ಉನ್ನತ ಹುದ್ದೆಗಳಲ್ಲಿ, ಉನ್ನತ ಮಟ್ಟದಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ ಎಂದು ನೆನಪಿಸಿದರು. ದಿವ್ಯ ಸಾನಿಧ್ಯ ವಹಿಸಿದ ಡಾ.ಸಿದ್ಧರಾಮ ಬೆಲ್ದಾಳ ಶರಣರು ಆಶೀರ್ವಚನದಲ್ಲಿ ಗ್ರಾಮೀಣ ಭಾಗದ ಮಕ್ಕಳು ಕಷ್ಟ ಮತ್ತು ಇಷ್ಟಪಟ್ಟು ಓದಿ, ಪಾಲಕರಿಗೂ, ಶಾಲೆಗೂ, ಊರಿಗೂ ಒಳ್ಳೆಯ ಹೆಸರು ತರಬೇಕು, ಈ ಶಿಕ್ಷಣ ಸಂಸ್ಥೆಯು ಒಳ್ಳೆಯ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ಇನ್ನೂ ಎತ್ತರಕ್ಕೆ ಬೆಳೆಯಲೆಂದು ಹಾರೈಸಿದರು. ಸಂಸ್ಥಾಪಕ ಅಧ್ಯಕ್ಷರಾದ, ಶಾಮರಾವ ಪ್ಯಾಟಿ ಅಧ್ಯಕ್ಷತೆ ವಹಿಸಿದ್ದರು. ಎಲ್ಲಾರಿಗೂ ಸ್ವಾಗತ ಕೋರಿದರು, ಕಾರ್ಯದರ್ಶಿಗಳಾದ ಸುಮಾ ಪ್ಯಾಟಿ, ಸಂಗಣ್ಣಾ ಮುದ್ದಡಗಿ, ಸೂರ್ಯಕಾಂತ ರಾಮಜಿ, ಶ್ರವಣ ಕುಮಾರ ಮುದ್ರೆಕರ, ಮುಖ್ಯ ಗುರುಗಳು, ಶಿಕ್ಷಕರು, ವಿದ್ಯಾರ್ಥಿಗಳು, ಊರಿನ ಗಣ್ಯರು, ಪಾಲಕರು ಇದ್ದರು. ಶಿವಲೀಲಾ ಗುತ್ತೇದಾರ ನಿರೂಪಿಸಿದರು.

## ಮಿನಿ ನ್ಯೂಸ್

### ಚಿರತೆ ಸೆರೆಹಿಡಿಯುವಲ್ಲಿ ಯಶಸ್ವಿ

• ಉದಯವಾಹಿನಿ, ಕುಕನೂರು

ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕಳೆದ ಕೆಲವು ತಿಂಗಳುಗಲಿಂದ ಆತಂಕ ಮೂಡಿಸಿದ್ದ ಚಿರತೆಯನ್ನು ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಸಿಬ್ಬಂದಿ ಯಶಸ್ವಿಯಾಗಿದ್ದಾರೆ. ಗಾವರಾಳ ಗ್ರಾಮದ ಹೊರವಲಯದಲ್ಲಿ ಇರಿಸಿದ್ದ ಬೋನಿನಲ್ಲಿ ಚಿರತೆ ಸೋಮವಾರ ಬೆಳಿಗ್ಗೆ ಸೆರೆಯಾಗಿದೆ. ತಾಲ್ಲೂಕಿನ ಗಾವರಾಳ ಗ್ರಾಮದ ಹೊರವಲಯದಲ್ಲಿ ಹಲವು ದಿನಗಳಿಂದ ವಾಸವಾಗಿದ್ದ ಚಿರತೆ ಈ ಗ್ರಾಮದ ಸುತ್ತಮುತ್ತ ಭಯದ ವಾತಾವರಣ ಉಂಟು ಮಾಡಿತ್ತು. ಇದನ್ನು ಅರಿತ ಅರಣ್ಯ ಇಲಾಖೆ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಚಿರತೆ ಸೆರೆಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

## ಭಕ್ತಾಧಿಗಳಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ವಹಿಸಿ

### ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿ ಜಾತ್ರೆಯು ವ್ಯವಸ್ಥಿತವಾಗಿ, ಸುಸೂತ್ರವಾಗಿ ನಡೆಯಬೇಕು: ಸಚಿವ ಡಿ.ಸುಧಾಕರ್

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

**ಯಾವುದೇ ರಾಜಿ ಇಲ್ಲ**

ಮಧ್ಯ ಕರ್ನಾಟಕದ ಪ್ರಸಿದ್ಧ ಧಾರ್ಮಿಕ ಕ್ಷೇತ್ರ ನಾಯಕನಹಟ್ಟಿ ನಾಡಿನಾದ್ಯಂತ ಪ್ರಸಿದ್ಧಿ ಪಡೆದಿದೆ. ಶ್ರೀಗುರುತಿಪ್ಪೇರುದ್ರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸಲು ಕ್ರಮ ವಹಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿ ಗ್ರಾಮದ ಶ್ರೀಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನದ ಆವರಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ 2025ನೇ ಸಾಲಿನ ಜಾತ್ರೆಯ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದರು. ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರಿನ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ. ಒಂದು ವಾರದೊಳಗೆ ಐದು ಕೊಳವೆಬಾವಿಗಳನ್ನು ಕೊರೆಯಿಸಿ, ಸಮರ್ಪಕವಾಗಿ ಕುಡಿಯವ ನೀರು ಪೂರೈಕೆಯಾಗುವಂತೆ ನೋಡಿಕೊಳ್ಳಬೇಕು. ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿ ಜಾತ್ರೆಯು ವ್ಯವಸ್ಥಿತವಾಗಿ, ಸುಸೂತ್ರವಾಗಿ ನಡೆಯಬೇಕು ಎಂದು ಹೇಳಿದರು.

ಶ್ರೀ ಗುರುತಿಪ್ಪೇರುದ್ರಸ್ವಾಮಿ ಜಾತ್ರಾ ಮಹೋತ್ಸವವು 2025ರ ಮಾರ್ಚ್ 09 ರಿಂದ ಮಾರ್ಚ್ 24 ರವರೆಗೆ ನಡೆಯಲಿದ್ದು, ದೊಡ್ಡ ರಥೋತ್ಸವವು ಮಾರ್ಚ್ 16ರಂದು ಭಾನುವಾರ ನಿಗಧಿಯಾಗಿದೆ. ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತಾಧಿಗಳಿಗೆ ಮೂಲಸೌಲಭ್ಯಗಳ ಕೊರತೆ ಎದುರಾಗಬಾರದು. ಕುಡಿಯುವ ನೀರು, ರಸ್ತೆ, ಆರೋಗ್ಯ, ನೈರ್ಮಲ್ಯ ಸೇರಿದಂತೆ ಯಾವುದೇ ರೀತಿಯ ತೊಂದರೆಯಾಗದಂತೆ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮತನಾಡಿ, ನಾಯಕನಹಟ್ಟಿ ಜಾತ್ರಾ ಮಹೋತ್ಸವಕ್ಕೆ ಸುಮಾರು 3ಲಕ್ಷಕ್ಕೂ ಹೆಚ್ಚು ಜನರು ಆಗಮಿಸುವ ನಿರೀಕ್ಷೆ ಇದೆ. ಜಾತ್ರೆಯನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡಲು ಉಪಸಮಿತಿಗಳನ್ನು ರಚನೆ ಮಾಡಲಾಗುವುದು. ಕಳೆದ ವರ್ಷದ ಸಣ್ಣಪುಟ್ಟ ನ್ಯೂನತೆಗಳನ್ನು ಈ ಬಾರಿ ಸರಿಪಡಿಸಿಕೊಂಡು ಜಾತ್ರೆಗೆ ಸಿದ್ಧತೆ ಮಾಡಿಕೊಳ್ಳಬೇಕಾಗಿದೆ ಎಂದು ತಿಳಿಸಿದ ಅವರು, ಕುಡಿಯುವ ನೀರು, ಆರೋಗ್ಯ, ನೈರ್ಮಲ್ಯ, ಸಾರಿಗೆ ವ್ಯವಸ್ಥೆ ಸೇರಿದಂತೆ ಮೂಲ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ ಅಧಿಕಾರಿಗಳ ತಂಡ ರಚನೆ ಮಾಡಲಾಗುವುದು ಎಂದು ಹೇಳಿದರು. ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಾಗದಂತೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾ ಆರೋಗ್ಯಾಧಿಕಾರಿಗಳ ನೇತೃತ್ವದಲ್ಲಿ ಆರೋಗ್ಯ, ನೈರ್ಮಲೀಕರಣ ಸಮಿತಿ ರಚನೆ ಮಾಡಿ, ಜಾತ್ರೆಯಲ್ಲಿ ತಾತ್ಕಾಲಿಕ ಆರೋಗ್ಯ ಕೇಂದ್ರಗಳ ಸ್ಥಾಪನೆ, ಅಂಬುಲೆನ್ಸ್, ಔಷಧೋಪಚಾರದ ವ್ಯವಸ್ಥೆ ಸೇರಿದಂತೆ ಸಾರ್ವಜನಿಕರ ಆರೋಗ್ಯ ಕಾಡಾ ಪಲು ತಾತ್ಕಾಲಿಕವಾಗಿ ವೈದ್ಯ ಸಿಬ್ಬಂದಿ ಯನ್ನು ನಿಯೋಜನೆ ಮಾಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚನೆ ನೀಡಿದರು.

ಜಾತ್ರೆಗೆ ವಿವಿಧ ಜಿಲ್ಲೆ, ತಾಲ್ಲೂಕುಗಳಿಂದಲೂ ಭಕ್ತಾದಿಗಳು ನಾಯಕನಹಟ್ಟಿಗೆ ಬರುವುದರಿಂದ, ಕೆಎಸ್ಆರ್‌ಟಿಸಿ ವತಿಯಿಂದ ವಿಶೇಷ ಬಸ್ ಸೌಲಭ್ಯ ಒದಗಿಸಬೇಕು. ಬಸ್ ತಂಗುದಾಣ, ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಸಮರ್ಪಕವಾಗಿರಲು ಈಗಿನಿಂದಲೇ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ, ಸಾರ್ವಜನಿಕರಿಗೆ ತೊಂದರೆಯಾಗದಂತೆ ಬಸ್ ಸೌಲಭ್ಯ ಕಲ್ಪಿಸಬೇಕು. ವಿದ್ಯುತ್ ಸಮಸ್ಯೆ, ವಿದ್ಯುತ್ ಅವಘಡಗಳು ಆಗದಂತೆ ಬೆಸ್ಕಾಂ ಅಧಿಕಾರಿಗಳು ಕ್ರಮ ವಹಿಸಬೇಕು. ಜಾನುವಾರುಗಳ ರಕ್ಷಣೆ, ಜಾತ್ರೆಯಲ್ಲಿ ಪ್ರಾಣಿಬಲಿ ನಿಷೇಧಿಸಿದ್ದು, ಈ ಕುರಿತು ಪಶುಸಂಗೋಪನೆ ಅಧಿಕಾರಿಗಳು ಸೂಕ್ತ ಕೈಗೊಳ್ಳ ಬೇಕು ಎಂದು ತಿಳಿಸಿದ ಅವರು, ಜಾತ್ರಾ ಮಹೋತ್ಸವದ ಪೂರ್ವ ಸಿದ್ಧತೆಗಳು ಜಾತ್ರೆ ಆರಂಭವಾಗುವ 15 ದಿನದೊಳಗೆ ಜಾತ್ರೆಯ ಎಲ್ಲಾ ಮೂಲಭೂತ ಸೌಕರ್ಯಗಳ ಸಿದ್ಧತೆ ವ್ಯವಸ್ಥೆ ಮುಕ್ತಾಯವಾಗಬೇಕು. ಕೇವಲ ಜಾತ್ರೆಗೆ ಮಾತ್ರ ಸೀಮಿತವಾಗದೇ ಶಾಶ್ವತ, ಗುಣಮಟ್ಟದ ಕಾಮಗಾರಿಗೆ ಒತ್ತು ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಕರವಸೂಲಿಗೆ ಸಮಿತಿ ರಚನೆ:** ಕಳೆದ ಬಾರಿ ತೀವ್ರ ಬರ ಪರಿಸ್ಥಿತಿ ಇದ್ದ ಕಾರಣ, ಜಾತ್ರೆ ಸಂದರ್ಭದಲ್ಲಿ ಕರ ವಸೂಲಿ ಮಾಡದಂತೆ ನಿರ್ಣಯ ಕೈಗೊಳ್ಳಲಾಗಿತ್ತು. ಈ ಬಾರಿಯ ಜಾತ್ರಾ ಮಹೋತ್ಸವದ ಅಂಗವಾಗಿ ಜಾತ್ರೆಯಲ್ಲಿ ಕರ ವಸೂಲಿಗೆ ಸಂಬಂಧಿಸಿದಂತೆ ನಿರ್ಣಯ ಕೈಗೊಳ್ಳಲು ಸಮಿತಿ ರಚನೆ ಮಾಡಿ, ಸಮಿತಿ ನೀಡುವ ವರದಿಯ ಆಧಾರದಲ್ಲಿ ಕರವಸೂಲಿಗೆ ದರ ನಿಗದಿಪಡಿಸಿ ಕ್ರಮವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಟೇಶ್ ತಿಳಿಸಿದರು.

ಅಕ್ರಮವಾಗಿ ಬೇರೆ ಯಾರಾದರೂ ಕಂದಾಯ ವಸೂಲಾತಿ ಮಾಡಿದರೆ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು. ಮೊಳಕಾಲ್ಮುರು ಶಾಸಕ ಎನ್.ವೈ. ಗೋಪಾಲಕೃಷ್ಣ ಮಾತನಾಡಿ, ನಾಯಕನಹಟ್ಟಿ ಜಾತ್ರಾ ಮಹೋತ್ಸವಕ್ಕೆ ಶಾಸಕರ ಅನುದಾನದಿಂದ ರೂ.10 ಲಕ್ಷ ಅನುದಾನ ನೀಡಲಾಗುವುದು. ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ, ಜಾತ್ರಾ ಮಹೋತ್ಸವದ ಅಂಗವಾಗಿ ನಾಯಕನಹಟ್ಟಿಗೆ ಸಂಪರ್ಕ ಕಲ್ಪಿಸುವ ಎಲ್ಲಾ ರಸ್ತೆಗಳ ಗುಂಡಿ ಮುಚ್ಚಿಸಿ, ರಸ್ತೆ ದುರಸ್ಥಿಗೆ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ನಾಯಕನಹಟ್ಟಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಮಂಜುಳಾ ಶ್ರೀಕಾಂತ್, ಉಪಾಧ್ಯಕ್ಷೆ ಸರ್ವಮಂಗಳಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಶ್ರೀ ಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಗಂಗಾಧರಪ್ಪ, ಮಾಜಿ ಅಧ್ಯಕ್ಷ ರವಿಶಂಕರ್, ಎಂ.ವೈ.ಟಿ.ಸ್ವಾಮಿ ಸೇರಿದಂತೆ ಪಟ್ಟಣ ಪಂಚಾಯಿತಿ ಸದಸ್ಯರು, ವಿವಿಧ ಇಲಾಖೆಯ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕರು ಇದ್ದರು.

> **ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಚಳ್ಳಕೆರೆ ಕ್ಷೇತ್ರದ ಅನುದಾನದಲ್ಲಿ ರೂ.10 ಲಕ್ಷ ನಾಯಕನಹಟ್ಟಿ ಜಾತ್ರೆಗೆ ನೀಡಲಾಗುವುದು**
> **-ಟಿ.ರಘುಮೂರ್ತಿ, ಶಾಸಕ**

> **ಜಾತ್ರೆಗಳಲ್ಲಿ ಸರಗಳ್ಳತನ ಸಾಮಾನ್ಯವಾಗಿದ್ದು, ಜಾತ್ರಾ ಮಹೋತ್ಸವದ ಅಂಗವಾಗಿ ತಾತ್ಕಾಲಿಕ ವಾಗಿ ಸಿ.ಸಿ.ಟಿವಿ ಕ್ಯಾಮೆರಾ ವ್ಯವಸ್ಥೆ ಬದಲಾಗಿ ಶಾಶ್ವತವಾಗಿ ಸಿ.ಸಿ.ಟಿವಿ ಕ್ಯಾಮೆರಾ ವ್ಯವಸ್ಥೆ ಕಲ್ಪಿವುದು ಉತ್ತಮ**
> **- ರಂಜಿತ್ ಕುಮಾರ್ ಬಂಡಾರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ**

> **ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಮೂಲಭೂತ ಸೌಕರ್ಯಗಳ ಕೊರತೆ ಎದುರಾಗದಂತೆ ಸ್ನಾನಗೃಹ, ಕೂದಲು ತೆಗೆಸುವಿಕೆ ಸ್ಥಳದಲ್ಲಿ ಸ್ವಚ್ಛತೆಗೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು**
> **- ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ**

## ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಿಗೆ ಕಪ್ಪುಪಟ್ಟಿ ಪ್ರದರ್ಶನ: ಅಲೆಮಾರಿ ಸಂಘಟನೆಗಳ ಕರೆ

• ಉದಯವಾಹಿನಿ, ಇಂಡಿ

ನಿಂಬೆ ನಾಡಿಗೆ ಆಗಮಿಸುತ್ತಿರುವ ಕರ್ನಾಟಕ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಅಲೆಮಾರಿ ನಿಗಮದ ಅಧ್ಯಕ್ಷೆಯಾದ ಶ್ರೀಮತಿ ಪಲ್ಲವಿ.ಜಿ ಯವರ ಕಳೆದ ಒಂದು ವರ್ಷಗಳಿಂದ ಉತ್ತರ ಕರ್ನಾಟಕ ಅಲೆಮಾರಿಗಳ ಅಭಿವೃದ್ಧಿಗೆ ಯಾವುದೇ ಅನುದಾನ ಬಿಡುಗಡೆಯಲ್ಲಿ ತಾರತಮ್ಯ ಎಸಗಿದ್ದು ಈ ಅಲೆಮಾರಿ ಅಭಿವೃದ್ಧಿ ವಿರೋಧಿ ಧೋರಣೆ ಖಂಡಿಸಿ ಕಪ್ಪುಪಟ್ಟಿ ಪ್ರದರ್ಶನ ಮಾಡಲಾಗುವುದು, ಇಂಡಿ ಮತಕ್ಷೇತ್ರಕ್ಕೆ ಪ್ರವೇಶ ಮಾಡದಂತೆ ತಡೆದು ಪ್ರತಿಭಟನೆ ಮಾಡಲಾಗುವುದು ಎಂದು ಅಲೆಮಾರಿ ಸಮುದಾಯಗಳ ಜಿಲ್ಲಾ ಮುಖಂಡ ಪ್ರೀತು ದಶವಂತ ಕರೆ ನೀಡಿದ್ದಾರೆ.

ಪಲ್ಲವಿ ಜಿ. ರವರು ಸರ್ವಾಧಿಕಾರಿ ಧೋರಣೆ ಹಾಗೂ ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿ ಪೋಟೋ ಪ್ರದರ್ಶನ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ಸರ್ಕಾರದಿಂದ ಯಾವುದೇ ಅನುದಾನವನ್ನು ತರದೇ ಕೇವಲ ಭರವಸೆಗಳನ್ನು ನೀಡುತ್ತಾ ನಿಗಮದಲ್ಲಿ ಕೇವಲ ಕಲ್ಯಾಣ ಕರ್ನಾಟಕದ ಜಿಲ್ಲೆಗಳಿಗೆ ಭೂ ಒಡೆತನ ಯೋಜನೆಯಡಿ 20 % ಕಮಿಷನ್ ಧಂದೆ ಮಾಡುತ್ತಾ ರಾಯಚೂರು ಜಿಲ್ಲೆಯೊಂದಕ್ಕೆ ಸುಮಾರು 8 ಕೋಟಿಗೂ ಹೆಚ್ಚು ಅನುದಾನವನ್ನು ಮಂಜೂರು ಮಾಡಿರುತ್ತಾರೆ. ಜೊತೆಗೆ ನಿಗಮದ ಆಪ್ತಕಾರ್ಯದರ್ಶಿಯಾಗಿ ನೇಮಕವಾಗಿರುವ ಆನಂದ್ ಕುಮಾರ್ ಎಂಬುವವರು ಎಲ್ಲಾ ಜಿಲ್ಲೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಎಲ್ಲಾ ಜಿಲ್ಲಾಧಿಕರಿಗಳಿಗೆ ಮತ್ತು ಅಧಿಕಾರಿಗಳಗೆ ವಿಶೇಷ ಅಧಿಕಾರಿ ಎಂದು ಹೇಳಿಕೊಂಡು ತಮ್ಮ ಅಧಿಕಾರ ವ್ಯಾಪ್ತಿ ಮೀರಿ ನಿಗಮದ ಅಧ್ಯಕ್ಷರ ಸರಿಸಮಾನವಾಗಿ ಕುಳಿತುಕೊಂಡು ಸಭೆಯ ಶಿಷ್ಟಾಚಾರವನ್ನು ಉಲ್ಲಂಘಿಸುತ್ತಿದ್ದಾರೆ. ಹೀಗೆ ತಮ್ಮ ಅಧಿಕಾರ ವ್ಯಾಪ್ತಿಮೀರಿ ಶಿಷ್ಟಚಾರ ಉಲ್ಲಂಘಿಸಿಕೊಂಡು ಅಧ್ಯಕ್ಷರ ಅಧಿಕಾರವನ್ನು ಸ್ವಯಂ ದುರ್ಬಳಕೆ ಮಾಡಿಕೊಂಡು ಅಧಿಕಾರಿಗಳಿಗೆ ಧಮ್ಕಿ ಹಾಕಿ ಹಫ್ತಾ ವಸೂಲಿ ಧಂಧೆಯ ಜೊತೆಗೆ ಅಲೆಮಾರಿಗಳ ಸಮಗ್ರ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನವನ್ನು ಕೇಲವ ಭೂ ಒಡೆತನ ಯೋಜನೆಗೆ ಮಾತ್ರ ಬಳಕೆ ಮಾಡಿಕೊಂಡು ಅಲೆಮಾರಿ ನಿವೇಶನ ಹಾಗೂ ಲೇಔಟ್ ಅಭಿವೃದ್ಧಿ ಮತ್ತು ಮೂಲಭೂತ ಸೌಕರ್ಯಕ್ಕೆ ಯಾವುದೇ ಅನುದಾನವನ್ನು ಮೀಸಲಿಟ್ಟದೇ ಕೇವಲ ಕಲ್ಯಾಣ ಕರ್ನಾಟಕ ಕೆಲವು ಜಿಲ್ಲೆಗಳಿಗೆ ಮಾತ್ರ ಭೂ ಒಡೆತನ ಯೋಜನೆಯಡಿ ಅನುದಾನ ಮಂಜೂರು ಮಾಡಿಕೊಂಡು ಬ್ರಹ್ಮಾಂಡ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ.ಹೀಗೆ ರಾಜ್ಯ ಎಸ್‌ಸಿ, ಎಸ್‌ಟಿ ಅಲೆಮಾರಿ ಜನರಿಗೆ ಯಾಮಾರಿಸಿಕೊಂಡು ನಿಗಮದಲ್ಲಿ ಲೂಟಿ ಮಾಡುವ ಹುನ್ನಾರ ಮಾಡುತ್ತಿದ್ದಾರೆ. ಯಾರಾದರೂ ಪ್ರಶ್ನೆ ಮಾಡಿದರೆ ಅವರಿಗೆ ಧಮ್ಕಿ ಹಾಕುವುದು, ಅಧಿಕಾರಿಗಳ ಮುಖಾಂತರ ಬೆದರಿಕೆ ಹಾಕುವುದು ಮಾಡುತ್ತಾನೆ.



ನಿಗಮದಲ್ಲಿ ಯಾವುದೇ ಕೆಲಸಕ್ಕೂ ಬಂದರೆ ಯಾರ ದರೂ ಸರಿ ದುಡ್ಡು ಕೊಟ್ಟರೆ ಮಾತ್ರ ಕೆಲಸ ಇಲ್ಲಾಂದರೆ ಅಷ್ಟೆ ನಿಮ್ಮ ಕತೆ ಅನ್ನುತ್ತಾನೆ. ಹೀಗೆ ಅಲೆಮಾರಿ ನಿಗಮದ ಅಧ್ಯಕ್ಷೆಯ ಹೆಸರಿನಲ್ಲಿ ಆಪ್ತಕಾರ್ಯದರ್ಶಿ ಆನಂದ್ ಕುಮಾರ್ ಎಂಬುವವನು ಅಧ್ಯಕ್ಷರ ವಿಶೇಷ ಅಧಿಕಾರಿ ಎಂದು ಹೇಳಿಕೊಂಡು ಹಗಲುವೇಷದ ಮುಖವಾಡ ಧರಿಸಿಕೊಂಡು ಅಧಿಕಾರಿಗಳಿಗೆ ಹಾಗೂ ಅಲೆಮಾರಿ ಸಮುದಾಯಗಳ ಜನರ ಹೊಟ್ಟೆ ಮೇಲೆ ಬರೆ ಎಳೆಯುವಂತಹ ಕೆಲಸ ಮಾಡುತ್ತಿದ್ದಾನೆ. ಇಂತಹ ಬೇಜವಬ್ದಾರಿ ಅಧ್ಯಕ್ಷೆ ಹಾಗೂ ಅವರ ಕಡು ಭ್ರಷ್ಟ ಆಪ್ತ ಸಹಾಯಕರಾದ ಆನಂದ ಕುಮಾರ ಏಕಲವ್ಯ ಇಬ್ಬರೂ ಇಂಡಿ ವಿಧಾನಕ್ಷೇತ್ರಕ್ಕೆ ಬರದಂತೆ ತಡೆದು ಕಪ್ಪು ಪಟ್ಟಿ ಪ್ರದರ್ಶನ ಮಾಡಲಾಗುವುದು ಎಂದು ವಿಜಯಪುರ ಅಲೆಮಾರಿ ಸಂಘಟನೆಗಳ ಮುಖಂಡರು ಸಭೆ ಸೇರಿ ಈ ಪ್ರತಿಕಾ ಪ್ರಕಟಣೆಯ ಮೂಲಕ ಸರ್ಕಾರಕ್ಕೆ ಮತ್ತು ನಿಗಮದ ಅಧ್ಯಕ್ಷರಿಗೆ ಎಚ್ಚರಿಕೆ ಸಂದೇಶವನ್ನು ರವಾನಿಸುತ್ತೇವೆ ಎಂದು ವಿಜಯಪುರ ಜಿಲ್ಲೆಯ ಅಲೆಮಾರಿ ಸಂಘಟನೆಯ ಮುಖಂಡ ಪ್ರೀತು ದಶವಂತ ಕರೆ ನೀಡಿದ್ದಾರೆ.

## ಮುಂದುವರೆದ ಅವಿರೋಧ ಆಯ್ಕೆ ಪರಂಪರೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮುದ್ದೇಬಿಹಾಳ

ತಾಲ್ಲೂಕಿನ ಕೇಸಾಪೂರ ಶ್ರೀ ಸಂಗಮೇಶ್ವರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಆಡಳಿತ ಮಂಡಳಿಯ ನಿರ್ದೇಶಕರ ಸ್ಥಾನಗಳಿಗೆ ಸೋಮವಾರ 12 ನಿರ್ದೇಶಕರು ಅವಿರೋಧ ಆಯ್ಕೆಯಾದರು.

ಅವಿರೋಧವಾಗಿ ಆಯ್ಕೆಯಾಗಿ ಮಾತನಾಡಿದ ನಿರ್ದೇಶಕರಾದ ಸಿದ್ದಪ್ಪ ತಳವಾರ, ಜಗದೀಶ್ ಪಂಪಣ್ಣನವರ, ಶರಣಪ್ಪ ವಡ್ಡರ ನಮ್ಮ ಸಂಗಮೇಶ್ವರ ಪಿಕೆಪಿಎಸ್ 1999 ರಲ್ಲಿ ಸ್ಥಾಪಿತವಾಗಿದೆ ಅಲ್ಲಿಂದ ಇಲ್ಲಿಯವರೆಗೆ ಬರಲಾಗುತ್ತಿದೆ ಪಕ್ಷಾತೀತ ಜಾತ್ಯಾತೀತವಾಗಿ ಅವಿರೋಧವಾಗಿ ಆಯ್ಕೆಮಾಡಿಕೊಂಡು ಬರಲಾಗುತ್ತಿದೆ ಅತಿ ಕಡಿಮೆ ಅವಧಿಯಲ್ಲಿ ಕೇಸಾಪೂರ ಸಂಗಮೇಶ್ವರ ಪಿಕೆಪಿಎಸ್ ಆರ್ಥಿಕವಾಗಿ ಹೆಚ್ಚು ಲಾಭಾಂಶವನ್ನು ಪಡೆಯುತ್ತ ಅಭಿವೃದ್ಧಿ ಪಥದತ್ತ ಸಾಗುತ್ತಿದೆ ಅತ್ಯುತ್ತಮ ಸಹಕಾರಿ ಸಂಘವೆಂದು ಜಿಲ್ಲೆಯಲ್ಲಿ ಗುರುತಿ ಸಿಕೊಂಡಿದೆ. ಸೋಸಾಯಿಟಿಯಿಂದ ಸಿಗುವಂತಹ ಸೌಲಭ್ಯಗಳನ್ನು ನಮ್ಮ ಸಂಘದ ಸದಸ್ಯರಿಗೆ ಒದಗಿಸುತ್ತಿದೆ ರೈತರ ಅನುಕೂಲತೆ ಸದಾ ಮುಂದೆ ಇದೆ ಮತ್ತು ಸ್ವಂತ ಕಟ್ಟಡವನ್ನು ಹೊಂದಿದೆ, ಯರಗಲ್ ನಲ್ಲಿ ಶಾಖೆಯನ್ನು ಮಾಡಲಾಗಿದೆ ಎಂದು ಅವಿರೋಧವಾಗಿ ಆಯ್ಕೆ ಮಾಡಿದ ಊರಿನ ಹಿರಿಯರಿಗೆ ಸದಸ್ಯರಿಗೆ ಕೃತಜ್ಞತೆ ಸಲ್ಲಿಸುತ್ತೇವೆ ಎಂದರು.

> **ಚನ್ನಬಸಪ್ಪ ಸಂಗಪ್ಪ ಕುಸ್ತಿ , ಬಾಲಪ್ಪ ಭೀಮಪ್ಪ ತಳವಾರ, ಅಶೋಕ ಹಣಮಪ್ಪ ವಾಲಿಕಾರ, ಗುರುಸಿದ್ದಪ್ಪ ಗ್ಯಾನಪ್ಪ ಗೌಡರ, ಹಣಮಂತಪ್ಪ ಮಲ್ಲಪ್ಪ ಕಂಗಳ, ಭುವನೇಶ್ವರಿ ಬಸವರಾಜ ಪಡಶೆಟ್ಟಿ, ಜ್ಯೋತಿ ಶ್ರೀನಿವಾಸ ವಡ್ಡರ, ಜಗದೀಶ್. ಗು. ಪಂಪಣ್ಣನವರ,ಶರಣಪ್ಪ ಅ.ಗಂಗಾವತಿ, ಶರಣಪ್ಪ.ಯ. ವಡ್ಡರ, ಶಿದಪ್ಪ .ಹ ತಳವಾರ, ಗಿರಿಜಾ ಬ.ಪಾಟೀಲ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾ ಅಧಿಕಾರಿ ವಿರೇಶ ಬಳಿಗಾರ ಘೋಷಣೆ ಮಾಡಿದ್ದಾರೆ**


5 ವರ್ಷ ಅವಧಿಗೆ ಆಯ್ಕೆಯಾದ ನೂತನ ನಿರ್ದೇಶಕರಿಗೆ ಸನ್ಮಾನಿಸಿ ಸಿಹಿ ತಿನ್ನಿಸಿದರು ಈ ವೇಳೆ ಸಂಗಮೇಶ್ವರ ಪಿಕೆಪಿಎಸ್ ನ ಮುಖ್ಯ ಕಾರ್ಯನಿರ್ವಾಹಕ ರಾಮಣ್ಣ ಖಾನಾಪುರ ಸಿಬ್ಬಂದಿಗಳಾದ ಬಿ ಕೆ ಬಿರಾದಾರ, ಎಸ್ ಬಿ ಗೌಡರ, ಎಸ್ ಎಸ್ ಕುಸ್ತಿ, ಎಸ್ ಎಲ್ ಬಿರಾದಾರ, ಬಿ ಎಸ್ ಬಂಗಾರಗುಂಡ, ಬಿ ಬಿ ಪಡಶೆಟ್ಟಿ, ಮಹಾಂತೇಶ ಕಂಠಿ, ಗುಂಡಪ್ಪ ಬಿರಾದಾರ ಉಪಸ್ಥಿತರಿದ್ದರು.

## ಮೂಢನಂಬಿಕೆ ಬಿಡಿ ಮೂರ್ಛೆರೋಗದ ಬಗ್ಗೆ ತಿಳಿವಳಿಕೆ ಪಡೆಯಿರಿ

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

ಸಾಮಾನ್ಯ ಜನರಿಗೆ ಮೂರ್ಛೆ ರೋಗದ ಬಗ್ಗೆ ಇರುವ ಮೂಢನಂಬಿಕೆ ಹೋಗಲಾಡಿಸಲು ಸರಿಯಾದ ತಿಳುವಳಿಕೆ ಅತ್ಯವಶ್ಯ ಎಂದು ಡಾ. ಜಿ ಓ ನಾಗರಾಜ್ ಜಿಲ್ಲಾ ಮಾನಸಿಕ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಹೇಳಿದರು. ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ಚಿತ್ರದುರ್ಗ ವತಿಯಿಂದ ಜಿಲ್ಲಾ ಆಸ್ಪತ್ರೆಯ ಬಿ ಸಿ ರಾಯ್ ಸಭಾಂಗಣದಲ್ಲಿ ಆಯೋಜಿಸಿದ ಮೂರ್ಛೆರೋಗ ದಿನಾಚರಣೆ ಕುರಿತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುತ್ತಾ ಅವರು ಮಾತನಾಡಿದರು. ಮೆದುಳಿನಲ್ಲಾಗುವ ರಾಸಾಯನಿಕ ಬದಲಾವಣೆಯಿಂದ ಹಾಗೂ ಕೌಟುಂಬಿಕ ಹಿನ್ನಲೆಯಿಂದ ಮೂರ್ಛೆರೋಗ ವಯಸ್ಸು, ಗಂಡು-ಹೆಣ್ಣು ಎಂಬ ಭೇದವಿಲ್ಲದೆ ಯಾರಿಗಾದರೂ ಮೂರ್ಛೆರೋಗ ಬರುವ ಸಾಧ್ಯತೆಯಿದ್ದು ಮೂಢನಂಬಿಕೆಗೆ ಒಳಗಾಗದೆ ವೈದ್ಯರ ಬಳಿ ಚಿಕಿತ್ಸೆ ಪಡೆದು ಉತ್ತಮ ಆರೋಗ್ಯ ಹೊಂದಬೇಕೆಂದರು. ಡಾ. ಕಿರಣ್ ಗೌಡ ನರರೋಗ ತಜ್ಞರು ಬಸವೇಶ್ವರ ವೈದ್ಯಕೀಯ ಮಹಾವಿದ್ಯಾಲಯ ಇವರು ಮಾತನಾಡುತ್ತಾ ಕೆಲವರಿಗೆ ಓದುವಾಗ, ತಲೆಯ ಮೇಲೆ ನೀರು ಹಾಕಿದಾಗ, ತಲೆಗೆ ಪೆಟ್ಟು ಬಿದ್ದಾಗ ಮೆದುಳು ಜ್ವರದಿಂದ, ಮದ್ಯಪಾನ ಸೇವನೆಯಿಂದ, ಅನುವಂಶಿಯತೆಯಿಂದ ಹುಟ್ಟಿನಿಂದ ಸಾಯುವವರೆಗೆ ಯಾರಿಗೆ ಬೇಕಾದರೂ ಕಾರಣ ಇದ್ದು ಅಥವಾ ಇಲ್ಲದೆ ಕೂಡ ಪಿಟ್ಸ್ ಬರಬಹುದು ಎಂದರು ಯಾವುದೇ ವ್ಯಕ್ತಿಗೆ ಪಿಟ್ಸ್ ಬಂದಾಗ 30 ಅಥವಾ 40 ಸೆಕೆಂಡುಗಳಲ್ಲಿ ಫಿಟ್ಸ್ ತಾನಾಗಿಯೇ ನಿಲ್ಲುತ್ತದೆ ಪಿಕ್ಸ್ ಬಂದ ರೋಗಿಯನ್ನು ಎಡಮೊಗ್ಗುಲಲ್ಲಿ ಅಥವಾ ಬೋರಲು ಮಲಗಿಸುವುದು ಗಾಳಿ, ಬೆಳಕು ಇರುವಂತೆ ನೋಡಿಕೊಳ್ಳುವುದು ಒಳಿತು ಆದರೆ ಬಾಯಿ ಒಳಗೆ ಚಮುಚೆ ಅಥವಾ ಬೆರಳುಗಳನ್ನು ಇಡಬಾರದು ಹಾಗೂ ಪಿಟ್ಸ್ ಬರುವವರು ಬೆಂಕಿ ತೂಪಾದ ವಸ್ತುವಿನ ಹತ್ತಿರ ಅಪಾಯದ ಸ್ಥಳಗಳಲ್ಲಿ ಕೆಲಸ ನಿರ್ವಹಿಸಬಾರದು. ವೈದ್ಯರ ಸಲಹೆಯಂತೆ ಚಿಕಿತ್ಸೆ ಪಡೆದುಕೊಳ್ಳಬೇಕೆಂದರು. ಡಾಕ್ಟರ್ ಮಂಜುನಾಥ್ ಆರ್ ಮನೋವೈದ್ಯರು ಮಾತನಾಡುತ್ತಾ ಹಲವರಿಗೆ ಮೆದುಳಲ್ಲಿ ಗಾಯ ಜೊತೆಗೆ ಭಾವನೆ ಆಲೋಚನೆಗಳಲ್ಲಿ ಬದಲಾವಣೆಯಾದಾಗ ಪಿಟ್ಸ್ ಬರುವ ಸಾಧ್ಯತೆ ಇದೆ ಹಲವರು ಪಿಟ್ಸ್ ಬಂದವರನ್ನು ಇದು ಒಂದು ಪಾಪ ಶಾಪ ಕರ್ಮದಿಂದ ಬಂದಿದೆ ಎಂಬ ಮೂಢನಂಬಿಕೆಯಿಂದ ದೇವರ ಹತ್ತಿರ ಕರೆದುಕೊಂಡು ಹೋಗಿ ಸುಖ ಸುಮ್ಮನೆ ಸಮಯ ವ್ಯರ್ಥ ಮಾಡಿ ರೋಗ ಉಲ್ಬಣಕ್ಕೆ ಹೆಚ್ಚು ಅವಕಾಶ ಮಾಡಿ ಕೊಡದಂತೆ ನರರೋಗ ಅಥವಾ ಮನೋವೈದ್ಯರಲ್ಲಿ ಚಿಕಿತ್ಸೆ ಪಡೆಯಬೇಕು ಕಾಲ ವಿಳಂಬವಾದಲ್ಲಿ ರೋಗ ತೀವ್ರತೆ ಹೆಚ್ಚಾಗದಂತೆ ಜಾಗ್ರತೆ ವಹಿಸಬೇಕು ಫೆ. 10 2015ರಿಂದ ಅಕಸ್ಮಾರ ದಿನವನ್ನ ಪ್ರತಿ ವರ್ಷ ಆಚರಿಸಲಾಗುತ್ತಿದ್ದು ಅಪಸ್ಮಾರದಿಂದ ಬಳಲುತ್ತಿರುವವರನ್ನು ಬೆಂಬಲಿಸುವ ಮತ್ತು ಮೇಲಕ್ಕೆ ಎತ್ತುವ, ಜಾಗೃತಿ ಮೂಡಿಸುವುದು ನಿರಂತರವಾಗಿರಬೇಕು ವಹಿಸಬೇಕೆಂದರು.



ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ ಮೊಬೈಲ್ ಬಳಕೆ ಕಡಿಮೆ ಮಾಡಿ ಪುಸ್ತಕ ಹಿಡಿಯುವುದನ್ನು ಬಿಡಬೇಡಿ ಜ್ಞಾನದ ಬೆಳಕಿನಿಂದ ಅಜ್ಞಾನದ ಕತ್ತಲನ್ನು ಕಳೆಯಿರಿ ನಕ್ಕಷ್ಟು ಆರೋಗ್ಯ ವೃದ್ಧಿ ಆಗುತ್ತೆ ಅವಕಾಶ ಸಿಕ್ಕಾಗ ಮಾತ್ರ ನಗು ಇರಲಿ ಎಂದು ನರ್ಸಿಂಗ್ ವಿದ್ಯಾರ್ಥಿಗಳನ್ನು ನಗೆಗಡಲಲ್ಲಿ ತೇಲಿಸಿ ಸರ್ವರಿಗೆ ವಂದನಾರ್ಪಣೆ ಮಾಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಜಾನಕಿ ನಿರೂಪಿಸಿದರು. ವೈ. ತಿಪ್ಪೇಸ್ವಾಮಿ. ಶ್ರೀಧರ.ಟಿ. ಕ್ಲಿನಿಕಲ್ ಸೈಕಲಾಜಿಸ್ಟ್, ಶರತ್ ಇನ್ನಿತರರಿದ್ದರು.

## ದಶಕ ಕಳೆದರೂ ಆರಂಭವಾಗದ ಪಟ್ಟಣ ಪಂಚಾಯಿತಿಯ ಹೊಸ ಕಟ್ಟಡ

### ಚುನಾವಣಾಧಿಕಾರಿಗಳು, ಸಿಬ್ಬಂದಿ ಕಿರಿದಾದ ಜಾಗದಲ್ಲಿ ಕುಳಿತು ಚುನಾವಣೆ ಪ್ರಕ್ರಿಯೆ ಮುಗಿಸಿ ಬೂತ್ ಜಾಗದ ಬಗ್ಗೆ ಅಸಮಾಧಾನ

• ಉದಯವಾಹಿನಿ, ಕನಕಗಿರಿ

ಅಖಂಡ ಗಂಗಾವತಿ ತಾಲ್ಲೂಕಿನಲ್ಲಿ ಎರಡನೇಯ ಅತಿ ದೊಡ್ಡ ಗ್ರಾಮ ಪಂಚಾಯಿತಿ ಸದಸ್ಯರನ್ನು ಹೊಂದಿದ್ದ ಇಲ್ಲಿನ ಗ್ರಾಮ ಪಂಚಾಯಿತಿಯನ್ನು ಸಚಿವ ಶಿವರಾಜ ತಂಗಡಗಿ ಅವರ ಪರಿಶ್ರಮದಿಂದ. 2015ರಲ್ಲಿ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೆ ಏರಿಸಲಾಗಿದ್ದರೂ ಸೌಲಭ್ಯಗಳ ಕೊರತೆಯಿಂದ ಬಳಲುತ್ತಿದೆ. ಹಳೆಯ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಪಟ್ಟಣ ಪಂಚಾಯಿತಿ ಆಡಳಿತ ನಡೆಯುತ್ತಿದ್ದು ಸಿಬ್ಬಂದಿಗೆ ತಕ್ಕಂತೆ ಜಾಗದ ವ್ಯವಸ್ಥೆ ಇಲ್ಲವಾಗಿದೆ. ಕಚೇರಿಯ ಕೊಠಡಿಗಳ ಎಲ್ಲಾ ಮೇಲ್ಛಾವಣಿಗಳಿಗೆ ಹಾಕಿದ ಸಿಮೆಂಟ್ ಕಾಂಕ್ರೀಟ್, ಕಬ್ಬಿಣದ ಸರಳು ಕಿತ್ತಿಕೊಂಡು ಬಂದಿದ್ದು ಸಿಬ್ಬಂದಿಗಳು ಆತಂಕದಲ್ಲಿ ಕೆಲಸ ಮಾಡುತ್ತಿದ್ದಾರೆ. ಕಚೇರಿಯ ಮುಂಭಾಗದ ಸ್ಥಿತಿ ದೇವರೆ ಬಲ್ಲ ಎನ್ನುವಂತಾಗಿದೆ. ನಾಮಫಲಕ ಬರೆಯುವ ಸ್ಥಳದಲ್ಲಿ ಸಿಮೆಂಟ್ ಫ್ಲಾಸ್ಟರ್ ಕಿತ್ತಿಕೊಂಡು ಬಂದಿದ್ದು ಅಸಹ್ಯ ಮೂಡಿಸುತ್ತದೆ.

ಸಮುದಾಯ ಸಂಘಟಕರು, ಆರೋಗ್ಯ ನಿರೀಕ್ಷಕರು, ಲೋಡರ್ಸ್, ಡ್ರೈವರ್, ಸೇರಿದಂತೆ ಅನೇಕ ಹುದ್ದೆಗಳು ಖಾಲಿ ಇವೆ. ಕಂದಾಯ ವಸೂಲಿಗಾರ, ಎಂಜಿನಿಯರ್ ಹುದ್ದೆ ಖಾಲಿವಿದ್ದರೂ ಕಳೆದ ನಾಲ್ಕು ವರ್ಷಗಳಿಂದಲೂ ನಿಯೋಜನೆ ಮೆರೆಗೆ ಕೆಲಸ ಮಾಡುತ್ತಿದ್ದಾರೆ. ಸದ್ಯ ಕೆಲಸ ಮಾಡುತ್ತಿರುವ ಸಿಬ್ಬಂದಿಗಳಿಗೆ ಸಮರ್ಪಕವಾದ ಜಾಗದ ವ್ಯವಸ್ಥೆ ಇಲ್ಲದ ಪರಿಣಾಮ ಇಕ್ಕಟ್ಟಿನಲ್ಲಿಯೆ ಕುಳಿತುಕೊಂಡು ಕೆಲಸ ಮಾಡಬೇಕಾಗಿದೆ. ತಿಜೋರಿ ಇಡಲು ಆಗುತ್ತಿಲ್ಲ ಹೀಗಾಗಿ ಕಚೇರಿಗೆ ಸಂಬಂಧಿಸಿದ ಕಡತಗಳು, ಫೈಲ್, ಇತರೆ ದಾಖಲೆಗಳನ್ನು ಟೇಬಲ್ ಮೇಲೆ ಹಾಕಬೇಕಾಗುತ್ತದೆ.


ಉದಯವಾಹಿನಿ ಚಿತ್ರ

ನೀರು, ಮನೆ, ನಿವೇಶನ ಕರ ತುಂಬಲು, ವಸತಿ ಯೋಜನೆ, ಬದಿ ಬದಿ ವ್ಯಾಪಾರ, ಇತರೆ ಕೆಲಸಗಳಿಗೆ ಕಚೇರಿಗೆ ಬರುವ ಜನರು ನಿಂತುಕೊಂಡು ವ್ಯವಹರಿಸಬೇಕಾಗಿದೆ. ಸ್ವಚ್ಛತೆ ಕೆಲಸಕ್ಕೆ ಹೋಗಲು, ತಮ್ಮ ಕೆಲಸ ಮುಗಿಸಿಕೊಂಡು ಕಚೇರಿಗೆ ಬರುವ ಪೌರ ಕಾರ್ಮಿಕರಿಗೆ ವಿಶ್ರಾಂತಿ ಪಡೆಯಲು, ಉಪಾಹಾರ ಸೇವಿಸಲು ವಿಶ್ರಾಂತಿ ಭವನ ನಿರ್ಮಾಣ ಮಾಡದ ಕಾರಣ ಕಚೇರಿಯ ಧ್ವಜದ ಕಟ್ಟೆ, ಮೆಟ್ಟಿಲುಗಳ ಮೇಲೆ ಕುಳಿತುಕೊಳ್ಳುವಂತ ದುಸ್ಥಿತಿ ಇಲ್ಲಿದೆ. ಹೇಳಿಕೊಳ್ಳುವಂತ ಶೌಚಾಲಯ, ಮೂತ್ರಾಲಯಗಳು ಕಚೇರಿಯಲ್ಲಿ ಇಲ್ಲ. ಕಚೇರಿಗೆ ಸಂಬಂಧಿಸಿದ ಟ್ರ್ಯಾಕ್ಟರ್, ಕಸದ ವಾಹನ, ನೀರಿನ ಟ್ಯಾಂಕರ್, ಇತರೆ ವಾಹನಗಳನ್ನು ನಿಲ್ಲಿಸಲು ಸ್ಥಳಾವಕಾಶ ಇಲ್ಲವಾಗಿದೆ.

**ತಾ.ಪಂ ಕಚೇರಿಯಲ್ಲಿ ಸಾಮಾನ್ಯ ಸಭೆ:** ಈಗಿನ ಪಟ್ಟಣ ಪಂಚಾಯಿತಿಯಲ್ಲಿ ಸಾಮಾನ್ಯ ಸಭೆ ನಡೆಸಲು ಕಿರಿದಾದ ಸಭಾಂಗಣವಿದೆ. ಅಧಿಕಾರಿಗಳು, ಸದಸ್ಯರು, ಸಿಬ್ಬಂದಿ ಕುಳಿತುಕೊಂಡು ಸಭೆ ನಡೆಸಲು ಅನಾನುಕೂಲವಾಗುತ್ತದೆ ಹೀಗಾಗಿ ಡಿ.23ರಂದು ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ನೇತೃತ್ವದಲ್ಲಿ ಸಾಮಾನ್ಯ ಸಭೆಯನ್ನು ತಾಲ್ಲೂಕು ಪಂಚಾಯಿತಿಯ ಸಭಾಂಗಣದಲ್ಲಿ ನಡೆಸಬೇಕಾಯಿತು ಎಂದು ಸಿಬ್ಬಂದಿ ವಿವರಿಸಿದರು.

> **ಪಟ್ಟಣ ಪಂಚಾಯಿತಿಯ ಹೊಸ ಕಚೇರಿಯ ಕಟ್ಟಡ ನಿರ್ಮಾಣಕ್ಕೆ ತೊಂಡೆತೇವರಪ್ಪನ ದೇವಾಲಯದ ಪರಿಸರದಲ್ಲಿ ನಿವೇಶನ ಗುರುತಿಸಿ ಅಂತಿಮ ಗೊಳಿಸಲಾಗಿದೆ**
> **-ದತ್ತಾತ್ರೇಯ ಹೆಗ್ಡೆ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ**

### ಹುಡುಕಾಟದಲ್ಲಿ ಕಾಲ ಕಳೆದ ಅಧಿಕಾರಿಗಳು

**ಪಟ್ಟಣ ಪಂಚಾಯಿತಿಯ ಹೊಸ ಕಟ್ಟಡ ನಿರ್ಮಾಣಕ್ಕೆ ಜಾಗದ ಹುಡುಕಾಟದಲ್ಲಿಯೇ ಅಧಿಕಾರಿಗಳು ಹಾಗೂ ಆಡಳಿತ ಮಂಡಳಿಯವರು ಕಾಲ ಕಳೆದರು ಎಂದು ಸ್ಥಳೀಯರು ದೂರುತ್ತಾರೆ. ಪೊಲೀಸ್ ಠಾಣೆಯ ಹಳೆಯ ಕಚೇರಿ ಹಳೆಯ ಪ್ರಾಥಮಿಕ ಆರೋಗ್ಯ ಕೇಂದ್ರ, ಹೂಗಾರ ಅವರ ನಿವೇಶನ ಹೀಗೆ ಹಲವು ಕಡೆ ಜಾಗ ಗುರುತಿಸಿದ್ದರೂ ವಿವಿಧ ಕಾರಣಗಳಿಂದಾಗಿ ಅಂತಿಮಗೊಳಿಸಲಿಲ್ಲ. ಹೀಗಾಗಿ ಪಂಚಾಯಿತಿ ಕಚೇರಿಯಲ್ಲಿಯೇ ಉಳಿಯಬೇಕಾಗಿದೆ ಎಂದು ಹೆಸರು ಬಯಸದ ಸಿಬ್ಬಂದಿಯೊಬ್ಬರು ಅಳಲು ತೋಡಿಕೊಂಡರು.**

# ಆ ಒಂದು ಸೀರೆಗಾಗಿ ನಾನು ರಾಷ್ಟ್ರ ಪ್ರಶಸ್ತಿ ಪಡೆಯಬೇಕು



**ಸ್ಪೆಷಲ್ ಕಾರಣ ತಿಳಿಸಿದ ಸಾಯಿ**

ಸಾಯಿ ಪಲ್ಲವಿ ಅವರು ಪ್ರತಿಭಾವಂತ ನಟಿ ಎಂಬುದನ್ನು ಈಗಾಗಲೇ ಸಾಬೀತು ಮಾಡಿದ್ದಾರೆ. ಆದರೆ ರಾಷ್ಟ್ರ ಪ್ರಶಸ್ತಿ ಪಡೆಯುವ ಕನಸು ಇನ್ನೂ ಈಡೇರಿಲ್ಲ. ಆ ಬಗ್ಗೆ ಅವರು ಸಂದರ್ಶನವೊಂದರಲ್ಲಿ ಮಾತನಾಡಿದ್ದಾರೆ. ನ್ಯಾಷನಲ್ ಅವಾರ್ಡ್ ಎಂಬುದು ತಮಗೆ ಯಾಕೆ ತುಂಬ ಮುಖ್ಯ ಎಂದು ಅವರು ವಿವರಿಸಿದ್ದಾರೆ. ನಟಿ ಸಾಯಿ ಪಲ್ಲವಿ ಅವರಿಗೆ ರಾಷ್ಟ್ರ ಪ್ರಶಸ್ತಿ ಸಿಗಬೇಕು ಎಂಬ ಆಸೆ ಅಭಿಮಾನಿಗಳಿಗೆ ಇದೆ. ಸ್ವತಃ ಸಾಯಿ ಪಲ್ಲವಿ ಕೂಡ ಅದರ ಬಗ್ಗೆ ಮಹತ್ವಾಕಾಂಕ್ಷೆ ಹೊಂದಿದ್ದಾರೆ. ಅಜ್ಜಿ ನೀಡಿದ, ಒಂದು ವಿಶೇಷವಾದ ಸೀರೆಯ ಸಲುವಾಗಿ ತಾವು ನ್ಯಾಷನಲ್ ಅವಾರ್ಡ್ ಪಡೆಯಬೇಕು ಎಂದು ಸಾಯಿ ಪಲ್ಲವಿ ಅವರು ಹೇಳಿದ್ದಾರೆ. ಅಂದಹಾಗೆ, ಆ ಸೀರೆಯನ್ನು ಕೊಟ್ಟಿರುವುದು ಅವರ ಅಜ್ಜಿ. ಮಾಧ್ಯಮವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಆ ಬಗ್ಗೆ ಸಾಯಿ ಪಲ್ಲವಿ ಅವರು ಮಾತನಾಡಿದ್ದಾರೆ. ಅಭಿಮಾನಿಗಳ ನಿರೀಕ್ಷೆಯಂತೆ 'ಗಾರ್ಗಿ' ಸಿನಿಮಾದಲ್ಲಿನ ನಟನೆಗೆ ಸಾಯಿ ಪಲ್ಲವಿ ಅವರಿಗೆ ರಾಷ್ಟ್ರ ಪ್ರಶಸ್ತಿ ಬರಬೇಕಿತ್ತು. ಆದರೆ ಅದು ಮಿಸ್ ಆಯಿತು. ಮುಂದೊಂದು ದಿನ ಖಂಡಿತವಾಗಿಯೂ ಅವರಿಗೆ 'ಅತ್ಯುತ್ತಮ ನಟಿ' ರಾಷ್ಟ್ರ ಪ್ರಶಸ್ತಿ ಸಿಗಲಿದೆ ಎಂಬುದು ಫ್ಯಾನ್ಸ್ ನಂಬಿಕೆ. ಆ ದಿನ ಸಾಯಿ ಪಲ್ಲವಿ ಅವರು ಅಜ್ಜಿ ಕೊಟ್ಟ ಸೀರೆಯನ್ನು ಧರಿಸಲಿದ್ದಾರಂತೆ. ಸಾಯಿ ಪಲ್ಲವಿ ಅವರಿಗೆ 21 ವರ್ಷ ವಯಸ್ಸಾಗಿದ್ದಾಗ ಅವರ ಅಜ್ಜಿ ಒಂದು ಸೀರೆಯನ್ನು ನೀಡಿದ್ದರು. ಮದುವೆಯ ದಿನ ಆ ಸೀರೆ ಧರಿಸಬೇಕು ಎಂದು ಅಜ್ಜಿ ಹೇಳಿದ್ದರು. ಆದರೆ ಆ ವಿಶೇಷ ಸಂದರ್ಭದಲ್ಲಿ ಆ ಸೀರೆಯನ್ನು ಧರಿಸಲು ಸಾಯಿ ಪಲ್ಲವಿ ನಿರ್ಧರಿಸಿದ್ದಾರೆ. ರಾಷ್ಟ್ರ ಪ್ರಶಸ್ತಿ ಸ್ವೀಕರಿಸುವುದೇ ಆ ವಿಶೇಷ ಸಂದರ್ಭ. ಹಾಗಾಗಿ ಆ ದಿನ ಬರಲಿ ಎಂದು ಅವರು ಕಾಯುತ್ತಿದ್ದಾರೆ. ಪ್ರಶಸ್ತಿ ಪಡೆಯುವವರೆಗೂ ಆ ಒತ್ತಡ ತಮ್ಮ ಮೇಲೆ ಇದ್ದೇ ಇರುತ್ತದೆ ಎಂದು ಅವರು ಹೇಳಿದ್ದಾರೆ.



# ಬ್ಲೌಸ್ ಇಲ್ಲದೆ ಸೀರೆಯುಟ್ಟು ಸದ್ದು ಮಾಡಿದ ವೈಷ್ಣವಿ

**ಮಿಥುನರಾಶಿ ಅವಕಾಶ ಸಿಕ್ಕಿದ್ದು ಹೇಗೆ**

ಮಿಥುನರಾಶಿ ಧಾರಾವಾಹಿಯಲ್ಲಿ ಹೀರೋಯಿನ್ ಆಗಿ ನಟಿ ವೈಷ್ಣವಿ ಗೌಡ ಅವರು ನಟಿಸಿದ್ದರು. ಬ್ಲೌಸ್ ಇಲ್ಲದೆ ಸೀರೆಯುಟ್ಟು ವೈಷ್ಣವಿ ಅವರು ಭಾರೀ ಸದ್ದು ಸುದ್ದಿ ಮಾಡುತ್ತಿದ್ದಾರೆ. ಮಿಥುನ ರಾಶಿ ಧಾರಾವಾಹಿಯಲ್ಲಿ ರಾಶಿ ಪಾತ್ರ ಮಾಡಿದ್ದ ನಟಿ ವೈಷ್ಣವಿ ಕೌಂಡಿನ್ಯ ಆ ಧಾರಾವಾಹಿಯಲ್ಲಿ ಬಹಳ ಸಿಂಪಲ್ ಆಗಿದ್ದರು. ಈಗ ಅವರ ಫೋಟೋಶೂಟ್ ನೋಡಿದವರ ನಿದ್ದೆ ಹಾಳಾಗಿದೆಯಂತೆ. ಹೌದು, ವೈಷ್ಣವಿ ಕೌಂಡಿನ್ಯ ಬ್ಲೌಸ್ ಧರಿಸದೆ, ಸೀರೆ ಉಟ್ಟು ಫೋಟೋಶೂಟ್ ಮಾಡಿಸಿಕೊಂಡಿದ್ದಾರೆ. ವೈಷ್ಣವಿ ಕೌಂಡಿನ್ಯ ಸೌಂದರ್ಯ ನೋಡಿ ಅನೇಕರು ಮರುಳಾಗಿದ್ದಾರೆ. ವೈಷ್ಣವಿ ಕೌಂಡಿನ್ಯ ಅವರು ಸೋಶಿಯಲ್ ಮೀಡಿಯಾದಲ್ಲಿ ಒಂದು ಫೋಟೋ ಶೇರ್ ಮಾಡಿದ್ದಾರೆ. ಬ್ಲೌಸ್ ಇಲ್ಲದೆ ಅವರು ಸೀರೆಯುಟ್ಟು ಮಿಂಚಿದ್ದಾರೆ. ಈ ಫೋಟೋ ನೋಡಿ ವೈಷ್ಣವಿ ಸೌಂದರ್ಯದ ಬಗ್ಗೆ ಭಾರೀ ಮೆಚ್ಚುಗೆ ಸಿಕ್ಕಿದೆ, ಹಾಗೆಯೇ ನೆಗೆಟಿವ್ ಕಾಮೆಂಟ್‌ಗಳು ಬಂದಿವೆ. ಟ್ರೆಡಿಷನಲ್, ಮಾಡರ್ನ್ ಎಂದು ವೈಷ್ಣವಿ ಕೌಂಡಿನ್ಯ ಅವರು ಆಗಾಗ ವಿವಿಧ ಸ್ಟೈಲ್‌ನಲ್ಲಿ ಫೋಟೋಶೂಟ್ ಮಾಡಿಸಿಕೊಳ್ಳುತ್ತಿರುತ್ತಾರೆ. ನಟನೆಯಲ್ಲಿ ಆಸಕ್ತಿ ಇದ್ದಿದ್ದರಿಂದ ಕಾಲೇಜಿನಲ್ಲಿದ್ದಾಗಲೇ ವೈಷ್ಣವಿ ಕೌಂಡಿನ್ಯ ಅವರು ಆಡಿಶನ್ಸ್ ಕೊಡುತ್ತಿದ್ದರು. ಹೀಗೆಯೇ ಅವರಿಗೆ ಕಲರ್ಸ್ ಕನ್ನಡ ವಾಹಿನಿಯಲ್ಲಿ ಪ್ರಸಾರ ಆಗುತ್ತಿದ್ದ 'ಶಾಂತಂ ಪಾಪಂ' ಧಾರಾವಾಹಿಯಲ್ಲಿ ನಟಿಸುವ ಅವಕಾಶ ಬಂತು. ಅದನ್ನು ನೋಡಿ 'ಮಿಥುನ ರಾಶಿ' ಧಾರಾವಾಹಿಗೆ ಆಯ್ಕೆ ಮಾಡಿಕೊಂಡರು. ಶಂಕರ್ ನಾಗ್ ಅಭಿಮಾನಿಯಾದ ರಾಶಿ ಆಟೋ ಓಡಿಸುತ್ತಾಳೆ, ಅಷ್ಟೇ ಅಲ್ಲದೆ ಮನೆ ನಿಭಾಯಿಸುತ್ತಾಳೆ. ಅಕ್ಕ ಸುರಕ್ಷಾ ಖರ್ಚು ಮಾಡುತ್ತ, ಶೋಕಿ ಮಾಡಿದರೂ ಕೂಡ ಅವಳು ಮಾತ್ರ ಅದ್ಯಾವುದಕ್ಕೂ ತಲೆಕೆಡಿಸಿಕೊಳ್ಳದೆ ಹಗಲು-ರಾತ್ರಿ ದುಡಿದು ಹಣ ಸಂಪಾದನೆ ಮಾಡಿ ಮನೆಗೆ ತಂದುಕೊಡುತ್ತಾಳೆ. ಈ ಪಾತ್ರ ಅನೇಕರಿಗೆ ಇಷ್ಟ ಆಗಿತ್ತು. ವೈಷ್ಣವಿ ಅವರು ಹೊರಗಡೆ ಹೋದಾಗೆಲ್ಲ ''ನೀವು ನಿಜವಾಗಿಯೂ ಆಟೋ ಓಡಸ್ತೀರಾ'' ಎಂದು ಕೇಳುತ್ತಿದ್ದರು.

# ಪುಷ್ಪರಾಜ್‌ನ ಸಂಕಷ್ಟಕ್ಕಾಗಿ ಪ್ರಾರ್ಥಿಸಿದ್ರಾ ಸ್ನೇಹಾರೆಡ್ಡಿ



ಪುಷ್ಪ 2 ಸಿನಿಮಾ ರಿಲೀಸ್ ಬಳಿಕ ಟಾಲಿವುಡ್ ನಟ ಅಲ್ಲು ಅರ್ಜುನ್ ಸಾಲು ಸಾಲು ಸಂಕಷ್ಟ ಎದುರಿಸಿದ್ರು. ಪತಿಗಾಗಿ ಪುಷ್ಪರಾಜ್ ರಿಯಲ್ ಪತ್ನಿ ಸ್ನೇಹಾರೆಡ್ಡಿ ಪ್ರಯಾಗ್ರಾಜ್ ತಲುಪಿದ್ದಾರೆ. ಮಹಾಕುಂಭಮೇಳದಲ್ಲಿ ಮಿಂದೆದ್ದು, ಪತಿಗಾಗಿ ಪ್ರಾರ್ಥನೆ ಮಾಡಿದ್ದಾರೆ. ಪುಷ್ಪ 2 ಸಿನಿಮಾ ರಿಲೀಸ್ ಬಳಿಕ ಟಾಲಿವುಡ್ ನಟ ಅಲ್ಲು ಅರ್ಜುನ್ ಸಾಲು ಸಾಲು ಸಂಕಷ್ಟ ಎದುರಿಸಿದ್ರು. ಪತಿಗಾಗಿ ಪುಷ್ಪರಾಜ್ ರಿಯಲ್ ಪತ್ನಿ ಸ್ನೇಹಾರೆಡ್ಡಿ ಪ್ರಯಾಗ್ರಾಜ್ ತಲುಪಿದ್ದಾರೆ. ಮಹಾಕುಂಭಮೇಳದಲ್ಲಿ ಮಿಂದೆದ್ದು, ಪತಿಗಾಗಿ ಪ್ರಾರ್ಥನೆ ಮಾಡಿದ್ದಾರೆ. ಪುಣ್ಯಸ್ನಾನದ ಬಳಿಕ ಸ್ನೇಹಾ ರೆಡ್ಡಿ ದೇಗುಲಗಳಿಗೆ ಭೇಟಿ ನೀಡಿದ್ದಾರೆ. ಪುಷ್ಪ 2 ಸಿನಿಮಾ ಪ್ರೀಮಿಯರ್ ಶೋ ವೇಳೆ ಕಾಲ್ತುಳಿತದಲ್ಲಿ ಮಹಿಳೆ ಸಾವನ್ನಪ್ಪಿದ್ರು. ಈ ಕೇಸ್ ಅಲ್ಲು ಅರ್ಜುನ್ ಅವರಿಗೆ ಜೈಲು ದರ್ಶನ ಮಾಡಿಸಿತ್ತು. ಅಲ್ಲು ಅರ್ಜುನ್ ಅರೆಸ್ಟ್ ಸುದ್ದಿ ದೊಡ್ಡ ಶಾಕಿಂಗ್ ಆಗಿತ್ತು. ಬನ್ನಿ ಮನೆಯವರನ್ನು ದುಃಖಕ್ಕೆ ದೂಡಿತ್ತು. ಅರೆಸ್ಟ್ ಆದ ಒಂದೇ ದಿನಕ್ಕೆ ಬೇಲ್ ಪಡೆದು ಅಲ್ಲು ಅರ್ಜುನ್ ಹೊರಗೆ ಬಂದ್ರು. ಹೊರಗೆ ಬಂದ್ಮೇಲು ಕೆಲ ವಿವಾದಗಳು ಬೆನ್ನು ಹತ್ತಿತ್ತು.

# ಹಾಲಿವುಡ್ ಸಿನಿಮಾದಲ್ಲಿ ಸಲ್ಮಾನ್



ಹಿಂದಿ ಚಿತ್ರರಂಗದಲ್ಲಿ ಸಾಧನೆ ಮಾಡಿರುವ ಸಲ್ಮಾನ್ ಖಾನ್ ಹಾಗೂ ಸಂಜಯ್ ದತ್ ಅವರಿಗೆ ಈಗ ಹಾಲಿವುಡ್‌ನಿಂದ ಆಫರ್ ಬಂದಿದೆ. ಈಗಾಗಲೇ ಶೂಟಿಂಗ್ ಕೂಡ ಆರಂಭ ಆಗಿದೆ. ದುಬೈನಲ್ಲಿ ಅವರಿಬ್ಬರು ಶೂಟಿಂಗ್ ಮಾಡುತ್ತಿದ್ದಾರೆ ಎಂಬ ಸುದ್ದಿ ಪ್ರಕಟ ಆಗಿದೆ. ಈ ವಿಷಯ ಕೇಳಿ ಅಭಿಮಾನಿಗಳಿಗೆ ತುಂಬ ಖುಷಿ ಆಗಿದೆ. ಬಾಲಿವುಡ್‌ನ ಸ್ಟಾರ್ ನಟರಾದ ಸಲ್ಮಾನ್ ಖಾನ್ ಮತ್ತು ಸಂಜಯ್ ದತ್ ಅವರು ತಮ್ಮದೇ ಛಾಪು ಮೂಡಿಸಿದ್ದಾರೆ. ಅವರಿಬ್ಬರ ಕಾಂಬಿನೇಷನ್‌ಗೆ ದೊಡ್ಡ ಪ್ರೇಕ್ಷಕವರ್ಗ ಇದೆ. ಹಿಂದಿ ಸಿನಿಮಾದಲ್ಲಿ ಅವರಿಬ್ಬರು ಜೊತೆಯಾಗಿ ನಟಿಸಿದರೆ ಭಾರಿ ಹೈಪ್ ಸೃಷ್ಟಿ ಆಗುತ್ತದೆ. ಹಾಗಿರುವಾಗ ಹಾಲಿವುಡ್ ಸಿನಿಮಾದಲ್ಲಿ ಅವರಿಬ್ಬರು ತೆರೆ ಹಂಚಿಕೊಂಡರೆನಿರೀಕ್ಷೆಯ ಸುನಾಮಿ ಗ್ಯಾರಂಟಿ. ಅಭಿಮಾನಿಗಳಿಗೆ ಸಖತ್ ಥ್ರಿಲ್ ನೀಡುವಂತಹ ಸುದ್ದಿ ಕೇಳಿಬಂದಿದೆ. ಹಾಲಿವುಡ್ ಸಿನಿಮಾವೊಂದರಲ್ಲಿ ಸಲ್ಮಾನ್ ಖಾನ್ ಮತ್ತು ಸಂಜಯ್ ದತ್ ಅವರು ತೆರೆ ಹಂಚಿಕೊಳ್ಳುತ್ತಿದ್ದಾರೆ ಎನ್ನಲಾಗಿದೆ. ಸಲ್ಮಾನ್ ಖಾನ್ ಮತ್ತು ಸಂಜಯ್ ದತ್ ಅವರಿಗೆ ಭಾರತದಲ್ಲಿ ಮಾತ್ರವಲ್ಲದೇ ಬೇರೆ ಬೇರೆ ದೇಶಗಳಲ್ಲಿ ಕೂಡ ಬೇಡಿಕೆ ಇದೆ. ಹಾಗಾಗಿ ಎಲ್ಲಾ ಪ್ರೇಕ್ಷಕರನ್ನು ಗಮನದಲ್ಲಿ ಇಟ್ಟುಕೊಂಡು ಈ ನಟರನ್ನು ಹಾಲಿವುಡ್ ಸಿನಿಮಾಗೆ ಆಯ್ಕೆ ಮಾಡಿಕೊಳ್ಳಲಾಗಿದೆ. ಹಾಗಂತ ಅವರು ಪ್ರಮುಖ ಪಾತ್ರಗಳನ್ನು ಮಾಡುತ್ತಿಲ್ಲ. ಬದಲಿಗೆ, ಇಬ್ಬರೂ ಕೂಡ ಹಾಲಿವುಡ್ ಸಿನಿಮಾದಲ್ಲಿ ಅತಿಥಿ ಪಾತ್ರ ಮಾಡುತ್ತಿದ್ದಾರೆ ಎಂಬ ಸುದ್ದಿ ಹರಡಿದೆ.

## ಬಾಕ್ಸ್ ಆಫೀಸ್‌ನಲ್ಲಿ ಛಾವ ಅಬ್ಬರ

**3 ದಿನಕ್ಕೆ 121 ಕೋಟಿ ರೂ.**



ದೇಶಾದ್ಯಂತ 'ಛಾವ' ಸಿನಿಮಾ ಯಶಸ್ವಿಯಾಗಿ ಪ್ರದರ್ಶನ ಕಾಣುತ್ತಿದೆ. ಕೇವಲ 3 ದಿನಕ್ಕೆ 121 ಕೋಟಿ ರೂಪಾಯಿ ಕಲೆಕ್ಷನ್ ಆಗಿದೆ. ಬಾಕ್ಸ್ ಆಫೀಸ್‌ನಲ್ಲಿ ಸದ್ದು ಮಾಡುತ್ತಿರುವ ಈ ಸಿನಿಮಾಗೆ ಪ್ರೇಕ್ಷಕರಿಂದ ಪಾಸಿಟಿವ್ ವಿಮರ್ಶೆ ಸಿಕ್ಕಿದೆ. ಈ ಗೆಲುವಿನಿಂದಾಗಿ ರಶ್ಮಿಕಾ ಮಂದಣ್ಣ ಮತ್ತು ವಿಕ್ಕಿ ಕೌಶಲ್ ಅವರ ಬೇಡಿಕೆ ಹೆಚ್ಚಿದೆ. ನಟಿ ರಶ್ಮಿಕಾ ಮಂದಣ್ಣ ಮತ್ತು ನಟ ವಿಕ್ಕಿ ಕೌಶಲ್ ಅವರು ಜೋಡಿಯಾಗಿ ಅಭಿನಯಿಸಿರುವ 'ಛಾವ' ಸಿನಿಮಾ ಸೂಪರ್‌ಹಿಟ್ ಆಗಿದೆ. ಫೆಬ್ರವರಿ 14ರಂದು ಈ ಸಿನಿಮಾ ಬಿಡುಗಡೆ ಆಯಿತು. ಐತಿಹಾಸಿಕ ಕಥಾಹಂದರ ಹೊಂದಿರುವ ಈ ಚಿತ್ರದ ಬಗ್ಗೆ ಆರಂಭದಲ್ಲಿ ದೊಡ್ಡ ಕ್ರೇಜ್ ಇರಲಿಲ್ಲ. ಆದರೆ ರಿಲೀಸ್ ಬಳಿಕ ಉತ್ತಮ ಪ್ರತಿಕ್ರಿಯೆ ಸಿಕ್ಕಿದ್ದರಿಂದ ಕಲೆಕ್ಷನ್ ಹೆಚ್ಚುತ್ತಾ ಹೋಯಿತು. ಈಗ ಮೂರು ದಿನಕ್ಕೆ ಈ ಸಿನಿಮಾ ಬರೋಬ್ಬರಿ 121 ಕೋಟಿ ರೂಪಾಯಿ ಕಲೆಕ್ಷನ್ ಮಾಡುವ ಮೂಲಕ ಸೂಪರ್ ಹಿಟ್ ಎನಿಸಿಕೊಂಡಿದೆ. ರಶ್ಮಿಕಾ ಮಂದಣ್ಣ ಅವರ ಹಿಟ್ ಸಿನಿಮಾಗಳ ಪಟ್ಟಿಗೆ ಈಗ 'ಛಾವ' ಕೂಡ ಸೇರ್ಪಡೆ ಆದಂತೆ ಆಗಿದೆ. ಮೊದಲ ದಿನ 'ಛಾವ' ಸಿನಿಮಾ 33.10 ಕೋಟಿ ರೂಪಾಯಿ ಕಲೆಕ್ಷನ್ ಮಾಡಿತು. ಸಿನಿಮಾ ನೋಡಿದ ಅನೇಕರು ಪಾಸಿಟಿವ್ ಪ್ರತಿಕ್ರಿಯೆ ನೀಡಿದರು. ಅಂದು ವ್ಯಾಲೆಂಟೈನ್ಸ್ ಡೇ ಆದ್ದರಿಂದ ಹಲವರು ಚಿತ್ರಮಂದಿರಕ್ಕೆ ಬಂದರು. ಎರಡನೇ ದಿನದ ಕಲೆಕ್ಷನ್ 39.30 ಕೋಟಿ ರೂಪಾಯಿ ಆಯಿತು. ವೀಕೆಂಡ್‌ನಲ್ಲಿ ಸಿನಿಮಾದ ಬಗ್ಗೆ ಟಾಕ್ ಜಾಸ್ತಿ ಆಯಿತು. ಅದರ ಫಲವಾಗಿ 3ನೇ ದಿನವಾದ ಭಾನುವಾರ (ಫೆ.16) ಈ ಸಿನಿಮಾ 49.03 ಕೋಟಿ ರೂಪಾಯಿ ಗಳಿಸಿತು.

# ಟೀಮ್ ಇಂಡಿಯಾದ ಚಾಂಪಿಯನ್ಸ್ ಟ್ರೋಫಿ ವೇಳಾಪಟ್ಟಿ

ಚಾಂಪಿಯನ್ಸ್ ಟ್ರೋಫಿ 2025 ಹೈಬ್ರಿಡ್ ಮಾದರಿಯಲ್ಲಿ ನಡೆಯಲಿದೆ. ಇಲ್ಲಿ ಟೀಮ್ ಇಂಡಿಯಾದ ಪಂದ್ಯಗಳು ದುಬೈನಲ್ಲಿ ನಡೆದರೆ, ಉಳಿದ ಮ್ಯಾಚ್‌ಗಳು ಪಾಕಿಸ್ತಾನದಲ್ಲಿ ಜರುಗಲಿದೆ. ದುಬೈ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ಜರುಗಲಿರುವ ಟೀಮ್ ಇಂಡಿಯಾ ಪಂದ್ಯಗಳ ಸಂಪೂರ್ಣ ವೇಳಾಪಟ್ಟಿ ಈ ಕೆಳಗಿನಂತಿರಲಿದೆ. ಚಾಂಪಿಯನ್ಸ್ ಟ್ರೋಫಿ 2025 ಆರಂಭಕ್ಕೆ ದಿನಗಣನೆ ಶುರುವಾಗಿದೆ. ಬುಧವಾರ (ಫೆ.19) ಶುರುವಾಗಲಿರುವ ಈ ಟೂರ್ನಿಯು ಮಾರ್ಚ್ 9 ರವರೆಗೆ ನಡೆಯಲಿದೆ. ಈ ಟೂರ್ನಿಯ ಮೊದಲ ಪಂದ್ಯದಲ್ಲಿ ಪಾಕಿಸ್ತಾನ್ ಹಾಗೂ ನ್ಯೂಝಿಲೆಂಡ್ ತಂಡಗಳು ಕಣಕ್ಕಿಳಿದ್ದು, ಟೀಮ್ ಇಂಡಿಯಾ ಫೆಬ್ರವರಿ 20 ರಿಂದ ಅಭಿಯಾನ ಆರಂಭಿಸಲಿದೆ. ಭಾರತ ತಂಡದ ಚಾಂಪಿಯನ್ಸ್ ಟ್ರೋಫಿ ವೇಳಾಪಟ್ಟಿ ಈ ಕೆಳಗಿನಂತಿದೆ...



**ಮೂರು ಪಂದ್ಯಗಳನ್ನು ದುಬೈನಲ್ಲೇ ಆಡಲಿದೆ**

ಫೆಬ್ರವರಿ 20 ರಂದು ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಯ 2ನೇ ಪಂದ್ಯದಲ್ಲಿ ಭಾರತ ತಂಡ ಕಣಕ್ಕಿಳಿಯಲಿದೆ. ಈ ಮ್ಯಾಚ್‌ನಲ್ಲಿ ಟೀಮ್ ಇಂಡಿಯಾದ ಎದುರಾಳಿ ಬಾಂಗ್ಲಾದೇಶ್ ತಂಡ. ಈ ಪಂದ್ಯಕ್ಕೆ ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂ ಆತಿಥ್ಯವಹಿಸಲಿದೆ. ಭಾರತ ತಂಡದ 2ನೇ ಎದುರಾಳಿ ಪಾಕಿಸ್ತಾನ್. ಹೈವೋಲ್ಟೇಜ್ ಪೈಪೋಟಿಗೆ ಸಾಕ್ಷಿಯಾಗಲಿರುವ ಈ ಪಂದ್ಯವು ಫೆಬ್ರವರಿ 23 ರಂದು ನಡೆಯಲಿದೆ. ಈ ಪಂದ್ಯ ಕೂಡ ದುಬೈ ಅಂತಾರಾಷ್ಟ್ರೀಯ ಸ್ಟೇಡಿಯಂನಲ್ಲೇ ಜರುಗಲಿದೆ. ಟೀಮ್ ಇಂಡಿಯಾ ತನ್ನ ಕೊನೆಯ ಲೀಗ್ ಮ್ಯಾಚ್‌ನಲ್ಲಿ ನ್ಯೂಝಿಲೆಂಡ್ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಮಾರ್ಚ್ 2 ರಂದು ದುಬೈನಲ್ಲೇ ನಡೆಯಲಿದೆ. ಅಂದರೆ ಮೊದಲ ಸುತ್ತಿನಲ್ಲಿ ಟೀಮ್ ಇಂಡಿಯಾ ಮೂರು ಪಂದ್ಯಗಳನ್ನು ದುಬೈನಲ್ಲೇ ಆಡಲಿದೆ. ಇದಾದ ಬಳಿಕ ಟೀಮ್ ಇಂಡಿಯಾ ಸೆಮಿಫೈನಲ್ ಮತ್ತು ಫೈನಲ್‌ಗೇರಿದರೆ ಮತ್ತೆರಡು ಪಂದ್ಯಗಳಲ್ಲಿ ಕಣಕ್ಕಿಳಿಯಲಿದೆ.

**ಚಾಂಪಿಯನ್ಸ್ ಟ್ರೋಫಿಗೆ ಭಾರತ ತಂಡ:** ರೋಹಿತ್ ಶರ್ಮಾ (ನಾಯಕ), ಶುಭ್‌ಮನ್ ಗಿಲ್, ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್, ಕೆಎಲ್ ರಾಹುಲ್, ರಿಷಭ್ ಪಂತ್, ಹಾರ್ದಿಕ್ ಪಾಂಡ್ಯ, ಅಕ್ಷರ್ ಪಟೇಲ್, ವಾಷಿಂಗ್ಟನ್ ಸುಂದರ್, ಕುಲದೀಪ್ ಯಾದವ್, ಹರ್ಷಿತ್ ರಾಣಾ, ಮೊಹಮ್ಮದ್. ಶಮಿ, ಅರ್ಷದೀಪ್ ಸಿಂಗ್, ರವೀಂದ್ರ ಜಡೇಜಾ, ವರುಣ್ ಚಕ್ರವರ್ತಿ.

# ಮೊದಲ 4 ಪಂದ್ಯಗಳಲ್ಲೇ ಆರ್‌ಸಿಬಿ ತಂಡಕ್ಕೆ ಅಗ್ನಿಪರೀಕ್ಷೆ

ಇಂಡಿಯನ್ ಪ್ರೀಮಿಯರ್ ಲೀಗ್‌ನ ಮೊದಲ ಸುತ್ತಿನಲ್ಲೇ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ತನ್ನ ಮೊದಲ ನಾಲ್ಕು ಪಂದ್ಯಗಳಲ್ಲಿ ಬಲಿಷ್ಠ ಟೀಮ್‌ಗಳನ್ನು ಎದುರಿಸಲಿದೆ. ಅಲ್ಲದೆ ಮೊದಲ ಸುತ್ತಿನಲ್ಲಿ ಆರ್‌ಸಿಬಿ ತವರಿನಲ್ಲಿ ಕೇವಲ ಮೂರು ಪಂದ್ಯಗಳನ್ನು ಮಾತ್ರ ಆಡಲಿದೆ.

ಹೀಗಾಗಿ ಆರ್‌ಸಿಬಿ ಪಾಲಿಗೆ ಆರಂಭಿಕ ಪಂದ್ಯಗಳು ಅಗ್ನಿಪರೀಕ್ಷೆ ಎನ್ನಬಹುದು. ಇಂಡಿಯನ್ ಪ್ರೀಮಿಯರ್ ಲೀಗ್ ಆರಂಭಕ್ಕೆ ಡೇಟ್ ಫಿಕ್ಸ್ ಆಗಿದೆ. ಈ ಬಾರಿಯ ಟೂರ್ನಿಯು ಮಾರ್ಚ್ 22 ರಿಂದ ಶುರುವಾಗಲಿದೆ. ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಹಾಲಿ ಚಾಂಪಿಯನ್ ಕೊಲ್ಕತ್ತಾ ನೈಟ್ ರೈಡರ್ಸ್ ತಂಡವನ್ನು ಎದುರಿಸಲಿದೆ. ಇದಾದ ಬಳಿಕ ಕೂಡ ಆರ್‌ಸಿಬಿ ಚಾಂಪಿಯನ್ ತಂಡಗಳನ್ನೇ ಎದುರಿಸಲಿದೆ. ಅಂದರೆ ಐಪಿಎಲ್‌ನಲ್ಲಿ ಚಾಂಪಿಯನ್ ಪಟ್ಟ ಅಲಂಕರಿಸಿದ ನಾಲ್ಕು ತಂಡಗಳ ವಿರುದ್ಧ ಆರ್‌ಸಿಬಿ ಮೊದಲ 4 ಪಂದ್ಯಗಳನ್ನಾಡಲಿದೆ. ಈ ನಾಲ್ಕು ಟೀಮ್‌ಗಳು ಕೂಡ ಬಲಿಷ್ಠ ಪಡೆ ಎಂಬುದು ವಿಶೇಷ. ಮಾರ್ಚ್ 22 ರಂದು ನಡೆಯಲಿರುವ ಮೊದಲ ಪಂದ್ಯದಲ್ಲಿ ಆರ್‌ಸಿಬಿ ತಂಡವು 2024ರ ಚಾಂಪಿಯನ್ ತಂಡ ಕೊಲ್ಕತ್ತಾ ನೈಟ್ ರೈಡರ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯಕ್ಕೆ ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನ ಆತಿಥ್ಯವಹಿಸಲಿದೆ. ಮಾರ್ಚ್ 28 ರಂದು ಜರುಗಲಿರುವ ತನ್ನ ಎರಡನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಚಾಂಪಿಯನ್ ಪಡೆ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಚೆನ್ನೈನ ಚೆಪಾಕ್ ಸ್ಟೇಡಿಯಂನಲ್ಲಿ ನಡೆಯಲಿದೆ.

ಏಪ್ರಿಲ್ 2 ರಂದು ನಡೆಯಲಿರುವ ಮೂರನೇ ಪಂದ್ಯದಲ್ಲಿ ಆರ್‌ಸಿಬಿ ತಂಡದ ಎದುರಾಳಿ 2022ರ ಚಾಂಪಿಯನ್ಸ್ ಗುಜರಾತ್ ಟೈಟಾನ್ಸ್.

ಈ ಪಂದ್ಯವು ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಜರುಗಲಿದೆ. ಏಪ್ರಿಲ್ 7 ರಂದು ನಡೆಯಲಿರುವ ತನ್ನ ನಾಲ್ಕನೇ ಮ್ಯಾಚ್‌ನಲ್ಲಿ ಆರ್‌ಸಿಬಿ ತಂಡ ಚಾಂಪಿಯನ್ಸ್ ಖ್ಯಾತಿಯ ಮುಂಬೈ ಇಂಡಿಯನ್ಸ್ ತಂಡವನ್ನು ಎದುರಿಸಲಿದೆ.

ಈ ಪಂದ್ಯ ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ನಡೆಯಲಿದೆ.

ಇನ್ನು ಆರ್‌ಸಿಬಿ ತಂಡವು ಏಪ್ರಿಲ್ 10 ರಂದು ಡೆಲ್ಲಿ ಕ್ಯಾಪಿಟಲ್ಸ್, ಏಪ್ರಿಲ್ 13 ರಂದು ರಾಜಸ್ಥಾನ್ ರಾಯಲ್ಸ್, ಏಪ್ರಿಲ್ 18 ರಂದು ಪಂಜಾಬ್ ಕಿಂಗ್ಸ್ ತಂಡಗಳನ್ನು ಎದುರಿಸಲಿದೆ.



# ಸಿಎಸ್‌ಕೆ ವಿರುದ್ಧದ ಪಂದ್ಯಕ್ಕೆ ಪಾಂಡ್ಯಗೆ ನಿಷೇಧ..!

**ಪಂದ್ಯದ ಶುಲ್ಕದ 25% ದಂಡ**



ಐಪಿಎಲ್ 2024 ರಲ್ಲಿ ಹಾರ್ದಿಕ್ ಪಾಂಡ್ಯ ನಾಯಕತ್ವದಲ್ಲಿ ಕಣಕ್ಕಿಳಿದಿದ್ದ ಮುಂಬೈ ಇಂಡಿಯನ್ಸ್ ತಂಡವು ಮೂರು ಪಂದ್ಯಗಳಲ್ಲಿ ಸ್ಲೋ ಓವರ್ ತಪ್ಪು ಮಾಡಿತ್ತು. ಇದೀಗ ಅದರ ಶಿಕ್ಷೆಯಾಗಿ ಐಪಿಎಲ್ 2025 ರ ಮೊದಲ ಪಂದ್ಯದಿಂದ ಪಾಂಡ್ಯ ಹೊರಗುಳಿಯಲಿದ್ದಾರೆ.

ಹೀಗಾಗಿ ಮಾರ್ಚ್ 23 ರಂದು ನಡೆಯಲಿರುವ ಪಂದ್ಯದಲ್ಲಿ ಹಾರ್ದಿಕ್ ಪಾಂಡ್ಯ ಕಾಣಿಸಿಕೊಳ್ಳುವುದಿಲ್ಲ. ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 18ರ ವೇಳಾಪಟ್ಟಿ ಬಿಡುಗಡೆಯಾಗಿದೆ. ಮಾರ್ಚ್ 22 ರಿಂದ ಶುರುವಾಗಲಿರುವ ಈ ಟೂರ್ನಿಯ ಮೊದಲ ಪಂದ್ಯದಲ್ಲಿ ಕೆಕೆಆರ್ ಮತ್ತು ಆರ್‌ಸಿಬಿ ತಂಡಗಳು ಮುಖಾಮುಖಿಯಾಗಲಿದೆ.

ಇನ್ನು ಮಾರ್ಚ್ 23 ರಂದು ನಡೆಯಲಿರುವ ಮೂರನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಸೆಣಸಲಿದೆ. ಆದರೆ ಈ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡದ ನಾಯಕ ಹಾರ್ದಿಕ್ ಪಾಂಡ್ಯ ಕಣಕ್ಕಿಳಿಯುವುದಿಲ್ಲ.

ಏಕೆಂದರೆ ಕಳೆದ ಸೀಸನ್‌ನಲ್ಲಿ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧದ ಕೊನೆಯ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ನಿಗದಿತ ಸಮಯದೊಳಗೆ 20 ಓವರ್‌ಗಳನ್ನು ಪೂರ್ಣಗೊಳಿಸಿರಲಿಲ್ಲ.

ಹೀಗಾಗಿ ನಾಯಕ ಹಾರ್ದಿಕ್ ಪಾಂಡ್ಯಗೆ 30 ಲಕ್ಷ ರೂ. ದಂಡ ಹಾಗೂ ಒಂದು ಪಂದ್ಯದ ನಿಷೇಧ ಹೇರಲಾಗಿದೆ.


ಈ ಒಂದು ಪಂದ್ಯದ ನಿಷೇಧದ ಶಿಕ್ಷೆ ಈ ಬಾರಿಯ ಐಪಿಎಲ್‌ನಲ್ಲಿ ಮುಂದುವರೆಯಲಿದೆ. ಅದರಂತೆ ಐಪಿಎಲ್ 2025 ರಲ್ಲಿ ಮುಂಬೈ ಇಂಡಿಯನ್ಸ್ ಆಡುವ ಮೊದಲ ಪಂದ್ಯದಿಂದ ನಾಯಕ ಹಾರ್ದಿಕ್ ಪಾಂಡ್ಯ ಹೊರಗುಳಿಯಬೇಕಾಗುತ್ತದೆ. ಹೀಗಾಗಿ ಮಾರ್ಚ್ 23 ರಂದು ನಡೆಯಲಿರುವ ಸಿಎಸ್‌ಕೆ ವಿರುದ್ಧದ ಮ್ಯಾಚ್‌ನಲ್ಲಿ ಪಾಂಡ್ಯ ಕಾಣಿಸಿಕೊಳ್ಳುವುದಿಲ್ಲ. ಐಪಿಎಲ್ ನಿಯಮದ ಪ್ರಕಾರ, ಪ್ರತಿ ತಂಡಗಳು 20 ಓವರ್‌ಗಳನ್ನು 1 ಗಂಟೆ 30 ನಿಮಿಷಗಳಲ್ಲಿ ಪೂರ್ಣಗೊಳಿಸಬೇಕು. ಒಂದು ವೇಳೆ ಇದಕ್ಕಿಂತ ಹೆಚ್ಚಿನ ಸಮಯ ತೆಗೆದುಕೊಂಡರೆ ಬೌಂಡರಿ ಲೈನ್‌ನಿಂದ ಒಬ್ಬ ಫೀಲ್ಡರ್‌ನನ್ನು ಕಡಿತ ಮಾಡಲಾಗುತ್ತದೆ. ಹಾಗೆಯೇ ಈ ತಪ್ಪನ್ನು ಮಾಡಿದ ತಂಡದ ನಾಯಕನಿಗೆ 12 ಲಕ್ಷ ರೂ. ದಂಡ ವಿಧಿಸಲಾಗುತ್ತದೆ. ಇದೇ ತಪ್ಪನ್ನು 2ನೇ ಬಾರಿ ಪುನರಾವರ್ತಿಸಿದರೆ, ನಾಯಕನಿಗೆ 24 ಲಕ್ಷ ರೂ. ದಂಡ ವಿಧಿಸಲಾಗುತ್ತದೆ. ಇದರ ಜೊತೆಗೆ ಪ್ಲೇಯಿಂಗ್ ಇಲೆವೆನ್‌ನ 10 ಆಟಗಾರರಿಗೆ ತಲಾ 6 ಲಕ್ಷ ಅಥವಾ ಪಂದ್ಯದ ಶುಲ್ಕದ 25% ದಂಡವನ್ನು ವಿಧಿಸಲಾಗುತ್ತದೆ.

# ಶಮಿಗೆ ಸಾಥ್ ನೀಡೋರು



ಬಾಂಗ್ಲಾದೇಶ ವಿರುದ್ಧದ ಆಡುವ 11ರ ಕ್ರಮಾಂಕದಲ್ಲಿ ಹರ್ಷಿತ್‌ಗೆ ಅವಕಾಶ ಸಿಗುವ ಸಾಧ್ಯತೆಗಳು ಬಹುತೇಕ ನಗಣ್ಯ ಎನ್ನಲಾಗುತ್ತಿದೆ. ಈಗ ಉದ್ಭವಿಸಿರುವ ಪ್ರಶ್ನೆ ಏನೆಂದರೆ ಹರ್ಷಿತ್ ರಾಣಾ ಬೆಂಚ್ ಕಾಯ್ದರೆ, ಮೊದಲ ಪಂದ್ಯದಲ್ಲಿ ಮೊಹಮ್ಮದ್ ಶಮಿಯ ಜೊತೆಗಾರ ಯಾರು ಎಂಬುದು. ಇದಕ್ಕೆ ಉತ್ತರ ಇಲ್ಲಿದೆ. ಫೆಬ್ರವರಿ 19 ರಿಂದ ಚಾಂಪಿಯನ್ಸ್ ಟ್ರೋಫಿಯ ಕದನ ಆರಂಭವಾಗಲಿದೆ. ಫೆಬ್ರವರಿ 20 ರಂದು ಬಾಂಗ್ಲಾದೇಶ ವಿರುದ್ಧ ಯುಎಇ ನೆಲದಲ್ಲಿ ಟೀಮ್ ಇಂಡಿಯಾ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ. ಜಸ್ಪ್ರೀತ್ ಬುಮ್ರಾ ಟೂರ್ನಿಯಿಂದ ಹೊರಗುಳಿದ ನಂತರ ಹರ್ಷಿತ್ ರಾಣಾ ಅವರನ್ನು ಬದಲಿ ಆಟಗಾರರನ್ನಾಗಿ ತಂಡಕ್ಕೆ ಸೇರಿಸಿಕೊಳ್ಳಲಾಗಿದೆ. ಹರ್ಷಿತ್ ರಾಣಾ ತಂಡಕ್ಕೆ ಬಂದಿರಬಹುದು, ಆದರೆ ಮೊದಲ ಪಂದ್ಯದಲ್ಲಿ ಅವರು ಬೆಂಚ್ ಕಾಯಬೇಕಾಗುತ್ತದೆ ಎಂದು ಹೇಳಲಾಗುತ್ತಿದೆ. ಪಿಟಿಐ ವರದಿಯ ಪ್ರಕಾರ, ಬಾಂಗ್ಲಾದೇಶ ವಿರುದ್ಧದ ಆಡುವ 11ರ ಕ್ರಮಾಂಕದಲ್ಲಿ ಹರ್ಷಿತ್‌ಗೆ ಅವಕಾಶ ಸಿಗುವ ಸಾಧ್ಯತೆಗಳು ಬಹುತೇಕ ನಗಣ್ಯ ಎನ್ನಲಾಗುತ್ತಿದೆ. ಮೊದಲ ಪಂದ್ಯದಲ್ಲಿ ಮೊಹಮ್ಮದ್ ಶಮಿಯ ಜೊತೆಗಾರ ಯಾರು ಎಂಬುದು. ಇದಕ್ಕೆ ಉತ್ತರ ಇಲ್ಲಿದೆ.

# ಭಾರತದ ಧ್ವಜ ಬಿಟ್ಟು 7 ದೇಶಗಳ ಧ್ವಜ ಹಾರಿಸಿದ ಪಾಕಿಸ್ತಾನ!



ಗಡಾಫಿ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ, ಭಾರತದ ತ್ರಿವರ್ಣ ಧ್ವಜ ಕಾಣೆಯಾಗಿರುವುದನ್ನು ಅಭಿಮಾನಿಗಳು ಗಮನಿಸಿದ್ದಾರೆ. ಅದೇ ಸಮಯದಲ್ಲಿ, ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾಗವಹಿಸುವ ಇತರೆ ಏಳು ತಂಡಗಳ ಧ್ವಜಗಳನ್ನು ಹಾರಿಸಲಾಯಿತು. ಅದೇ ವೀಡಿಯೊ ತಕ್ಷಣವೇ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ.

ಚಾಂಪಿಯನ್ಸ್ ಟ್ರೋಫಿಯಲ್ಲಿ ಬಿಸಿಸಿಐಮತ್ತು ಪಾಕಿಸ್ತಾನ ಕ್ರಿಕೆಟ್ ಮಂಡಳಿ ನಡುವಿನ ಸಂಘರ್ಷದಲ್ಲಿ ಈಗ ಹೊಸ ತಿರುವು ಕಂಡುಬಂದಿದೆ. ಐಸಿಸಿ ಚಾಂಪಿಯನ್ಸ್ ಟ್ರೋಫಿಯ ಆತಿಥೇಯ ಪಾಕಿಸ್ತಾನವು ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ಭಾರತದ ಧ್ವಜವನ್ನು ಹಾರಿಸಿಲ್ಲ. ಯಾವುದೇ ಪಂದ್ಯಾವಳಿಯ ಆತಿಥೇಯ ದೇಶವು ಎಲ್ಲಾ ತಂಡಗಳ ಧ್ವಜಗಳನ್ನು ಹಾರಿಸುವುದು ಕಡ್ಡಾಯವಾಗಿದೆ, ಆದರೆ ಇದರ ಹೊರತಾಗಿಯೂ, ಭಾರತೀಯ ಧ್ವಜವನ್ನು ಹೊರತುಪಡಿಸಿ ಎಲ್ಲಾ ಏಳು ದೇಶಗಳ ಧ್ವಜಗಳನ್ನು ಲಾಹೋರ್‌ನಲ್ಲಿ ಹಾರಿಸಲಾಗಿದೆ. ಪಿಸಿಬಿಯ ಈ ಹೇಯ ಕೃತ್ಯದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿದೆ.

**8ರ ಬದಲು ಏಳು**

ಎಂಟು ವರ್ಷಗಳ ನಂತರ ಚಾಂಪಿಯನ್ಸ್ ಟ್ರೋಫಿ ಮತ್ತೆ ಆರಂಭವಾಗುತ್ತಿದ್ದು, ಕಳೆದ 2017 ರಲ್ಲಿ ಪಾಕಿಸ್ತಾನ ಕೊನೆಯ ಆವೃತ್ತಿಯನ್ನು ಗೆದ್ದಿತ್ತು. ಹಾಲಿ ಚಾಂಪಿಯನ್ ತಂಡ ಆತಿಥೇಯ ರಾಷ್ಟ್ರವಾಗಿದ್ದು, ಬುಧವಾರ ಪ್ರಾರಂಭವಾಗಲಿರುವ ಎಂಟು ತಂಡಗಳ ಐಸಿಸಿ ಟೂರ್ನಮೆಂಟ್‌ಗೆ ಅವರು ಇತರ ಏಳು ತಂಡಗಳನ್ನು ಸ್ವಾಗತಿಸಲು ಸಿದ್ಧವಾಗಿದೆ. ಈ ಕಾರ್ಯಕ್ರಮಕ್ಕೂ ಮುನ್ನ, ಪಾಕಿಸ್ತಾನ ಸೇರಿದಂತೆ ಏಳು ತಂಡಗಳ ಧ್ವಜಗಳು ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ಕಂಡುಬಂದವು, ಆದರೆ ಭಾರತದ ಧ್ವಜ ಮಾತ್ರ ಕಾಣೆಯಾಗಿತ್ತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966